ನಿಮ್ಮೂರು ಸುದ್ದಿ

ಕನ್ನಡ ದಿನ ಪತ್ರಿಕೆ NIMMURU SUDDI

ಸಂಪಾದಕರು: ಸುಂದರ್ Editor : Sundar

ಏಕ ಕಾಲಕ್ಕೆ ಬಳ್ಳಾರಿ, ಕೊಪ್ಪಳ, ಯಾದಗಿರಿ, ರಾಯಚೂರು, ಕಲಬುರ್ಗಿ, ಬೀದರ, ವಿಜಯನಗರ ಜಿಲ್ಲೆಗಳಲ್ಲಿ ಪ್ರಕಟ

Volume: 01, Issue: 79 RNI Number : KNKAN/25/A2770 28-03-2026 Saturday Page 04, Price 2/- suddinimmuru@gmail.com Mob:-8660146563

ಸಂಪುಟ :01 ಸಂಚಿಕೆ :79 ರಾಯಚೂರು 28-03-2026 ಶನಿವಾರ ಪುಟ 04 ಬೆಲೆ ರೂ.2/- ಮೊ:8660146563

ಇಂದಿನಿಂದ ಪಂದ್ಯಾವಳಿ; ಸರ್ಕಾರದ ಷರತ್ತು, ಎಚ್ಚರಿಕೆ ನಿಯಮ ಕಟ್ಟುನಿಟ್ಟಾಗಿ ಪಾಲಿಸುವಂತೆ ಸೂಚನೆ

ಬೆಂಗಳೂರು,ಮಾ.27-

ನಾಳೆಯಿಂದ ಪಂದ್ಯಾವಳಿಗಳು ಆರಂಭವಾಗಲಿರುವ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ಅವರು ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸುರಕ್ಷತೆ ಕುರಿತಾಗಿ ಸುದೀರ್ಘ ಸಭೆ ನಡೆಸಿ ಸಲಹೆ, ಸೂಚನೆಗಳನ್ನು ನೀಡಿದರು.



ಕ್ರಿಕೆಟ್ ಪ್ರೇಮಿಗಳ ಸುರಕ್ಷತೆಗೆ ಕ್ರೀಡಾಂಗಣದ ಒಳಗೆ ಮತ್ತು ಕ್ರೀಡಾಂಗಣದ ಸುತ್ತ ರೂಪಿಸಿರುವ ಭದ್ರತಾ ವ್ಯವಸ್ಥೆ, ನಗರದ ಸಂಚಾರ ವ್ಯವಸ್ಥೆಯಲ್ಲಿ ಮಾಡಿಕೊಳ್ಳ ಲಾಗಿರುವ ಬದಲಾವಣೆಗಳು, ಪಾರ್ಕಿಂಗ್ ವ್ಯವಸ್ಥೆ, ಕ್ರೀಡಾಂಗಣದ ಒಳಗೆ ಕುಡಿಯುವ ನೀರು ಸೇರಿದಂತೆ ಇತರ ಅತ್ಯಾವಶ್ಯಕ ಸಂಗತಿಗಳ ಕುರಿತಾಗಿ ಮಾಹಿತಿ ಪಡೆದುಕೊಂಡರು.

ಮೆಟ್ರೋ ರೈಲಿನ ಮೇಲೆ ಬೀಳುವ ಪ್ರಯಾಣಿಕರ ಸಾಂದ್ರತೆ, ಮೆಟ್ರೋ ಸಂಚರಿಸುವ ವೇಳಾಪಟ್ಟಿ, ಮೆಟ್ರೋ ನಿಲ್ದಾಣಗಳಲ್ಲಿ ಮಾಡಿಕೊಳ್ಳಲಾಗಿರುವ ಹೆಚ್ಚುವರಿ ಭದ್ರತೆ, ಸುರಕ್ಷತೆ ಕುರಿತಾಗಿ ಅಧಿಕಾರಿಗಳಿಂದ ಮಾಹಿತಿ ಪಡೆದು ಸಣ್ಣ ಅಹಿತಕರ ಘಟನೆಗೂ ಅವಕಾಶ ಆಗದಂತೆ ಎಚ್ಚರಿಕೆ ವಹಿಸುವ ನಿಟ್ಟಿನಲ್ಲಿ ಹಲವು ಸೂಚನೆಗಳನ್ನು ನೀಡಿದರು.

ಪಂದ್ಯಾವಳಿ ಆಯೋಜನೆಗೆ ಸರ್ಕಾರ ವಿಧಿಸಿರುವ ಷರತ್ತುಗಳು ಮತ್ತು ಎಚ್ಚರಿಕೆಯ ನಿಯಮಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಸಭೆಯಲ್ಲಿ ಸೂಚನೆ ನೀಡಿದರು. ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಂಸ್ಥೆಗಳು ಹೈ ಅಲರ್ಟ್ ಆಗಿರಬೇಕು. ಆಯಾ ಕ್ಷಣದ ಮಾಹಿತಿಗಳನ್ನು ಮೇಲಿನ ಅಧಿಕಾರಿಗಳಿಗೆ ನಿಯಮಿತವಾಗಿ ವಿನಿಮಯ ಮಾಡಿಕೊಳ್ಳಬೇಕು ಎನ್ನುವ ಸೂಚನೆಗಳನ್ನು ನೀಡಿದರು.

ಸಭೆಯಲ್ಲಿ ಸಂಸ್ಥೆಯ ಆಡಳಿತ ಮಂಡಳಿ, ಪದಾಧಿಕಾರಿಗಳು, ಪದಾಧಿಕಾರಿಗಳು, ನಗರ ಪೊಲೀಸ್ ಆಯುಕ್ತರು, ಆಯುಕ್ತರು, ಮೆಟ್ರೋ ಸೇರಿದಂತೆ ಸಂಬಂಧಪಟ್ಟ ಇಲಾಖೆಗಳ ಮುಖ್ಯಸ್ಥರುಗಳು ಉಪಸ್ಥಿತರಿದ್ದರು.

ಅಧಿಕಾರಿಗಳು ಮತ್ತು ಸಂಸ್ಥೆಯ ಪದಾಧಿಕಾರಿಗಳೊಂದಿಗೆ ಸುರಕ್ಷತೆ ಕುರಿತಾಗಿ ಸುದೀರ್ಘ ಸಭೆ ನಡೆಸಿದ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿ ಶಾಲಿನಿ ರಜನೀಶ್ ( )

ಇದಕ್ಕೂ ಮೊದಲು ಕೆಎಸ್‌ಸಿಎ ಪದಾಧಿಕಾರಿಗಳು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿಯಾಗಿ ಚರ್ಚೆ ನಡೆಸಿದರು. ಸ್ಟೇಡಿಯಂನಲ್ಲಿ ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಮಾಹಿತಿ ನೀಡಿದರು. ಈ ವೇಳೆ ಸಿಎಂ ಸಿದ್ದರಾಮಯ್ಯ ಯಾವುದೇ ಅಹಿತಕರ ಘಟನೆ ನಡೆಯದಂತೆ ಎಚ್ಚರಿಕೆ ವಹಿಸಿ. ಯಾವುದೇ ಸಮಸ್ಯೆ ಆಗಬಾರದು ಎಂದು ಸಲಹೆ ಸೂಚನೆ ನೀಡಿದರು.

ಇಲ್ಲಿನ ಚಿನ್ನಸ್ವಾಮಿ ಕ್ರೀಡಾಂಗಣದಲ್ಲಿ ನಾಳೆ ನಡೆಯುವ ಐಪಿಎಲ್ ಉದ್ಘಾಟನಾ ಪಂದ್ಯಕ್ಕೆ ರಾಜ್ಯದ ಶಾಸಕರಿಗೆ ತಲಾ ಎರಡು ಟಿಕೆಟ್ ನೀಡಲು ಕರ್ನಾಟಕ ರಾಜ್ಯ ಕ್ರಿಕೆಟ್ ಸಂಸ್ಥೆ ನಿರ್ಧಾರ ತೆಗೆದುಕೊಂಡಿದೆ.

ಪ್ರತಿ ಶಾಸಕರಿಗೆ ಐಪಿಎಲ್ ಪಂದ್ಯಗಳ ನಾಲ್ಕು ಟಿಕೆಟ್ ನೀಡುವಂತೆ ಸದನದಲ್ಲಿ ಶುಕ್ರವಾರ ಶಾಸಕರು ಒತ್ತಾಯಿಸಿದ್ದರು. ಈ ಬೆನ್ನಲ್ಲೇ ಇಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ಇಂದು ಮಧ್ಯಾಹ್ನ ಕೆಎಸ್‌ಸಿಎ ಅಧ್ಯಕ್ಷ ವೆಂಕಟೇಶ್ ಪ್ರಸಾದ್ ಜೊತೆ ಸಭೆ ನಡೆಸಿದ ಬಳಿಕ ಈ ನಿರ್ಧಾರ ತೆಗೆದುಕೊಳ್ಳಲಾಗಿದೆ.

ಐಪಿಎಲ್ ಪಂದ್ಯಗಳಿಗೆ ಶಾಸಕರು ತಲಾ ನಾಲ್ಕು ಟಿಕೆಟ್‌ಗಳನ್ನು ನೀಡುವಂತೆ ಕೇಳಿದ್ದರು. ಆದರೆ, ನಾಳೆಯ ಪಂದ್ಯದ ಟಿಕೆಟ್‌ಗಳು ಈಗಾಗಲೇ ಮಾರಾಟವಾಗಿವೆ. ಆದ್ದರಿಂದ ಶಾಸಕರು, ಸಚಿವರು ಮತ್ತು ಸಂಸದರಿಗೆ ತಲಾ ಎರಡು ಟಿಕೆಟ್‌ಗಳನ್ನು ನಾಳೆಯ ಪಂದ್ಯಕ್ಕೆ ವ್ಯವಸ್ಥೆ ಮಾಡುವುದಾಗಿ ಭರವಸೆ ನೀಡಿದ್ದಾರೆ. ಎಂದು ಡಿಸಿಎಂ ಶಿವಕುಮಾರ್ ಅವರು ಸಭೆಯ ನಂತರ ಸುದ್ದಿಗಾರರಿಗೆ ತಿಳಿಸಿದರು.

ತುಂಗಭದ್ರಾ ನದಿಯಲ್ಲಿ ಸ್ನಾನಕ್ಕೆ ತೆರಳಿದ್ದ ಒಂದೇ ಕುಟುಂಬದ ನಾಲ್ವರು ದುರ್ಮರಣ



ರಾಯಚೂರು, ಮಾರ್ಚ್ 27: ತುಂಗಭದ್ರಾ ನದಿಯಲ್ಲಿ ಸ್ನಾನಕ್ಕೆ ತೆರಳಿದ್ದ ಒಂದೇ ಕುಟುಂಬದ ನಾಲ್ವರು ದುರ್ಮರಣ () ಹೊಂದಿರುವಂತಹ ಘಟನೆ ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನ ಕುರ್ಡಿ ಗ್ರಾಮದ ಬಳಿ ನಡೆದಿದೆ. ಉಮಾವತಿ(35), ರತ್ನ(24), ಮಹೇಶ್(28) ಮತ್ತು ಶಿವಾನಂದ(24) ಮೃತ ದುರ್ದೈವಿಗಳು. ಸದ್ಯ ಮರಣೋತ್ತರ ಪರೀಕ್ಷೆಗಾಗಿ ಕೋಸಗಿ ಆಸ್ಪತ್ರೆಗೆ ಶವಗಳ ಸ್ಥಳಾಂತರ ಮಾಡಲಾಗಿದೆ.

ನಡೆದಿದ್ದೇನು?

ಒಂದೇ ಕುಟುಂಬದವರು ಆಂಧ್ರಪ್ರದೇಶದ ಕೋಸಗಿ ತಾಲೂಕಿನ ರಾಜಲಬಂಡ ಅಣೆಕಟ್ಟಿನ ಕೊನೆ ಭಾಗದಲ್ಲಿರುವ ಸಾತುನೂರು ಗ್ರಾಮದ ಬಳಿಯ ತುಂಗಭದ್ರಾ ನದಿಗೆ ಮಧ್ಯಾಹ್ನ ಸ್ನಾನಕ್ಕೆ ತೆರಳಿದ್ದರು. ಈ ವೇಳೆ ತಗ್ಗು ಪ್ರದೇಶದಲ್ಲಿ ಸಿಲುಕಿ ನಾಲ್ವರ ಸಾವನ್ನಪ್ಪಿದ್ದಾರೆ. ಮೃತರನ್ನು ರಾಯಚೂರು ಜಿಲ್ಲೆಯ ಮಾನ್ವಿ ತಾಲೂಕಿನ ಕುರ್ಡಿ ಗ್ರಾಮದ ನಿವಾಸಿಗಳು ಎಂದು ಗುರುತಿಸಲಾಗಿದೆ. ಆಂಧ್ರಪ್ರದೇಶದ ಕೋಸಗಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

ಬಿಸಿಲಿನ ತಾಪ ಹೆಚ್ಚಳ: ಬೀದಿ ಗೋವುಗಳ ರಕ್ಷಣೆಗಾಗಿ ಶಿವಸೇನಾ ಯುವಸೇನಾ ಮನವಿ




ರಾಯಚೂರು,ಮಾ.27-

ನಗರದ ಡಾ. ಬಿ.ಆರ್. ಅಂಬೇಡ್ಕರ್ ವೃತ್ತದಲ್ಲಿ ಭೀಮ್ ಆರ್ಮಿ ವತಿಯಿಂದ ಭೀಮ್ ದೀಕ್ಷಾ ಕಾರ್ಯಕ್ರಮದ ಅಂಗವಾಗಿ ಪೋಸ್ಟರ್ ಬಿಡುಗಡೆ ಮಾಡಲಾಗಿದ್ದು, ಜೋಗುಲಾಂಬ ಗದ್ವಾಲ್ ಜಿಲ್ಲೆಯಲ್ಲಿ ನಡೆಯಲಿರುವ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿ ಸುವಂತೆ ಸಾರ್ವಜನಿಕರಿಗೆ ಕರೆ ನೀಡಲಾಯಿತು.

ಭೀಮ್ ಆರ್ಮಿ ಜಿಲ್ಲಾ ಅಧ್ಯಕ್ಷರಾದ ಪ್ರಾವೀಣ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ನಡೆದ ಈ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಭೀಮ್ ದೀಕ್ಷಾ (ಜ್ಞಾನ ದೀಕ್ಷಾ) ಕಾರ್ಯಕ್ರಮವು ಸಮಾಜದ ಜಾಗೃತಿ, ಶೈಕ್ಷಣಿಕ ಅಭಿವೃದ್ಧಿ ಹಾಗೂ ಸಂಘಟನಾ ಬಲವರ್ಧನೆಗೆ ಮಹತ್ವದ ಹೆಜ್ಜೆಯಾಗಿದ್ದು, ಡಾ. ಬಿ.ಆರ್. ಅಂಬೇಡ್ಕರ್ ಅವರ ಚಿಂತನೆಗಳನ್ನು ಸಮಾಜದಲ್ಲಿ ಬಲಪಡಿಸುವ ಉದ್ದೇಶ ಹೊಂದಿದೆ ಎಂದು ಹೇಳಿದರು.

3 ನೇ ಪುಟಕ್ಕೆ

ಹಾಳಜಾಡಲದಿನ್ನಿಯಲ್ಲಿ ಗೈರಾಣು ಭೂಮಿ ಒತ್ತುವರಿ ತೆರವಿಗೆ ಆಗ್ರಹ



ಅರಕೇರಾ,ಮಾ.27-

ತಾಲೂಕಿನ ಹಾಳಜಾಡಲದಿನ್ನಿ ಗ್ರಾಮದಲ್ಲಿ ಅತಿಕ್ರಮಣ ಮಾಡಿರುವ ಸರ್ಕಾರಿ ಗಾಯರಾಣು ಭೂಮಿಯನ್ನು ತೆರವುಗೊಳಿಸಿ ಗ್ರಾಮದ ಅಭಿವೃದ್ಧಿಗೆ ತಕ್ಷಣ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿ ತಹಸೀಲ್ ಕಚೇರಿ ಮುಂದೆ ಗ್ರಾಮದ ಪ್ರಮುಖರು ಪ್ರತಿಭಟನೆ ನಡೆಸಿದರು.

ತಹಸೀಲ್ದಾರ್ ಅಮರೇಶ ಬಿರಾದಾರ್‌ಗೆ ಶುಕ್ರವಾರ ಮನವಿ ಸಲ್ಲಿಸಿ, ಸುಮಾರು 50 ಎಕರೆ ಸರ್ಕಾರಿ ಗಾಯರಾಣು ಭೂಮಿ ಅಕ್ರಮವಾಗಿ ಕೆಲವು ಖಾಸಗಿ ವ್ಯಕ್ತಿಗಳಿಂದ ಅತಿಕ್ರಮಣಗೊಂಡಿದೆ. ಈ ಭೂಮಿಯನ್ನು ಅತಿಕ್ರಮಿಸಿಕೊಂಡಿರುವವರು ನಿರ್ಗತಿಕರು ಅಥವಾ ಭೂಹೀನರು ಅಲ್ಲ. ಇವರು ಆರ್ಥಿಕವಾಗಿ ಸ್ಥಿತಿವಂತರಾಗಿದ್ದು, ಈಗಾಗಲೇ ಸಾಕಷ್ಟು ಭೂಮಿ ಹಾಗೂ ಸ್ವಂತ ಮನೆಗಳನ್ನು ಹೊಂದಿದ್ದಾರೆ. ಆದರೂ, ಸರ್ಕಾರಿ ಭೂಮಿಯನ್ನು ಕಬಳಿಸಿಕೊಂಡು, ಸಾರ್ವಜನಿಕ ಹಕ್ಕುಗಳನ್ನು ಕಸಿದುಕೊಳ್ಳುತ್ತಿದ್ದಾರೆ ಎಂದು ದೂರಿದರು.

ಗ್ರಾಮಸ್ಥರು ಈ ಅಕ್ರಮವನ್ನು ಪ್ರಶ್ನಿಸಿದಾಗ, ಅತಿಕ್ರಮಣಕಾರರು ಬೆದರಿಕೆ ಹಾಕುವುದು, ಯಾರಿಗೆ

3 ನೇ ಪುಟಕ್ಕೆ

ರಾಯಚೂರು ಜಿಲ್ಲೆಯಲ್ಲಿ ಪೆಟ್ರೋಲ್, ಡೀಸೆಲ್‌ಗೆ ಯಾವುದೇ ಕೊರತೆಯಿಲ್ಲ



ರಾಯಚೂರು ಮಾ.27

ರಾಯಚೂರು ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡಿಸೆಲ್ ಕೊರತೆಯಿಲ್ಲ ಮತ್ತು ಬೇಡಿಕೆಯನ್ನು ಪೂರೈಸಲು ಸಾಕಷ್ಟು ಸರಬರಾಜು ಲಭ್ಯವಿದೆ ಎಂದು ಜಿಲ್ಲಾಧಿಕಾರಿಗಳಾದ ನಿತೀಶ್ ಕೆ ಅವರು ತಿಳಿಸಿದ್ದಾರೆ.

ರಾಯಚೂರು ಜಿಲ್ಲೆಯಲ್ಲಿ ಕಳೆದೆರಡು ದಿನಗಳಿಂದ ಪೆಟ್ರೋಲ್ ಪಂಪ್‌ಗಳಲ್ಲಿ ಅಸಾಮಾನ್ಯ ಜನದಟ್ಟಣೆ ಕಂಡುಬದಿದ್ದು, ನಾಗರಿಕರು ಪೆಟ್ರೋಲ್ ಹಾಗೂ ಡೀಸೆಲ್ ಖರೀದಿಯಲ್ಲಿ ಆತಂಕಗೊಂಡಿದ್ದಾರೆ. ಈ ನಿಟ್ಟಿನಲ್ಲಿ ಜಿಲ್ಲಾಡಳಿತವು ರಾಯಚೂರಿನಲ್ಲಿ ಕಾರ್ಯನಿರ್ವಹಿಸುತ್ತಿರುವ ರಾಷ್ಟ್ರಿಯ ತೈಲ ಕಂಪನಿಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿದ್ದು, ಅವರ ಮಾಹಿತಿಯ ಆಧಾರದ ಮೇಲೆ ಜಿಲ್ಲೆಯಲ್ಲಿ ಪೆಟ್ರೋಲ್ ಹಾಗೂ ಡೀಸೆಲ್ ಯಾವುದೇ

3 ನೇ ಪುಟಕ್ಕೆ

ಮಹಿಳಾ ಪರಿಷತ್ ವತಿಯಿಂದ ಅರ್ಥಪೂರ್ಣವಾಗಿ ಜರುಗಿದ ಮಹಿಳಾ ದಿನಾಚರಣೆ

ರಾಯಚೂರು,ಮಾ.27-

ಮಹಿಳಾ ಪರಿಷತ್ ವತಿಯಿಂದ ಮಹಿಳಾ ದಿನಾಚರಣೆ ಅಂಗವಾಗಿ ವೀರಶೈವ ವಸತಿ ನಿಲಯದ ವಿದ್ಯಾರ್ಥಿನಿಯರಿಗೆ ವಿವಿಧ ಸ್ಪರ್ಧೆಗಳು ಮಹಿಳಾ ದಿನಾಚರಣೆಯನ್ನು ನಗರದ ವೀರಶೈವ ವಸತಿ ನಿಲಯದಲ್ಲಿ ಅರ್ಥಪೂರ್ಣವಾಗಿ ಗುರುವಾರ ಆಯೋಜಿಸಲಾಗಿತ್ತು ಕಾರ್ಯಕ್ರಮವು ಅದ್ದೂರಿಯಾಗಿ ಯಶಸ್ವಿಯಾಯಿತು.



ತುಳಸಿ ಗಿಡಕ್ಕೆ ನೀರರೆದು, ವಚನಗಳ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿದ ಹಿರಿಯ ಸಾಹಿತಿಗಳಾದ ರಾಜಶ್ರೀ ಕಲ್ಲೂರ್ಕರ್ ಅವರು ಮಾತನಾಡಿ, ಹಿಂದಿನ ಕಾಲದ ಮಹಿಳೆಯರಿಗಿಂತ ಇಂದಿನ ಮಹಿಳೆಯರಿಗೆ ಸಾಮಾಜಿಕ, ಸಾಹಿತ್ಯ ಹಾಗೂ ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ಮುಂದುವರಿಯಲು ಹೆಚ್ಚಿನ ಅವಕಾಶಗಳು ಲಭ್ಯವಾಗಿವೆ ಎಂದು ಹೇಳಿದರು. 12ನೇ ಶತಮಾನದಲ್ಲೇ ಅಕ್ಕಮಹಾದೇವಿಯವರು ಮಹಿಳೆಯರು ಸಾಧನೆ ಮಾಡಬಹುದು ಎಂಬುದನ್ನು ತೋರಿಸಿ ಕೊಟ್ಟಿದ್ದು, ಇಂದಿನ ಯುವತಿಯರು ಆ ಅವಕಾಶಗಳನ್ನು ಸದುಪಯೋಗಪಡಿಸಿಕೊಳ್ಳಬೇಕು ಎಂದರು. ಮೊಬೈಲ್ ಬಳಕೆಯಲ್ಲಿ ಒಳಿತು-ಕೆಡುಕು ಎರಡೂ ಇದ್ದು, ಒಳಿತನ್ನೇ ಅಳವಡಿಸಿಕೊಳ್ಳಬೇಕು ಹಾಗೂ ಸ್ವಯಂ ಸುರಕ್ಷತೆ ಬಗ್ಗೆ ಜಾಗೃತಿ ಹೊಂದಿರಬೇಕು ಎಂದು ಸಲಹೆ ನೀಡಿದರು.

ಹಿರಿಯ ಸಾಹಿತಿ ಲಕ್ಷ್ಮೀದೇವಿ ಶಾಸ್ತ್ರಿ ಅವರು ತಮ್ಮ ಜೀವನಾ ನುಭವ ಹಂಚಿಕೊಂಡು, ಮಹಿಳೆಯರು ಅನೇಕ ಅಡೆತಡೆಗಳ ನಡುವೆಯೂ ಶಿಕ್ಷಣ ಪಡೆದು ಸಾಧನೆ ಮಾಡಬೇಕು ಎಂದು ತಿಳಿಸಿದರು. ಜಿಲ್ಲೆಯ ಮಹಿಳೆಯರು ವಿವಿಧ ಕ್ಷೇತ್ರಗಳಲ್ಲಿ ಮುಂದೆ ಬರುತ್ತಿರುವುದು ಸಂತೋಷದ ವಿಚಾರವಾಗಿದ್ದು, ಇನ್ನಷ್ಟು ಮಹಿಳೆಯರು ಸಾಹಿತ್ಯ ಸೇರಿದಂತೆ ಹಲವಾರು ಕ್ಷೇತ್ರಗಳಲ್ಲಿ ಗುರುತಿಸಿಕೊಳ್ಳಬೇಕು ಎಂದು ಹೇಳಿದರು.

ಮಹಿಳಾ ಪರಿಷತ್ತಿನ ಜಿಲ್ಲಾ ಅಧ್ಯಕ್ಷರಾದ ಬಸಮ್ಮ ಹಿರೇಮಠ ಅವರು ಸಂಸ್ಥೆಯ ಬೆಳವಣಿಗೆ, ಉದ್ದೇಶಗಳು ಹಾಗೂ ಭವಿಷ್ಯದ ಕಾರ್ಯಕ್ರಮಗಳ ಬಗ್ಗೆ ಪ್ರಾಸ್ತಾವಿಕವಾಗಿ ವಿವರಿಸಿದರು. ಡಾ. ಭಾರತಿ ಬಸವರಾಜ್ ಅವರು ಆರೋಗ್ಯದ ಮಹತ್ವವನ್ನು ತಿಳಿಸಿ, ಯಾವುದೇ ಕಾಯಿಲೆಗಳಿದ್ದರೂ ಭಯಪಡದೆ ವೈದ್ಯರನ್ನು ಸಂಪರ್ಕಿಸಿ ಚಿಕಿತ್ಸೆ ಪಡೆಯಬೇಕು ಎಂದು ಸಲಹೆ ನೀಡಿದರು.

ಹಿರಿಯರಾದ ದಾನಮ್ಮ ಅವರು ಮಹಿಳಾ ಪರಿಷತ್ತಿನ ಕಾರ್ಯ ಗಳನ್ನು ಶ್ಲಾಘಿಸಿ, ಮಹಿಳೆಯರ ಅಭಿವೃದ್ಧಿಗಾಗಿ ಇನ್ನಷ್ಟು ಕಾರ್ಯ ಕ್ರಮಗಳನ್ನು ಒಟ್ಟಾಗಿ ನಡೆಸೋಣ ಎಂದು ಅಭಿಪ್ರಾಯಪಟ್ಟರು.

ಮಹಿಳಾ ಪರಿಷತ್ತಿನ ಸಂಸ್ಥಾಪಕ ಅಧ್ಯಕ್ಷ ಅಣ್ಣಪ್ಪ ಮೇಟಿಗೌಡ ಅವರು ಮಾತನಾಡಿ, ವಸತಿ ನಿಲಯಗಳಲ್ಲಿ ಕಾರ್ಯಕ್ರಮಗಳನ್ನು ಆಯೋಜಿಸುವುದರಿಂದ ಯುವ ಘಟಕವನ್ನು ಬಲಪಡಿಸುವುದು ಉದ್ದೇಶವಾಗಿದೆ ಎಂದು ತಿಳಿಸಿದರು. ಜಿಲ್ಲೆಯ ಮಹಿಳೆಯರು ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಗುರುತಿಸಿಕೊಳ್ಳುವಂತೆ ಮಾಡುವ ದೃಷ್ಟಿಯಿಂದ ಕಾರ್ಯಗಳನ್ನು ಕೈಗೊಳ್ಳಲಾಗುತ್ತಿದ್ದು, ಮುಂದಿನ ದಿನಗಳಲ್ಲಿ ರಾಯಚೂರು ಜಿಲ್ಲೆಯಲ್ಲಿ ರಾಜ್ಯಮಟ್ಟದ ಮಹಿಳಾ ಸಮಾವೇಶ ಆಯೋಜಿಸುವ ಗುರಿಯಿದೆ ಎಂದರು.

ರಾಜ್ಯ ಪ್ರಧಾನ ಕಾರ್ಯದರ್ಶಿ ಅರುಣಾ ಹಿರೇಮಠ ಅವರು ವಸತಿ ನಿಲಯವನ್ನು ತಮ್ಮ ಮನೆ ಎಂದು ಭಾವಿಸಿ ಶಿಸ್ತುಬದ್ಧವಾಗಿ ಓದಬೇಕು ಹಾಗೂ ಸ್ಪರ್ಧೆಗಳಲ್ಲಿ ಸಕ್ರಿಯವಾಗಿ ಭಾಗವಹಿಸಬೇಕು ಎಂದು ಹೇಳಿದರು.

3 ನೇ ಪುಟಕ್ಕೆ



ಉತ್ತರ ಕರ್ನಾಟಕ ಸ್ನೇಹ ಲೋಕ ಟ್ರಸ್ಟ್ ವತಿಯಿಂದ ಕುಡಿಯುವ ನೀರಿನ ಸ್ಟೀಲ್ ಟ್ಯಾಂಕ್ ದೇಣಿಗೆ

ಅರಕೇರಾ,ಮಾ.27-

ತಾಲೂಕಿನ ಬಿ.ಗಣೇಕಲ್ ಗ್ರಾಮದ ಶ್ರೀ ವಿದ್ಯಾಭಾರತಿ ಹಿರಿಯ ಪ್ರಾಥಮಿಕ ಶಾಲೆಗೆ ಉತ್ತರ ಕರ್ನಾಟಕ ಸ್ನೇಹ ಲೋಕ ಟ್ರಸ್ಟ್ (ರಿ) ಬೆಂಗಳೂರು ವತಿಯಿಂದ 200 ಲೀಟರ್ ಸಾಮರ್ಥ್ಯವುಳ್ಳ ಕುಡಿಯುವ ನೀರಿನ ಸ್ಟೀಲ್ ಟ್ಯಾಂಕನ್ನು ಶಾಲೆಗೆ ದೇಣಿಗೆ ನೀಡಿದರು.

ಯುಕೆಎಸ್ ಎಲ್ ಟ್ರಸ್ಟ್ ನ ಕಾರ್ಯದರ್ಶಿಯಾದ ಪ್ರಕಾಶ ರಾಜಗೋಳಿ ರವರು ಇಂತಹ ಹಿಂದುಳಿದ ಪ್ರದೇಶದಲ್ಲಿ 20 ವರ್ಷಗಳಿಂದ ಮಕ್ಕಳಿಗೆ ಶಿಕ್ಷಣ ನೀಡುತ್ತಿರುವುದು ಮಹತ್ವದ ಕಾರ್ಯವಾಗಿದ್ದು ಗ್ರಾಮೀಣ ಭಾಗದಲ್ಲಿ ಶಿಕ್ಷಣ ನೀಡುವುದು ಬಹಳ ಕಷ್ಟಕರ ಆದರೆ ಒಬ್ಬ ರೈತ ಅನಕ್ಷರಸ್ಥರಾದ ಹಂಪಣ್ಣ ಪಲ್ಲೇದ್ ಅವರು ತಮ್ಮ ಜೀವನವನ್ನು ಶಿಕ್ಷಣಕ್ಕಾಗಿ ಮುಡಿಪು ಇಟ್ಟಿದ್ದು ಶ್ಲಾಘನೀಯ ಎಂದು ಅಭಿಪ್ರಾಯ ವ್ಯಕ್ತಪಡಿಸಿದ್ದರು.

ಯುಕೆಎಸ್‌ಎಲ್ ಟ್ರಸ್ಟಿಗಳಾದ ದೀಪಕ್ ಆಲೂರ್ ರವರು ಮಕ್ಕಳಿಗೆ ನೋಟ್ ಬುಕ್ ಗಳು, ಪೆನ್ನು,

3 ನೇ ಪುಟಕ್ಕೆ

11ರಂದು ವೀರಶೈವ ಲಿಂಗಾಯತ ಸಮಾಜದ ಹೊಸ ಆಡಳಿತ ಮಂಡಳಿಯ ಚುನಾವಣೆ

ಸಿಂಧನೂರು,ಮಾ.26-

ತಾಲೂಕು ವೀರಶೈವ ಲಿಂಗಾಯತ ಸಮಾಜದ ಮುಂದಿನ ಐದು ವರ್ಷಗಳಿಗೆ. ಹೊಸ ಆಡಳಿತ ಮಂಡಳಿ ಆಯ್ಕೆ ಮಾಡುವ ಹಿನ್ನೆಲೆಯಲ್ಲಿ. ಏಪ್ರಿಲ್ 11 2026. ರಂದು ಚುನಾವಣೆ ನಡೆಸಲು ನಿರ್ಧರಿಸಲಾಗಿದೆ ಎಂದು ತಾಲೂಕು ಘಟಕದ ಅಧ್ಯಕ್ಷ. ಪಂಪನಗೌಡ ತಾವರಗೇರಾ. ತಿಳಿಸಿದರು ನಗರದ ಪತ್ರಿಕಾ ಭವನದಲ್ಲಿ ಗುರುವಾರ ಸುದ್ದಿಗೋಷ್ಠಿಯಲ್ಲಿ ಅವರು ಮಾತನಾಡಿದರು. 1991ರಲ್ಲಿ ವೀರಶೈವ ಲಿಂಗಾಯತ ಸಮಾಜ ಸ್ಥಾಪನೆಯಾಗಿದ್ದು. ಇದುವರೆಗೂ ಚುನಾವಣೆ ಆಗಿಲ್ಲ.

3 ನೇ ಪುಟಕ್ಕೆ

ಶ್ರೀರಾಮನವಮಿ ಆಚರಣೆ ಆದರ್ಶ ಪುರುಷ ಶ್ರೀರಾಮ ಆದರ್ಶಗಳನ್ನು ಮೈಗೂಡಿಸಿಕೊಳ್ಳೋಣ - ಜೆ. ಶರಣಪ್ಪಗೌಡ

ಸಿರವಾರ, ಮಾ.27-

ಶ್ರೀರಾಮನಂತಹ ಸಮರ್ಥ ಮಹಾರಾಜ, ಆಡಳಿತಗಾರ, ಮಗ, ಪತಿ, ಆದರ್ಶ ಪುರುಷ, ಸತ್ಯವಂತ ಈ ಜಗದಲ್ಲಿ ಹುಟ್ಟಲು ಸಾಧ್ಯವಿಲ್ಲ, ಅವರ ಆದರ್ಶಗಳನ್ನು ಎಲ್ಲಾರೂ ಅಳವಡಿಸಿಕೊಳಬೇಕು ಎಂದು ಹಿರಿಯ ಮುಖಂಡ ಜೆ.ಶರಣಪ್ಪಗೌಡ ಅಭಿಪ್ರಾಯ ಪಟ್ಟರು.



ಪಟ್ಟಣದ ಬಸ್ ನಿಲ್ದಾಣದ ಮುಂದಿನ ಬಸವ ಕಾಂಪ್ಲೆಕ್ಸ್ ಹತ್ತಿರ ಹಮ್ಮಿಕೊಳ್ಳಲಾದ ಸೀತಾಪತಿ ಶ್ರೀರಾಮಚಂದ್ರ ಅವರ ಜನ್ಮದಿನದ ಅಂಗವಾಗಿ ಶ್ರೀರಾಮ ನವಮಿ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಶ್ರೀರಾಮನ ಸದ್ಗುಣಗಳು ಇಂದಿನ ಯುವಕರಿಗೆ ದಾರಿದೀಪ, ಅವರ ತತ್ವ ಆದರ್ಶಗಳನ್ನು ಜೀವನದಲ್ಲಿ ಅಳವಡಿಸಿಕೊಳ್ಳಬೇಕು ಎಂದರು. ಅಯ್ಯನಗೌಡ ಏರಡ್ಡಿ, ,ಜಿ.ಲೋಕರಡ್ಡಿ, ಪ.ಪಂ ಮುಖ್ಯಾಧಿಕಾರಿ ಸುರೇಶ ಶೆಟ್ಟಿ,ರಮೇಶ ದರ್ಶನಕರ್ ನರಸಿಂಹರಾವ್ ಕುಲಕರ್ಣಿ ಮಾತನಾಡಿದರು.

ಕಾರ್ಯಕ್ರಮದಲ್ಲಿ ಶ್ರೀರಾಮ ನವಮಿಯ ವಿಶೇಷ ಪಾನಕ ವಿತರಣೆ ಮಾಡಲಾಯಿತು.

ಪ.ಪಂ ಅಧಿಕಾರಿ ಸುನೀತಾ ಸಜ್ಜನ, ಕೃಷ್ಣಾಜಿರಾವ್ ಸೂರ್ಯವಂಶಿ, ಜೆ ಬಸವರಾಜ ಪಾಟೀಲ, ಸಂದೀಪ ಪಾಟೀಲ ,ಮಾಣಿಕಯ್ಯ ಶೆಟ್ಟಿ, ಎಂ ನಿಂಬೆಯ್ಯ ಸ್ವಾಮಿ, ಪತ್ತಾರ ನಾಗಪ್ಪ, ಗಣೇಕಲ್

3 ನೇ ಪುಟಕ್ಕೆ

ಸಾಣಾಪೂರ ಕೆರೆಯಲ್ಲಿ ಎನ್.ಡಿ.ಆರ್.ಎಫ್ ತಂಡದಿಂದ ವಿಪತ್ತು ನಿರ್ವಹಣೆಯ ಅಣುಕು ಪ್ರದರ್ಶನ

ವಿಪತ್ತು ಸಂದರ್ಭಗಳಲ್ಲಿ ಪ್ರತಿಯೊಬ್ಬರ ಪಾತ್ರವು ಮುಖ್ಯ- ಡಿಸಿ



ಬಳ್ಳಾರಿ,ಮಾ.27-

ಸಂಭವನೀಯ ಅತೀವೃಷ್ಟಿ, ಅನಾವೃಷ್ಟಿ, ಪ್ರವಾಹ, ನೈಸರ್ಗಿಕ ವಿಪತ್ತು ಸಂದರ್ಭಗಳಲ್ಲಿ ಪ್ರತಿಯೊಬ್ಬರ ಪಾತ್ರವು ಮುಖ್ಯವಾಗಿದೆ ಎಂದು ಜಿಲ್ಲಾಧಿಕಾರಿ ಡಾ. ಸುರೇಶ ಬಿ. ಇಟ್ನಾಳ ಹೇಳಿದರು.

ಅವರು ಗುರುವಾರ ಕೊಪ್ಪಳ ಜಿಲ್ಲೆಯ ಗಂಗಾವತಿ ತಾಲ್ಲೂಕಿನ ಸಾಣಾಪೂರ ಕೆರೆ ವ್ಯಾಪ್ತಿ ಪ್ರದೇಶದಲ್ಲಿ ಎನ್.ಡಿ.ಆರ್.ಎಫ್ ತಂಡ ಮತ್ತು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಅಗ್ನಿಶಾಮಕ ಇಲಾಖೆ ಹಾಗೂ ಇತರೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ (ಎನ್.ಡಿ.ಆರ್.ಎಫ್) ಬೆಟಾಲಿಯನ್ 10ನೇ ತಂಡದಿಂದ ವಿಪತ್ತು ನಿರ್ವಾಹಣೆಯ ಅಣುಕು ಪ್ರದರ್ಶನ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಯಾವುದೇ ವಿಕೋಪ ಸಂದರ್ಭದಲ್ಲಿ ಮುಂಜಾಗ್ರತೆ ವಹಿಸಿದರೆ ಸಾವಿರಾರು ಜನರ ಜೀವಗಳು ಉಳಿಯುತ್ತವೆ. ಹಾಗಾಗಿ ವಿಪತ್ತು ಸಂದರ್ಭಗಳಲ್ಲಿ ಸ್ಥಳೀಯ ಆಡಳಿತ, ವಿವಿಧ ಇಲಾಖೆಗಳು ಹಾಗೂ ಸಾರ್ವಜನಿಕರು ತಮ್ಮ ಪಾತ್ರವನ್ನು ಅರ್ಥೈಸಿಕೊಳ್ಳುವುದೊಂದಿಗೆ ವಿಪತ್ತು ಸಂದರ್ಭದಲ್ಲಿ ಅಗತ್ಯ ಮುಂಜಾಗ್ರತೆ ವಹಿಸುವುದು ತುಂಬಾ ಅತ್ಯವಶ್ಯಕವಾಗಿದೆ ಮತ್ತು ಇದು ಎಲ್ಲರ ಆದ್ಯ ಕರ್ತವ್ಯವೂ ಸಹ ಆಗಿದೆ. ಈ ಉದ್ದೇಶದಿಂದ ಪ್ರಸಕ್ತ ಸಾಲಿನ ಸಂಭವನೀಯ ಅತೀವೃಷ್ಟಿ, ಪ್ರವಾಹದಿಂದ ಹಾನಿಗೊಳಗಾಗುವ ಪ್ರದೇಶಗಳಲ್ಲಿ ನೈಸರ್ಗಿಕ ವಿಪತ್ತು ಸಮಯದಲ್ಲಿ ಸಂಭವಿಸಬಹುದಾದ ಹಾನಿಯಿಂದ ಜನರು ರಕ್ಷಣೆ ಪಡೆಯುವುದು ಹೇಗೆ ಎಂಬುವುದರ ಕುರಿತಾಗಿ ಎನ್.ಡಿ.ಆರ್.ಎಫ್ ತಂಡದಿಂದ ಅಣುಕು ಪ್ರದರ್ಶನದ ಮೂಲಕ ವಿಶೇಷ ಜಾಗೃತಿ ಮೂಡಿಸಲಾಗುತ್ತಿದೆ. ಪ್ರವಾಹ, ಅಗ್ನಿ ಅವಘಡ, ಗ್ಯಾಸ್ ಸಿಲಿಂಡರ್ ಸ್ಫೋಟ ಸೇರಿದಂತೆ ಇತರೆ ಪ್ರಕೃತಿ ವಿಕೋಪ ಸಂದರ್ಭದಲ್ಲಿ ವಹಿಸಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಮಾಹಿತಿಯನ್ನು ಎಲ್ಲರೂ ಸರಿಯಾಗಿ ತಿಳಿದುಕೊಂಡು ಇದನ್ನು ತಮ್ಮ ಅಕ್ಕ-ಪಕ್ಕದವರಿಗೂ ತಿಳಿಸಬೇಕೆಂದರು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ ಅವರು ಮಾತನಾಡಿ, ಜಿಲ್ಲೆಯ ಎಲ್ಲಾ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳಿಗೆ ವಿಪತ್ತು ನಿರ್ವಹಣೆಯ ಸಲುವಾಗಿ ವಿವಿಧ ತರಬೇತಿ ಕಾರ್ಯಗಳನ್ನು ಕಾಲಾನುಕ್ರವಾಗಿ ಹಮ್ಮಿಕೊಳ್ಳಲಾಗುತ್ತಿದೆ. ವಿಪತ್ತನ್ನು ಎದುರಿಸಲು ಜಿಲ್ಲಾ ಪೊಲೀಸ್ ಸದಾ ಸಿದ್ದವಾಗಿದೆ ಮತ್ತು ಸರ್ವ ರೀತಿಯಲ್ಲಿ ವಿಪತ್ತು ನಿರ್ವಹಣಾ ಕಾರ್ಯಕ್ಷಮತೆಯನ್ನು ನಮ್ಮ ಇಲಾಖೆ ಹೊಂದಿದೆ ಎಂದು ಹೇಳಿದರು.

ಎನ್.ಡಿ.ಆರ್.ಎಫ್ ಡೆಪ್ಯುಟಿ ಕಮಾಂಡೆಂಟ್ ಅಖೀಲ್ ಕುಮಾರ್ ಚೌಬೆ ಅವರು ಮಾತನಾಡಿ, ರಾಷ್ಟ್ರೀಯ ವಿಪತ್ತು ನಿರ್ವಹಣಾ ಪಡೆ ಬೆಟಾಲಿಯನ್ 10ನೇ ತಂಡವು ಸಂಭವನೀಯ ವಿಪತ್ತು, ಪ್ರವಾಹ ಸ್ಥಳಗಳಿಗೆ ಆಗಮಿಸಿ ಅಲ್ಲಿ ಸಮುದಾಯ ಜಾಗೃತಿ ಕಾರ್ಯಕ್ರಮ ಮಾಡುತ್ತಿದೆ. ಸಂಭವನೀಯ ಅತೀವೃಷ್ಟಿ, ಅನಾವೃಷ್ಟಿ, ಪ್ರವಾಹ, ನೈಸರ್ಗಿಕ ವಿಪತ್ತು ಉಂಟಾಗಬಹುದಾಗ ಪ್ರದೇಶಗಳಲ್ಲಿ ಸಾರ್ವಜನಿಕರಿಗೆ ಮತ್ತು ವಿಶೇಷವಾಗಿ ವಿದ್ಯಾರ್ಥಿಗಳಿಗೆ ಅರಿವು ಮೂಡಿಸಲಾಗುತ್ತಿದೆ ಎಂದರು.

ಅಣುಕು ಪ್ರದರ್ಶನ ಮೂಲಕ ಪ್ರಕೃತಿ ವಿಕೋಪ, ಮಾನವ ನಿರ್ಮಿತ ವಿಕೋಪ, ಅನಿಲ ಸೋರಿಕೆ ತಡೆಗಟ್ಟುವಿಕೆ, ಸುನಾಮಿ, ಭೂಕಂಪ, ಅಗ್ನಿ ಅವಘಡ ಹಾಗೂ ಸಿಡಿಲು ಬಡಿತದಿಂದ ರಕ್ಷಣೆ ಸೇರಿದಂತೆ ಪ್ರಕೃತಿ ವಿಕೋಪ ಸಂದರ್ಭದಲ್ಲಿ ಸಾರ್ವಜನಿಕರು ಯಾವ ರೀತಿ ಮುಂಜಾಗೃತೆ ಕ್ರಮ ಕೈಗೊಳ್ಳಬೇಕು ಮತ್ತು ಇದರ ಜೊತೆಗೆ ರಕ್ತಸ್ರಾವ ತಡೆಗಟ್ಟುವ ಬಗ್ಗೆ, ಹೃದಯಘಾತ ಸಂದರ್ಭದಲ್ಲಿ ತಕ್ಷಣ ಕೈಗೊಳ್ಳಬೇಕಾದ ಕ್ರಮ, ಗಂಟಲಿನಲ್ಲಿ ಸಿಕ್ಕಿಕೊಂಡ ವಸ್ತುಗಳ ಹೊರ ತೆಗೆಯುವುಕೆ (ಎಫ್.ಪಿ.ಎ.ಓ), ಹಾವು ಮತ್ತು ಇತರೆ ಪ್ರಾಣಿ ಕಡಿತದಿಂದ ಯಾವ ರೀತಿ ರಕ್ಷಣೆ ಮಾಡಿಕೊಳ್ಳಬೇಕೆಂಬುವುದು ಪ್ರತಿಯೊಬ್ಬರು ತಿಳಿದುಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ತಿಳಿಸಿದರು.

ಎನ್‌ಡಿಆರ್‌ಎಫ್ ತಂಡದ ಸದಸ್ಯರು ಅಪಘಾತ, ಹೃದಯಾಘಾತ, ಭೂಕಂಪ, ಗುಡುಗು ಮತ್ತು ಸಿಡಿಲು, ಪ್ರವಾಹ, ಅಗ್ನಿ ಅವಘಡ ಸಂದರ್ಭದಲ್ಲಿ ವಹಿಸಬೇಕಾದ ಮುಂಜಾಗ್ರತಾ ಕ್ರಮಗಳ ಅಣುಕು ಪ್ರದರ್ಶನವನ್ನು ಸಾರ್ವಜನಿಕರು ಹಾಗೂ ಶಾಲಾ-ಕಾಲೇಜುಗಳ ಮಕ್ಕಳಿಗೆ ಸವಿವರವಾದ ಮಾಹಿತಿ ನೀಡಿದರು. ಜಿಲ್ಲೆಯಲ್ಲಿ ಎರಡು ದಿನಗಳ ಕಾಲ ಯಶಸ್ವಿಯಾಗಿ ನಡೆದ ಎನ್.ಡಿ.ಆರ್.ಎಫ್ ತಂಡದ ವಿಪತ್ತು ನಿರ್ವಾಹಣೆಯ ಅಣುಕು ಪ್ರದರ್ಶನ ಕಾರ್ಯಕ್ರಮದ ನೇತೃತ್ವವನ್ನು ಕೊಪ್ಪಳ ಉಪ ವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ ಮಾಲಗಿತ್ತಿ ಅವರು ವಹಿಸಿದ್ದರು.

ಕಾರ್ಯಕ್ರಮದಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್.ಹೇಮಂತ್ ಕುಮಾರ್, ಜಿಲ್ಲಾ ಅಗ್ನಿಶಾಮಕ ಅಧಿಕಾರಿ ರಾಮಪ್ಪ, ಗಂಗಾವತಿ ತಹಶೀಲ್ದಾರ ವಿಶ್ವನಾಥ ಮುರಡಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ ಸಹಾಯಕ ನಿರ್ದೇಶಕ ವಿಠ್ಠಲ್ ಜಾಬಗೌಡರ ಸೇರಿದಂತೆ ಗಂಗಾವತಿ ತಾಲ್ಲೂಕು ಪಂಚಾಯತ್, ಸಾಣಾಪೂರ ಗ್ರಾ.ಪಂ ಮತ್ತು ಇತರೆ ವಿವಿಧ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ಹಾಗೂ ಇತರರು ಉಪಸ್ಥಿತರಿದ್ದರು.



ವಿಕಲಚೇತನರಿಗೆ 62 ಲಕ್ಷ ರೂ. ಮೌಲ್ಯದ ಸಾಧನ ವಿತರಣೆ

ಕಲಬುರಗಿ,ಮಾ.27-


ಹೌಸಿಂಗ್ ಆಂಡ್ ಅರ್ಬನ್ ಡೆವಲಪ್‌ಮೆಂಟ್ ಕಾರ್ಪೋರೇಶನ್ ಲಿಮಿಟೆಡ್ () ಸಂಸ್ಥೆಯ ಸಿ.ಎಸ್.ಆರ್ ಯೋಜನೆಯಡಿ ಅಲಿಂಕೋ () ಘಟಕ ಕಲಬುರಗಿ, ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಹಾಗೂ ಜಿಲ್ಲಾ ಅಂಗವಿಕಲರ ಪುನರ್ವಸತಿ ಕೇಂದ್ರ ()ಗಳ ಸಹಯೋಗದಲ್ಲಿ ವಿಕಲಚೇತನರಿಗೆ ಸಾಧನ ಸಲಕರಣೆ ವಿತರಣಾ ಕಾರ್ಯಕ್ರಮವನ್ನು ಗುರುವಾರ ಹಮ್ಮಿಕೊಳ್ಳಲಾಯಿತು.

ನಗರದ ಅಲಿಂಕೋ ಘಟಕ ಹಾಗೂ ಡಿ.ಡಿ.ಆರ್.ಸಿ ಕೇಂದ್ರ ಟ್ರಾಮಾ ಕೇರ್ ಸೆಂಟರ್ ನೆಲಮಹಡಿಯಲ್ಲಿ ನಡೆದ ಕಾರ್ಯಕ್ರಮಕ್ಕೆ ಜಿಲ್ಲಾಧಿಕಾರಿ ಫೌಝಿಯಾ ತರನ್ನುಮ್ ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭಂವರ್ ಸಿಂಗ್ ಮೀನಾ ಚಾಲನೆ ನೀಡಿದರು.

ಈ ಸಂದರ್ಭದಲ್ಲಿ ಜಿಲ್ಲೆಯ ವಿವಿಧ ತಾಲೂಕಿನ 104 ವಿಕಲಚೇತನ ಫಲಾನುಭವಿಗಳಿಗೆ ವಿವಿಧ ಬಗೆಯ ಸುಮಾರು 62 ಲಕ್ಷ ರೂ. ಮೌಲ್ಯದ ಸಾಧನ ಸಲಕರಣೆಗಳನ್ನು ವಿತರಿಸಲಾಯಿತು.

ಈ ಸಂದರ್ಭದಲ್ಲಿ ಕಲಬುರಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಸಾಧಿಕ ಹುಸೇನ್ ಖಾನ್, ವೈದ್ಯಕೀಯ ಅಧೀಕ್ಷಕ ಡಾ.ಶಿವಕುಮಾರ. ಆರ್, ಡಾ. ರಾಜಶೇಖರ ಮಾಲಿಪಾಟೀಲ್, ಡಾ.ನಿಶ್ಯಾಂತ ಪಾಣಿಗಾಂವ, ಡಿಡಿಆರ್‌ಸಿ ಕಾರ್ಯದರ್ಶಿ ಅಬ್ದುಲ್ ವಾಹಿದ್ ಮುನಿರ್, ಅಲಿಂಕೋ ಸಂಸ್ಥೆಯ ಸಿಬ್ಬಂದಿ ಅಭಿಷೇಕಕುಮಾರ, ಆನಂದ ಮತ್ತು ಡಿ.ಡಿ.ಆರ್.ಸಿ ಕಚೇರಿಯ ಸಿಬ್ಬಂದಿಗಳು, ವಿಕಲಚೇತನ ಕ್ಷೇತ್ರದಲ್ಲಿ ಕಾರ್ಯನಿರ್ವಸುತ್ತಿರುವ ಸ್ವಯಂ ಸೇವಾ ಸಂಸ್ಥೆಗಳ ಅಧ್ಯಕ್ಷರು/ಕಾರ್ಯದರ್ಶಿಗಳು ಹಾಗೂ ಕಲಬುರಗಿ ಜಿಲ್ಲೆಯ ವಿವಿಧ ತಾಲೂಕಿನ ಎಂ.ಆರ್.ಡಬ್ಲ್ಯೂ ಅವರು ಉಪಸ್ಥಿತರಿದ್ದರು.

ವಿಶೇಷಚೇತನರ ವಸತಿ ಶಾಲೆಗಳ ಎಸೆಸೆಲ್ಸಿ ಫಲಿತಾಂಶ ಹೆಚ್ಚಿಸಲು ಕಟ್ಟುನಿಟ್ಟಿನ ಸೂಚನೆ



ಕಲಬುರಗಿ,ಮಾ.27-

ಜಿಲ್ಲೆಯ ವಿಶೇಷಚೇತನರ ವಸತಿ ಶಾಲೆಗಳಲ್ಲಿನ ಎಸೆಸೆಲ್ಸಿ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶವನ್ನು ಉತ್ತಮಗೊಳಿಸುವ ನಿಟ್ಟಿನಲ್ಲಿ ಕಟ್ಟುನಿಟ್ಟಿನ ಕ್ರಮಗಳನ್ನು ಕೈಗೊಳ್ಳುವಂತೆ ಜಿಲ್ಲಾ ಅಂಗವಿಕಲರ ಕಲ್ಯಾಣಾ ಧಿಕಾರಿ ಸಾದಿಕ್ ಹುಸೇನ್ ಖಾನ್ ವಾರ್ಡನ್‌ಗಳು ಹಾಗೂ ಶಿಕ್ಷಕರಿಗೆ ಸೂಚನೆ ನೀಡಿದ್ದಾರೆ.

ವೀಡಿಯೋ ಸಂವಾದ ಸಭೆಯಲ್ಲಿ ಮಾತನಾಡಿದ ಅವರು, ಇಲಾಖೆಯ ಸರ್ಕಾರಿ ಅಂಧಬಾಲಕರ ಶಾಲೆ, ಜಿಲ್ಲಾ ಪಂಚಾಯತ್ ಅನುದಾನಿತ ಅಂಧ ಮತ್ತು ಶ್ರವದೋಷವುಳ್ಳ ವಿದ್ಯಾರ್ಥಿಗಳ ವಸತಿ ಶಾಲೆಗಳು ಹಾಗೂ ಶಿಶುಕೇಂದ್ರೀಕೃತ ಮತ್ತು ಶಾಲೆಗಳಲ್ಲಿನ ಹತ್ತನೇ ತರಗತಿ ವಿದ್ಯಾರ್ಥಿಗಳಿಗೆ ವಿಶೇಷವಾಗಿ ರಾತ್ರಿ ತರಗತಿಗಳನ್ನು ನಡೆಸುವ ಮೂಲಕ ಅವರ ವಿದ್ಯಾಭ್ಯಾಸದ ಗುಣಮಟ್ಟವನ್ನು ಹೆಚ್ಚಿಸಬೇಕೆಂದು ತಿಳಿಸಿದರು.

ಎಲ್ಲಾ ವಾರ್ಡನ್‌ಗಳು ಕಡ್ಡಾಯವಾಗಿ ವಸತಿ ನಿಲಯಗಳಲ್ಲಿ ವಾಸ್ತವ್ಯವಿರಬೇಕು ಎಂದು ಸೂಚಿಸಿದ ಅವರು, ಪ್ರತಿದಿನ ಬೆಳಗ್ಗೆ ಮತ್ತು ರಾತ್ರಿ ವಿದ್ಯಾರ್ಥಿಗಳು ಓದುತ್ತಿರುವ ದೃಶ್ಯಗಳನ್ನು ಜಿಪಿಎಸ್ ಸೌಲಭ್ಯ ಹೊಂದಿದ ಫೋಟೋ ರೂಪದಲ್ಲಿ ದಾಖಲಿಸಿ ವಾಟ್ಸ ಪ್ ಮೂಲಕ ಕಳುಹಿಸುವುದನ್ನು ಕಡ್ಡಾಯಗೊಳಿಸಿದರು.

ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ಹೆಚ್ಚಿನ ಆದ್ಯತೆ ನೀಡಬೇಕು ಹಾಗೂ ಪರೀಕ್ಷಾ ಫಲಿತಾಂಶ ಸುಧಾರಣೆಗೆ ಅಗತ್ಯ ಕ್ರಮಗಳನ್ನು ತಕ್ಷಣ ಜಾರಿಗೆ ತರಬೇಕು ಎಂದು ಅವರು ಖಡಕ್ ಎಚ್ಚರಿಕೆ ನೀಡಿದರು.

ವಿಜಯನಗರ ಎ.14ರಂದು ಅಂಬೇಡ್ಕರ ಬಾಬು ಜಗಜೀವನರಾಂ ಜಯಂತಿ ಆಚರಣೆ: ಡಿಸಿ ಕವಿತಾ ಮನ್ನಿಕೇರಿ

ವಿಜಯನಗರ,ಮಾ.27-

ಹಸಿರು ಕ್ರಾಂತಿಯ ಹರಿಕಾರ ಹಾಗೂ ಮಾಜಿ ಉಪ ಪ್ರಧಾನಿ ಡಾ. ಬಾಬು ಜಗಜೀವನರಾಂ ಅವರ 119ನೇ ಜಯಂತಿ ಹಾಗೂ ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತಿಯನ್ನು ಏಪ್ರಿಲ್ 14ರಂದು ವಿಜೃಂಭಣೆಯಿಂದ ಹಾಗೂ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ನಡೆದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಜಿಲ್ಲೆಯಾದ್ಯಂತ ಮಹನೀಯರ ಜಯಂತಿಯನ್ನು ಹಬ್ಬದ ರೀತಿಯಲ್ಲಿ ಆಚರಿಸಲು ತೀರ್ಮಾನಿಸಲಾಗಿದೆ ಎಂದರು.

ಎ.5ರಂದು ಡಾ. ಬಾಬು ಜಗಜೀವನರಾಂ ಅವರ ಜಯಂತಿಯನ್ನು ಸಾಂಕೇತಿಕವಾಗಿ ಜಿಲ್ಲಾಧಿಕಾರಿ ಕಚೇರಿಯಲ್ಲಿ ಆಚರಿಸಲಾಗುವುದು. ಬಳಿಕ ಎ.14ರಂದು ಅಂಬೇಡ್ಕರ್ ಹಾಗೂ ಬಾಬು ಜಗಜೀವನರಾಂ ಜಯಂತಿಗಳನ್ನು ಭವ್ಯವಾಗಿ ಆಚರಿಸಲು ಸಭೆಯಲ್ಲಿ ನಿರ್ಧರಿಸಲಾಯಿತು.

ಜಿಲ್ಲಾ ಕೇಂದ್ರ ಸೇರಿದಂತೆ ಎಲ್ಲಾ ತಾಲ್ಲೂಕು ಕೇಂದ್ರಗಳಲ್ಲಿ ಸರ್ಕಾರದ ಶಿಷ್ಟಾಚಾರದಂತೆ ಕಾರ್ಯಕ್ರಮಗಳನ್ನು ಆಯೋಜಿಸಿ, ಆಹ್ವಾನ ಪತ್ರಿಕೆ ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು. ನಗರದ ಪ್ರಮುಖ ವೃತ್ತಗಳನ್ನು ವಿದ್ಯುತ್ ದೀಪಗಳಿಂದ ಅಲಂಕರಿಸಬೇಕು. ಜಯಂತಿ ಕೇವಲ



ಮೆರವಣಿಗೆಗೆ ಸೀಮಿತವಾಗದೆ, ಯುವಜನತೆಗೆ ಮಹನೀಯರ ಆದರ್ಶಗಳು, ಸಂವಿಧಾನಾತ್ಮಕ ಮೌಲ್ಯಗಳು ಹಾಗೂ ಕೃಷಿ-ಆಡಳಿತ ಸುಧಾರಣೆಗಳ ಕುರಿತು ಅರಿವು ಮೂಡಿಸಲು ಉಪನ್ಯಾಸಗಳು, ಪ್ರಬಂಧ ಮತ್ತು ಭಾಷಣ ಸ್ಪರ್ಧೆಗಳು ಶಾಲಾ-ಕಾಲೇಜುಗಳಲ್ಲಿ ಕಡ್ಡಾಯವಾಗಿ ಆಯೋಜಿಸಬೇಕು ಎಂದು ಸೂಚಿಸಿದರು.

ಜಯಂತಿಯ ಅಂಗವಾಗಿ ಹಂಪಿಯಿಂದ ಭವ್ಯ ಜ್ಯೋತಿ ತರಲಾಗುತ್ತದೆ. ಬಳ್ಳಾರಿ ರಸ್ತೆಯ ಜೈಭೀಮ್ ವೃತ್ತದಲ್ಲಿ ಜ್ಯೋತಿ ಹಸ್ತಾಂತರದೊಂದಿಗೆ ಮೆರವಣಿಗೆಗೆ ಚಾಲನೆ ನೀಡಲಾಗುವುದು. ಮೆರವಣಿಗೆಯು ಜೈಭೀಮ್ ವೃತ್ತ, ಮಸೀದಿ ವೃತ್ತ, ಪುಣ್ಯಮೂರ್ತಿ ವೃತ್ತ ಹಾಗೂ ಪುನೀತ್ ರಾಜ್ ಕುಮಾರ್ ವೃತ್ತ ಮಾರ್ಗವಾಗಿ ಅಂಬೇಡ್ಕರ್ ವೃತ್ತದವರೆಗೆ ಸಾಗಲಿದೆ. ವಿವಿಧ ಕಲಾ ತಂಡಗಳು ಮೆರವಣಿಗೆಯಲ್ಲಿ ಭಾಗವಹಿಸಲಿವೆ.

ಕಾರ್ಯಕ್ರಮ ಶಾಂತಿಯುತವಾಗಿ ಹಾಗೂ ಸೌಹಾರ್ದಯುತವಾಗಿ ನಡೆಯಲು ಎಲ್ಲರೂ ಸಹಕರಿಸಬೇಕು. ದಲಿತ ಮತ್ತು ಪ್ರಗತಿಪರ ಸಂಘಟನೆಗಳೊಂದಿಗೆ ಸಮನ್ವಯ ಸಾಧಿಸಿ ಕಾರ್ಯಕ್ರಮ ಯಶಸ್ವಿಗೊಳಿಸಲಾಗುವುದು ಎಂದು ಅವರು ಹೇಳಿದರು.

ಜಯಂತಿಯಂದು ಪರಿಶಿಷ್ಟ ಜಾತಿ ಹಾಗೂ ಪರಿಶಿಷ್ಟ ಪಂಗಡದ ಎಸ್‌ಎಸ್‌ಎಲ್‌ಸಿ ಮತ್ತು ಪಿಯುಸಿ ಪ್ರತಿಭಾನ್ವಿತ ವಿದ್ಯಾರ್ಥಿಗಳು ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರನ್ನು ಸನ್ಮಾನಿಸಲಾಗುವುದು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್. ಜಾಹ್ನವಿ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಂಜುನಾಥ್, ಅಪರ ಜಿಲ್ಲಾಧಿಕಾರಿ ಇ. ಬಾಲಕೃಷ್ಣ, ಪೊಲೀಸ್ ಉಪಾಧೀಕ್ಷಕ ಡಾ. ಮಂಜುನಾಥ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ವೈ.ಎ. ಕಾಳೆ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

ಗ್ರಾಹಕರು ಉತ್ಪನ್ನದ ವಿವರಗಳನ್ನು ಪರಿಶೀಲಿಸಿ, ಸರಿಯಾದ ಉತ್ಪನ್ನ ಖರೀದಿಸಬೇಕು: ನ್ಯಾ.ಮಹಾಂತೇಶ ದರಗದ್

ಕೊಪ್ಪಳ,ಮಾ.27-

ಗ್ರಾಹಕರು ಖರೀದಿಸುವ ಪ್ರತಿಯೊಂದು ಉತ್ಪನ್ನದ ಮೇಲೆ ಇರುವ ತಯಾರಿಕಾ ದಿನಾಂಕ, ಉತ್ಪನ್ನದ ಬಳಕೆಯ ಅವಧಿ ಹಾಗೂ ಗುಣಮಟ್ಟದ ಗುರುತು ಸೇರಿದಂತೆ ಉತ್ಪನ್ನದಲ್ಲಿ ಬಳಸಲಾದ ಪದಾರ್ಥಗಳನ್ನು ಪರಿಶೀಲಿಸಿ, ಸರಿಯಾದ ಉತ್ಪನ್ನಗಳನ್ನು ಖರೀದಿಸಬೇಕು ಎಂದು ಹಿರಿಯ ಸಿವಿಲ್ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಮಹಾಂತೇಶ ಎಸ್. ದರಗದ್ ಅವರು ಹೇಳಿದರು.

ಅವರು ಗುರುವಾರದಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ ಹಾಗೂ ಭಾರತರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯ, ಕೊಪ್ಪಳ ಇವರುಗಳ ಸಂಯುಕ್ತ ಆಶ್ರಯದಲ್ಲಿ ಕಾನೂನು ಮಹಾವಿದ್ಯಾಲಯದಲ್ಲಿ ಆಯೋಜಿಸಲಾದ ವಿಶ್ವ ಗ್ರಾಹಕರ ದಿನಾಚರಣೆ-2026 ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಗ್ರಾಹಕರು ಖರೀದಿ ಮಾಡುವ ಪ್ರತಿಯೊಂದು ಉತ್ಪನ್ನವೂ ಗುಣಮಟ್ಟದಿಂದ ಕೂಡಿರುವ ಬಗ್ಗೆ ಹಾಗೂ ಸುರಕ್ಷಿತವಾಗಿರುವ ಬಗ್ಗೆ ಖಚಿತಪಡಿಸಿಕೊಳ್ಳಬೇಕು. ಯಾವುದೇ ಮೋಸ, ತಪ್ಪು ತೂಕ, ಅವಧಿ ಮೀರಿದ ವಸ್ತುಗಳ ವಿರುದ್ಧ ತಕ್ಷಣ ದೂರು ನೀಡುವ ಜಾಗೃತಿ ಬೆಳೆಸಿಕೊಳ್ಳಬೇಕು. ಎಂಆರ್‌ಪಿ ಗಿಂತ ಹೆಚ್ಚಾಗಿ ಹಣ ವಸೂಲಿ ಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲು ಗ್ರಾಹಕರು ಮುಂದೆ ಬರಬೇಕು. ಜೊತೆಗೆ ಪ್ರಜ್ಞಾವಂತರಾದ ವಿದ್ಯಾರ್ಥಿಗಳು ಮತ್ತು ಇಂದಿನ ಯುವಕರು ತಮ್ಮ ಸುತ್ತಮುತ್ತಲಿನಲ್ಲಿ ನಡೆಯುವ ಅನ್ಯಾಯದ ವಿರುದ್ಧ ಧ್ವನಿ ಎತ್ತಬೇಕು. ಅಂದಾಗ ಮಾತ್ರ ದೇಶ ಬದಲಾವಣೆ ಕಾಣಲು ಸಾಧ್ಯ. ಭಾರತದಲ್ಲಿ ''ಗ್ರಾಹಕ ಸಂರಕ್ಷಣಾ ಕಾಯ್ದೆ 2019'' ಜಾರಿಗೆ ಬಂದಿರುವುದರಿಂದ ಗ್ರಾಹಕರಿಗೆ ಹೆಚ್ಚಿನ ರಕ್ಷಣೆಯಿದೆ. ಮೋಸ, ತಪ್ಪು ಜಾಹೀರಾತು ಹಾಗೂ ಕಳಪೆ ಉತ್ಪನ್ನಗಳ ವಿರುದ್ಧ ದೂರು ಸಲ್ಲಿಸಿ ನ್ಯಾಯ ಪಡೆಯಲು ಈ ಕಾಯ್ದೆ ಸಹಕಾರಿಯಾಗಿದೆ ಎಂದು ಹೇಳಿದರು.



ಕೊಪ್ಪಳದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ಜಿ.ಇ.ಸೌಭಾಗ್ಯಲಕ್ಷ್ಮೀ ಅವರು ಮಾತನಾಡಿ, ಮಾರುಕಟ್ಟೆಯಲ್ಲಿ ದೊರೆಯುವ ಪ್ರತಿಯೊಂದು ಉತ್ಪನ್ನವೂ ಸುರಕ್ಷತಾ ಮಾನದಂಡಗಳಿಗೆ ಅನುಗುಣವಾಗಿರಬೇಕು. ಗ್ರಾಹಕರು ತಾವು ಬಳಸುವ ವಸ್ತುಗಳ ಬಗ್ಗೆ ಭಯಮುಕ್ತರಾದಾಗ ಮಾತ್ರ ಸದೃಢ ಆರ್ಥಿಕತೆ ನಿರ್ಮಾಣವಾಗಲು ಸಾಧ್ಯ. ಸುರಕ್ಷಿತ ಉತ್ಪನ್ನಗಳು, ಆತ್ಮವಿಶ್ವಾಸದ ಗ್ರಾಹಕರು ಎಂಬ ಘೋಷವಾಕ್ಯ ಕುರಿತು ಮತ್ತು ಕಾನೂನಿನ ಕುರಿತು ಅರಿವು ಮೂಡಿಸಿದರು.

ಕೊಪ್ಪಳದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ ಸದಸ್ಯರಾದ ರಾಜು ಎನ್. ಮೇತ್ರಿ ಅವರು ಮಾತನಾಡಿ, ಖರೀದಿಸುವ ಪ್ರತಿ ವಸ್ತುಗಳಲ್ಲಿ ಸಿದ್ದಪಡಿಸಿದ ದಿನಾಂಕ ಮತ್ತು ಎಷ್ಟು ದಿನಗಳ ಕಾಲ ಬಳಸಬಹುದು ಎಂಬುದನ್ನು ಗ್ರಾಹಕರು ತಿಳಿದಿರಬೇಕು. ಮಾರಾಟ ಮಾಡುವವರು ವಸ್ತುಗಳ ನಿಖರ ಮಾಹಿತಿ ನೀಡಬೇಕು. ಲಾಭದ ಆಸೆಗೆ ಮನಬಂದಂತೆ ವ್ಯಾಪಾರ ಮಾಡಬಾರದು. ಅಂತಹ ಅನ್ಯಾಯ ನಿಮ್ಮ ಕಣ್ಣಮುಂದೆ ಕಂಡುಬಂದರೆ ಅದರ ವಿರುದ್ಧ ಪ್ರಶ್ನೆ ಮಾಡಬೇಕು ಎಂದರು.

ವಿಶೇಷ ಉಪನ್ಯಾಸಕರಾಗಿ ಆಗಮಿಸಿದ್ದ ಕೊಪ್ಪಳ ನ್ಯಾಯವಾದಿಗಳಾದ ಸಾವಿತ್ರಿ ಮುಜುಮದಾರ ಅವರು ಮಾತನಾಡಿ, ಗ್ರಾಹಕ ಸಂರಕ್ಷಣಾ ಕಾಯ್ದೆ 2019 ಕುರಿತು ಮತ್ತು ನಕಲಿ ಮತ್ತು ಅಪಾಯಕಾರಿ ಉತ್ಪನ್ನಗಳು, ಡಿಜಟಲ್ ಮೋಸ, ಕಾನೂನುಗಳ ಕೊರತೆ, ಗ್ರಾಮೀಣ ಭಾರತದ ಸವಾಲುಗಳ ಕುರಿತು ವಿಶೇಷ ಉಪನ್ಯಾಸ ನೀಡಿದರು.

ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕರು ಹಾಗೂ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಜಿಲ್ಲಾ ವ್ಯವಸ್ಥಾಪಕರಾದ ವಿಶ್ವನಾಥಗೌಡ ಎಂ.ಎನ್ ಅವರು ಪ್ರಾಸ್ತಾವಿಕವಾಗಿ ಮಾತನಾಡಿದರು.

ಈ ಸಂದರ್ಭ ಕೊಪ್ಪಳದ ಭಾರತರತ್ನ ಶ್ರೀ ಅಟಲ್ ಬಿಹಾರಿ ವಾಜಪೇಯಿ ಕಾನೂನು ಮಹಾವಿದ್ಯಾಲಯದ ಪ್ರಾಂಶುಪಾಲರಾದ ಉಷಾದೇವಿ ಎಸ್. ಹಿರೇಮಠ, ಕಾನೂನು ಮಾಪನಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ರವಿಕುಮಾರ್, ಆಹಾರ ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ ಹಾಗೂ ಕರ್ನಾಟಕ ಆಹಾರ ಮತ್ತು ನಾಗರಿಕ ಸರಬರಾಜು ನಿಗಮ ನಿಯಮಿತದ ಸಿಬ್ಬಂದಿಗಳ ಸೇರಿದಂತೆ ಕಾಲೇಜಿನ ಉಪನ್ಯಾಸಕರು, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.



10 ದಿನಗಳಲ್ಲಿ ಟಾಫಿ ನೋಂದಣಿ ಕಡ್ಡಾಯ: ಶಿಕ್ಷಣ ಸಂಸ್ಥೆಗಳನ್ನು ತಂಬಾಕು ಮುಕ್ತಗೊಳಿಸಲು ಸೂಚನೆ

ಬೀದರ್ ,ಮಾ.27-

ಜಿಲ್ಲೆಯ ಎಲ್ಲಾ ಶೈಕ್ಷಣಿಕ ಸಂಸ್ಥೆಗಳನ್ನು ತಂಬಾಕು ಮುಕ್ತ ಸಂಸ್ಥೆಗಳನ್ನಾಗಿ ಮಾಡಲು ಸರ್ಕಾರದ ಟಾಫಿ ತಂತ್ರಾಂಶದಲ್ಲಿ 10 ದಿನಗಳೊಳಗಾಗಿ ನೋಂದಾಯಿಸಿ, ಶಾಲೆಯ 100 ಮೀಟರ್ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಮಾರಾಟ ಮಾಡುವ ಅಂಗಡಿಗಳ ವಿವರವನ್ನು ಸಂಬಂಧಪಟ್ಟ ಅಧಿಕಾರಿಗಳಿಗೆ ಸಲ್ಲಿಸುವಂತೆ ಅಪರ ಜಿಲ್ಲಾಧಿಕಾರಿ ಶಿವಾನಂದ್ ಕರಾಳೆ ಆದೇಶಿಸಿದರು.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ರಾಷ್ಟ್ರೀಯ ತಂಬಾಕು ನಿಯಂತ್ರಣ ಕಾರ್ಯಕ್ರಮದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲೆಯ ಎಲ್ಲಾ ತಾಲೂಕುಗಳಲ್ಲಿ ಕೋಟ್ಪಾ 2003 ಕಾಯ್ದೆಯಡಿ ಪ್ರತಿ ತಿಂಗಳು ತಂಬಾಕು ದಾಳಿಗಳನ್ನು ಹಮ್ಮಿಕೊಂಡು ಕನಿಷ್ಠ 20 ಪ್ರಕರಣಗಳನ್ನು ದಾಖಲಿಸಬೇಕು. ತಹಶೀಲ್ದಾರರ ಅಧ್ಯಕ್ಷತೆಯಲ್ಲಿ ಪ್ರತಿ ಮೂರು ತಿಂಗಳಿಗೊಮ್ಮೆ ಪ್ರಗತಿ ಪರಿಶೀಲನೆ ನಡೆಸಿ ಯುವಜನತೆ ತಂಬಾಕು ಸೇವನೆಗೆ ಬಲಿಯಾಗದಂತೆ ಕ್ರಮವಹಿಸಬೇಕು ಎಂದು ಸೂಚಿಸಿದರು.

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ತಂಬಾಕು ಉತ್ಪನ್ನ ಉದ್ಯಮ ಪರವಾನಿಗೆ ನೀತಿಯನ್ನು ಅನುಷ್ಠಾನಗೊಳಿಸದ ಬಸವಕಲ್ಯಾಣ ಮತ್ತು ಔರಾದ್ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರಿಗೆ ಕಾರಣ ಕೇಳಿ ನೋಟಿಸ್ ನೀಡಲು ಸೂಚಿಸಿದರು. ಉಳಿದ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಈ ನೀತಿಯನ್ನು ಕಟ್ಟುನಿಟ್ಟಾಗಿ ಜಾರಿಗೆ ತಂದು ಶಿಕ್ಷಣ ಸಂಸ್ಥೆಗಳನ್ನು ತಂಬಾಕು ಮುಕ್ತಗೊಳಿಸಬೇಕು ಎಂದರು.

ಎಲ್ಲ ಬಾರ್ ಹಾಗೂ ರೆಸ್ಟೋರೆಂಟ್‌ಗಳಲ್ಲಿ ಧೂಮಪಾನ ತಡೆಯಲು ಅಬಕಾರಿ ಅಧಿಕಾರಿಗಳಿಗೆ ಕೋಟ್ಪಾ ಕಾಯ್ದೆಯ ತರಬೇತಿ ನೀಡಿ, ಆರೋಗ್ಯ ಮತ್ತು ಅಬಕಾರಿ ಇಲಾಖೆಗಳು ಜಂಟಿಯಾಗಿ ದಾಳಿ ನಡೆಸಬೇಕು. ತಾಲೂಕುವಾರು ಗ್ರಾಮಗಳನ್ನು ಆಯ್ಕೆ ಮಾಡಿ ಮಾರ್ಗಸೂಚಿಯಂತೆ 30 ಗ್ರಾಮಗಳನ್ನು ತಂಬಾಕು ಮುಕ್ತ ಗ್ರಾಮಗಳಾಗಿ ಘೋಷಿಸಲು ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು.

ರಾಜ್ಯ ತಂಬಾಕು ನಿಯಂತ್ರಣ ಘಟಕದ ವಿಭಾಗೀಯ ಸಂಯೋಜಕ ಮಾಹಾತೇಂಶ್ ಬಿ. ಉಳ್ಳಾಗಡ್ಡಿ ಅವರು ಮಾತನಾಡಿ, ಸೆಕ್ಷನ್-4 ಅಡಿಯಲ್ಲಿ 579 ಪ್ರಕರಣಗಳು ದಾಖಲಿಸಿ 48,610 ರೂ. ದಂಡ, ಸೆಕ್ಷನ್ 6(ಎ) ಅಡಿಯಲ್ಲಿ 54 ಪ್ರಕರಣಗಳಿಗೆ 9,700 ರೂ. ದಂಡ ಹಾಗೂ ಸೆಕ್ಷನ್ 6(ಬಿ) ಅಡಿಯಲ್ಲಿ 101 ಪ್ರಕರಣಗಳಿಗೆ 19,500 ರೂ. ದಂಡ ವಿಧಿಸಲಾಗಿದೆ. ಒಟ್ಟು 734 ಪ್ರಕರಣಗಳಲ್ಲಿ 77,810 ರೂ. ದಂಡ ವಿಧಿಸಲಾಗಿದೆ ಎಂದು ಮಾಹಿತಿ ನೀಡಿದರು.

ಈ ಸಭೆಯಲ್ಲಿ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ, ಜಿಲ್ಲಾ ಜಾರಿ ಅಧಿಕಾರಿಗಳು, ಶಿಕ್ಷಣ ಇಲಾಖೆ ಹಾಗೂ ಅಬಕಾರಿ ಇಲಾಖೆ ಸೇರಿದಂತೆ ಇತರೆ ವಿವಿಧ ಇಲಾಖೆ ಅಧಿಕಾರಿಗಳು ಉಪಸ್ಥಿತರಿದ್ದರು.

ಒಂದನೇಯ ಪುಟದಿಂದ

ರಾಯಚೂರು ಜಿಲ್ಲೆಯಲ್ಲಿ ಪೆಟ್ರೋಲ್, ಡೀಸೆಲ್‌ಗೆ ಯಾವುದೇ ಕೊರತೆಯಿಲ್ಲ

ಕೊರತೆಯಿಲ್ಲ ಮತ್ತು ಬೇಡಿಕೆಯನ್ನು ಪೂರೈಸಲು ಸಾಕಷ್ಟು ಸರಬರಾಜು ಲಭ್ಯವಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ನಾಗರಿಕರು ಭಯಭೀತಿಯಿಂದ ಖರೀದಿಯಲ್ಲಿ ತೊಡಗಬೇಡಿ ಎಂದು ವಿನಂತಿಸಲಾಗಿದೆ. ಏಕೆಂದರೆ ಅಂತಹ ಕ್ರಮಗಳು ಅನಗತ್ಯ ಅನಾ ನುಕೂಲತೆ ಉಂಟುಮಾಡಬಹುದು ಮತ್ತು ಸಾಮಾನ್ಯ ಪೂರೈಕೆ ಕಾರ್ಯ ವಿಧಾನಗಳನ್ನು ಅಡ್ಡಿಪಡಿಸಬಹುದು. ಮುಂದುವರೆದು ಪೆಟ್ರೋಲಿಯಂ ಕಾಯ್ದೆ 1934 ಮತ್ತು ಪೆಟ್ರೋ ಲಿಯಂ ನಿಯಮಗಳು, 2002 ಕ್ಲಾಜ್(5) ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ ಪೆಟ್ರೋಲ್ ಮಾರಾಟವನ್ನು ಕಟ್ಟು ನಿಟ್ಟಾಗಿ ನಿಷೇಧಿಸಲಾಗಿದೆ. ಇದರಿಂದ ಗಂಭೀರ ಸುರಕ್ಷತಾ ಅಪಘಾ ತಗಳನ್ನುಂಟು ಮಾಡುತ್ತದೆ. ರಾಯ ಚೂರು ಜಿಲ್ಲೆಯ ಎಲ್ಲಾ ಪೆಟ್ರೋಲ್ ಪಂಪ್ ಮಾಲೀಕರಿಗೆ ಪ್ಲಾಸ್ಟಿಕ್ ಬಾಟಲ್‌ಗಳಲ್ಲಿ, ಕ್ಯಾನ್, ಬ್ಯಾರಲ್ ಗಳಲ್ಲಿ ಪೆಟ್ರೋಲ್ ಮಾರಾಟ ಮಾಡದಂತೆ ಕಟ್ಟುನಿಟ್ಟಿನ ಸೂಚನೆ ನೀಡಲಾಗಿದೆ. ಯಾವುದೇ ರೀತಿಯ ಉಲ್ಲಂಘನೆ ಕಂಡುಬದಲ್ಲಿ ಸಂಬಧ ಪಟ್ಟವರ ವಿರುದ್ಧ ಕಠಿಣ ಕಾನೂನು ಕ್ರಮ ಜರುಗಿಸಲಾಗುವುದು.

ಬಿಸಿಲಿನ ತಾಪ ಹೆಚ್ಚಳ: ಬೀದಿ ಗೋವುಗಳ ರಕ್ಷಣೆಗಾಗಿ ಶಿವಸೇನಾ ಯುವಸೇನಾ ಮನವಿ

ಜಿಲ್ಲೆಯ ಎಲ್ಲಾ ಭೀಮ್ ಆರ್ಮಿಯ ಪದಾಧಿಕಾರಿಗಳು, ಸೈನಿಕರು ಹಾಗೂ ಅಂಬೇಡ್ಕರ್ ಅನುಯಾಯಿಗಳು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಅವರು ಮನವಿ ಮಾಡಿದರು. ಎಲ್ಲರೂ ಸಂಘಟಿತವಾಗಿ ಭಾಗವಹಿಸುವ ಮೂಲಕ ಸಮಾಜದ ಏಕತೆ ಮತ್ತು ಜಾಗೃತಿಗೆ ಬಲ ನೀಡಬೇಕು ಎಂದು ತಿಳಿಸಿದರು.

ಜೋಗುಲಾಂಬ ಗದ್ವಾಲ್ ಜಿಲ್ಲೆಯ ಭೀಮ್ ಆರ್ಮಿ ವತಿಯಿಂದ ನೀಡಿದ ಆಹ್ವಾನಕ್ಕೆ ಧನ್ಯವಾದಗಳನ್ನು ಸಲ್ಲಿಸಿ, ಸುಧಾಕರ್ ಸೇರಿದಂತೆ ಭೀಮ್ ಸೈನಿಕರ ಸೇವೆಯನ್ನು ಶ್ಲಾಘಿಸಲಾಯಿತು. ''ಜೈ ಭೀಮ್, ಜೈ ಭೀಮ್ ಆರ್ಮಿ'' ಎಂಬ ಘೋಷಣೆಗಳೊಂದಿಗೆ ಕಾರ್ಯಕ್ರಮಕ್ಕೆ ಬೆಂಬಲ ಸೂಚಿಸಲಾಯಿತು.

ಈ ಸಂದರ್ಭದಲ್ಲಿ ಸಂದೀಪ್ (ಕಾರ್ಯದರ್ಶಿ), ಜಯರಾಜ್ (ಡಿಎಸ್‌ಎಸ್ ಯುವ ಅಧ್ಯಕ್ಷರು), ಪ್ರವೀಣ್ ಕುಮಾರ್ (ಸಾಮಾಜಿಕ ಕಾರ್ಯಕರ್ತರು), ರಾಜು (ಕಾರ್ಯದರ್ಶಿ), ಸುಧಾಕರ್ (ಗದ್ವಾಲ್ ಜಿಲ್ಲಾ ಅಧ್ಯಕ್ಷರು) ಸೇರಿದಂತೆ ಅನೇಕರು ಉಪಸ್ಥಿತರಿದ್ದರು.

ಹಾಳಜಾಡಲದಿನ್ನಿಯಲ್ಲಿ ಗೈರಾಣು ಭೂಮಿ ಒತ್ತುವರಿ ತೆರವಿಗೆ ಆಗ್ರಹ

ಬೇಕಾದರೂ ದೂರು ನೀಡಿ, ನಮಗೆ ಯಾವುದಕ್ಕೂ ಭಯವಿಲ್ಲ ಎಂಬ ರೀತಿಯಲ್ಲಿ ಅಹಂಕಾರ ತೋರಿಸುವುದು ನಡೆಯುತ್ತಿದೆ. ಇದೇ ವಿಚಾರವಾಗಿ ನಾವು ಗ್ರಾಮಸ್ಥರು ತಹಸೀಲ್ದಾರ್ ಕಚೇರಿಗೆ ಹಲವು ಬಾರಿ ಮನವಿ ಸಲ್ಲಿಸಿದ್ದರೂ, ಇಂದಿನವರೆಗೆ ಯಾವುದೇ ಪರಿಣಾಮಕಾರಿ ಕ್ರಮ ಕೈಗೊಳ್ಳಲಾಗಿಲ್ಲ ಬೇಸರ ವ್ಯಕ್ತಪಡಿಸಿದರು.

ಗ್ರಾಮದಲ್ಲಿ ನಿರ್ಮಾಣವಾಗಬೇಕಿದ್ದ ಶಾಲಾ ಕಟ್ಟಡ, ಮಕ್ಕಳಿಗಾಗಿ ಆಟದ ಮೈದಾನ, ಸಾರ್ವಜನಿಕ ಉಪಯೋಗಕ್ಕಾಗಿ ರುದ್ರಭೂಮಿ, ಪಶುಗಳಿಗೆ ಅಗತ್ಯವಾದ ಗೋಮಾಳ ಭೂಮಿ, ಅಂಗನವಾಡಿ ಕೇಂದ್ರ, ಬಸ್ ನಿಲ್ದಾಣ ಸೇರಿದಂತೆ ಅನೇಕ ಸರ್ಕಾರಿ ಯೋಜನೆಗಳು ಅತಿಕ್ರಮಣದ ಕಾರಣದಿಂದ ನಿಂತು ಹೋಗಿವೆ. ಮಾನ್ಯ ದಯಾಳುಗಳಾದ ತಾವುಗಳು ಈ ವಿಷಯವನ್ನು ಅತ್ಯಂತ ಗಂಭೀರವಾಗಿ ಪರಿಗಣಿಸಿ ಅತಿಕ್ರಮಣಗೊಂಡಿರುವ ಸರ್ಕಾರಿ ಗಾಯರಾಣು ಭೂಮಿಯನ್ನು ತಕ್ಷಣ ಸರ್ವೇ ನಡೆಸಿ ಗುರುತಿಸಬೇಕು. ಅತಿಕ್ರಮಣಕಾರರ ವಿರುದ್ಧ ಕಾನೂನು ಕ್ರಮ ಕೈಗೊಳ್ಳಬೇಕು. ಅತಿಕ್ರಮಣವನ್ನು ತುರ್ತು ಆಧಾರದ ಮೇಲೆ ತೆರವುಗೊಳಿಸಬೇಕು. ಗ್ರಾಮದಲ್ಲಿ ಶಾಂತಿ ಮತ್ತು ಕಾನೂನು ಸುವ್ಯವಸ್ಥೆ ಕಾಪಾಡಲು ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಇಲ್ಲದಿದ್ದರೆ ಜಿಲ್ಲಾಧಿಕಾರಿಗಳ ಕಚೇರಿ ಮುಂದೆ ಪ್ರತಿಭಟನೆ ನಡೆಸಲಾಗುವುದು ಎಂದು ಎಚ್ಚರಿಸಿದರು.

ಪ್ರಮುಖರಾದ ರಂಗಯ್ಯ ಮಾಲಿಗೌಡ, ಅಂಜಿನಯ್ಯ ಕಟ್ಟಿಮನಿ, ರವಿಚಂದ್ರ ನಾಯಕ, ಚಂದ್ರಶೇಖರ ನಾಯಕ, ಶಶಿಕುಮಾರ ನಾಯಕ, ಶಿವಲಿಂಗಪ್ಪ ನಾಯಕ, ರಾಮಕೃಷ್ಣ ನಾಯಕ, ಬಸವರಾಜ ಮಾಲಿಗೌಡ, ನಾಗರಾಜ ಗುತ್ತೆದಾರ, ಕನಕಪ್ಪ ನಾಯಕ, ಆಂಜಿನಯ್ಯ ನಾಯಕ, ಮೌನೇಶ ಗುತ್ತೇದಾರ, ರಂಗನಾಥ ನಾಯಕ, ಸುರೇಶ ನಾಯಕ, ನಾಗರಾಜ ಹರಿಜನ, ರಮೇಶ ನಾಯಕ, ಶಿದ್ದಲಿಂಗ ಗುತ್ತೆದಾರ, ಚಂದ್ರಶೇಖರ ಗುತ್ತೆದಾರ, ಲಚಮಣ್ಣ ಮಡಿವಾಳ, ಗೋಪಾಲ ನಾಯಕ, ಸುರೇಶ ಹೂಗಾರ, ರಾಮಸ್ವಾಮಿ ನಾಯಕ, ಹನುಮಂತ ನಾಯಕ, ಯಲ್ಲನಗೌಡ ನಾಯಕ, ರವಿ ಹರಿಜನ, ಬಿಕಪ್ಪ ನಾಯಕ, ಆಂಜಿನಯ್ಯ ನಾಯಕ, ರಮೇಶ ಗುತ್ತೆದಾರ, ಶ್ರೀಧರ ಗೊಲ್ಲರ ಇದ್ದರು.

27 ಅರಕೇರಾ 01 : ಅರಕೇರಾದಲ್ಲಿ ತಹಸೀಲ್ದಾರ್ ಅಮರೇಶ ಬೀರಾದರ್‌ಗೆ ಹಾಳ ಜಾಡಲದಿನ್ನಿ ಗ್ರಾಮಸ್ಥರು ಶುಕ್ರವಾರ ಮನವಿ ಸಲ್ಲಿಸಿದರು.

ಮಹಿಳಾ ಪರಿಷತ್ ವತಿಯಿಂದ ಅರ್ಥಪೂರ್ಣವಾಗಿ ಜರುಗಿದ ಮಹಿಳಾ ದಿನಾಚರಣೆ

ಮಹಿಳಾ ಯುವ ಘಟಕದ ಅಧ್ಯಕ್ಷೆ ಧರ್ಮಾವತಿ ಅವರು ಮಾತನಾಡಿ ವಿವಿಧ ಕ್ಷೇತ್ರಗಳಲ್ಲಿ ಆಸಕ್ತಿ ಹೊಂದಿರುವ ವಿದ್ಯಾರ್ಥಿನಿಯರನ್ನು ಮಹಿಳಾ ಪರಿಷತ್ತಿನ ಯುವ ಘಟಕದಲ್ಲಿ ಸೇರಿಸಿಕೊಳ್ಳಲಾಗುವುದು ಎಂದು ತಿಳಿಸಿದರು.

ವಸತಿ ನಿಲಯದ ಮೇಲ್ವಿಚಾರಕ ಕಲ್ಲಯ್ಯ ಸ್ವಾಮಿ ಅವರು ಇಂತಹ ಕಾರ್ಯಕ್ರಮಗಳು ಶ್ಲಾಘನೀಯವಾಗಿದ್ದು, ತಮ್ಮ ಸಹಕಾರ ಸದಾ ಇರುತ್ತದೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ರಾಜ್ಯ ಮಹಿಳಾ ಪರಿಷತ್ತಿನ ಅಧ್ಯಕ್ಷೆ ಸರ್ವಮಂಗಳ ಸಕ್ರಿ ಅವರು ಮಾತನಾಡಿ, ಮಹಿಳೆಯರ ಅಭಿವೃದ್ಧಿಗಾಗಿ ಹಂತ ಹಂತವಾಗಿ ವಿವಿಧ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತಿದೆ ಎಂದು ತಿಳಿಸಿದರು. ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿನಿಯರನ್ನು ಅಭಿನಂದಿಸಿ, ಮುಂದಿನ ದಿನಗಳಲ್ಲಿ ಇನ್ನಷ್ಟು ಕಾರ್ಯಕ್ರಮಗಳನ್ನು ಆಯೋಜಿಸಲಾಗುವುದು ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಶಿವಮ್ಮ ಪ್ರಾರ್ಥನೆ ಸಲ್ಲಿಸಿದರು. ಜಿಲ್ಲಾ ಪ್ರಧಾನ ಕಾರ್ಯದರ್ಶಿ ಯಶೋಧಾ ಅವರು ನಿರೂಪಣೆ ನಡೆಸಿದರು. ವಿದ್ಯಾಶ್ರೀ ಕಾರ್ಯಕ್ರಮ ನಿರ್ವಹಿಸಿದರು.

ಉತ್ತರ ಕರ್ನಾಟಕ ಸ್ನೇಹ ಲೋಕ ಟ್ರಸ್ಟ್ ವತಿಯಿಂದ ಕುಡಿಯುವ ನೀರಿನ ಸ್ಟೀಲ್ ಟ್ಯಾಂಕ್ ದೇಣಿಗೆ

ಪೆನ್ಸಿಲ್ ಗಳು ಹಾಗೂ ಸುಮಾರು ಹತ್ತು ಪುರಾಣ ಪುಸ್ತಕಗಳನ್ನು ತಮ್ಮ ವೈಯಕ್ತಿಕವಾಗಿ ಶಾಲೆಗೆ ಕೊಡುಗೆಯನ್ನು ನೀಡಿದರು

ನಂತರ ಶಾಲೆಯ ಅಧ್ಯಕ್ಷರಾದ ಹಂಪಣ್ಣ ಪಲ್ಲೇದ್ ರವರು ಹರ್ಷ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಯುಕೆಎಸ್‌ಎಲ್ ಟ್ರಸ್ಟ್ ನ ಪಧಾಧಿಕಾರಿಗಳಾದ ಮಹಾಂತೇಶ ವೀರಾಪುರ, ಸಂಜೀವ್ ಪಟ್ಟಾರಿ, ಶರಣು ಪಲ್ಲೇದ್, ಸ್ಥಳಿಯರಾದ ಅಯ್ಯಣ್ಣ ಕಟ್ಟಿಮನಿ, ಎಚ್.ಎಸ್.ನಾಯಕ ಮುಂತಾದವರು ಇದ್ದರು.

11ರಂದು ವೀರಶೈವ ಲಿಂಗಾಯತ ಸಮಾಜದ ಹೊಸ ಆಡಳಿತ ಮಂಡಳಿಯ ಚುನಾವಣೆ

ಇತ್ತೀಚಿಗೆ ವೀರಶೈವ ಕಲ್ಯಾಣ ಮಂಟಪದ ಆವರಣದಲ್ಲಿ ಸದಸ್ಯರ ವಿಶೇಷ ಸಾಮಾನ್ಯ ಸಭೆ ನಡೆಸಿ. ಮೊಟ್ಟ ಮೊದಲ ಬಾರಿಗೆ ಚುನಾವಣೆ ನಡೆಸಲು ಸರ್ವಾನುಮತದಿಂದ ತೀರ್ಮಾನ ಕೈಗೊಳ್ಳಲಾಗಿದೆ. ಒಟ್ಟು. 1611. ಜನರು ಸದಸ್ಯತ್ವ ಪಡೆದಿದ್ದು. ಕೋಟೆ ವೀರಣ್ಣ ದೇವಸ್ಥಾನದಲ್ಲಿ ಚುನಾವಣೆ ಪ್ರಕ್ರಿಯೆ ನಡೆಯಲಿದೆ ಎಂದು ಹೇಳಿದರು. ಅಧ್ಯಕ್ಷ ಒಂದು ಸ್ಥಾನ ಉಪಾಧ್ಯಕ್ಷ ಮೂರು ಸ್ಥಾನ ಇದರಲ್ಲಿ ಒಂದು ಮಹಿಳೆಗೆ ಮೀಸಲು. ಪೋಷಕ ವರ್ಗದಿಂದ 5 ಸದಸ್ಯ ಸ್ಥಾನ. ದಾನಿಗಳ ವರ್ಗದಿಂದ 5 ಸದಸ್ಯ ಸ್ಥಾನ. ಅಜೀವ ಸದಸ್ಯದ ವರ್ಗದಿಂದ 10 ಸದಸ್ಯರು ಇದರಲ್ಲಿ ಎರಡು ಸ್ಥಾನಗಳು ಮಹಿಳೆಯರಿಗೆ ಮೀಸಲು. ವಾರ್ಷಿಕ ಸದಸ್ಯರ ವರ್ಗದಿಂದ 7 ಸದಸ್ಯರು ಇದರಲ್ಲಿ ಒಂದು ಸ್ಥಾನ ಮಹಿಳೆಗೆ ಮೀಸಲು ಇರಿಸಲಾಗಿದೆ. ಆಯಾ ವರ್ಗಕ್ಕೆ ಸಂಬಂಧಪಟ್ಟವರು ಆಯಾ ವರ್ಗದಲ್ಲಿ ಮಾತ್ರ ಸ್ಪರ್ಧಿಸಲು ಅರ್ಹರು . ಈ ನಿಯಮವು ಅಧ್ಯಕ್ಷರು ಹಾಗೂ ಉಪಾಧ್ಯಕ್ಷರು ಗಳ ಸ್ಥಾನಗಳಿಗೆ ಅನ್ವಯಿಸುವುದಿಲ್ಲ. ನಿವೃತ್ತ ಉಪ ಪ್ರಾಚಾರ್ಯ ಬಿ ರವಿಯಪ್ಪ. ಅವರನ್ನು ಚುನಾವಣಾ ಅಧಿಕಾರಿಯಾಗಿ ನೇಮಕ ಮಾಡಲಾಗಿದೆ. ಸಂಘದ ಬೈಲಾ ಪ್ರಕಾರ ಚುನಾವಣೆಯ ಪ್ರಕ್ರಿಯೆಯನ್ನು ನಡೆಸಲಾ ಗುವುದು ಎಂದು ವಿವರಿಸಿದರು. ಮಾರ್ಚ್ 31ರಂದು ಮತ್ತು 31 ರಂದು ಬೆಳಿಗ್ಗೆ 10 ಗಂಟೆಯಿಂದ ಸಂಜೆ 4. ಗಂಟೆವರೆಗೆ ನಾಮಪತ್ರ ಸಲ್ಲಿಕೆ. ಏಪ್ರಿಲ್ 1 ರಂದು ಬೆಳಿಗ್ಗೆ 10 ರಿಂದ ಸಂಜೆ 4ರ ವರೆಗೆ ನಾಮಪತ್ರ ಪರಿಶೀಲನೆ. ಏಪ್ರಿಲ್ ಮೂರರಂದು ಬೆಳಿಗ್ಗೆ 10 ರಿಂದ ಸಂಜೆ 4ರ ವರೆಗೆ ಸ್ವೀಕೃತ ನಾಮಪತ್ರಗಳನ್ನು ವಾಪಸ್ ಪಡೆಯಲು ಅವಕಾಶ. ಏಪ್ರಿಲ್ 11ರಂದು ಬೆಳಿಗ್ಗೆ 8 ರಿಂದ ಸಂಜೆ 4:00 ವರೆಗೆ ಅವಶ್ಯವಿದ್ದಲ್ಲಿ ಮತದಾನ ಸಂಜೆ 4:30 ರಿಂದ ಮತಗಳ ಎಣಿಕೆ ಹಾಗೂ ಫಲಿತಾಂಶ ಘೋಷಣೆ ನಡೆಯಲಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸಂಘದ ಉಪಾಧ್ಯಕ್ಷ ವೀರೇಂದ್ರಪ್ರಸಾದ್ ಮೇರಿನಾಳ್. ಕಾರ್ಯದರ್ಶಿ ಅಮರೇಶಪ್ಪ ಕುಂಬಾರ. ಸಹಕಾರದರ್ಶಿ. ಎಲ್ ಅಂಬರೀಶಪ್ಪ. ಖಜಾಂಜಿ ಹಂಪಯ್ಯ ಸ್ವಾಮಿ ರಾವಿಹಾಳ. ಸದಸ್ಯರಾದ ರಾಜಶೇಖರ್ ಪಾಟೀಲ್. ಅಶೋಕ್ ಗೌಡ ಗದರಟಗಿ. ಟಿ ಎನ್ ಪಾಟೀಲ್. ಸೇರಿದಂತೆ ಮತ್ತಿತರರು ಉಪಸ್ಥಿತರಿದ್ದರು.

ಶ್ರೀರಾಮನವಮಿ ಆಚರಣೆ ಆದರ್ಶ ಪುರುಷ ಶ್ರೀರಾಮ ಆದರ್ಶಗಳನ್ನು ಮೈಗೂಡಿಸಿಕೊಳ್ಳೋಣ – ಜೆ. ಶರಣಪ್ಪಗೌಡ

ವೀರೇಶ, ಚಿತಾಪೂರ ಮಂಜುನಾಥ, ಪ್ರಾಣೇಶ ಪುರೋಹಿತ, ಚಂದ್ರ ಕಾಂತ ಪುರೋಹಿತ, ಕೆ.ಶ್ರೀನಿವಾಸ ಬಸಾಪೂರ,ಶಿಕಂಟಿ ಮಲ್ಲಿಕಾರ್ಜುನ, ಎಂ.ರಾಜೇಶ, ಸುಂಕೇಶ್ವರಾಳ ದೇವೇಂದ್ರಪ್ಪ, ಭೀಮಾರಾವ್ ಪಟೇಲ್,ಧನಸಿಂಗ್, ವಿಫುಲ್, ಸೇರಿದಂತೆ ಇತರರು ಇದ್ದರು


ಎಸ್‌ಸಿ-ಎಸ್‌ಟಿ ಸಂತ್ರಸ್ತರಿಗೆ 26.55 ಲಕ್ಷ ರೂ. ಪರಿಹಾರ: ಡಿಸಿ ಕವಿತಾ ಎಸ್ ಮನ್ನಿಕೇರಿ

ವಿಜಯನಗರ,ಮಾ.27-

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಜಾತಿ ನಿಂದನೆ, ಹಲ್ಲೆ ಹಾಗೂ ಲೈಂಗಿಕ ಕಿರುಕುಳ ಸೇರಿದಂತೆ ವಿವಿಧ ಪ್ರಕರಣಗಳಲ್ಲಿ ಸಂತ್ರಸ್ತರಾದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ 15 ಮಂದಿಗೆ ಒಟ್ಟು 26,55,000 ರೂ. ಪರಿಹಾರ ಧನವನ್ನು ಶೀಘ್ರವಾಗಿ ನೀಡಲಾಗಿದೆ ಎಂದು ಜಿಲ್ಲಾಧಿಕಾರಿ ಕವಿತಾ ಎಸ್. ಮನ್ನಿಕೇರಿ ತಿಳಿಸಿದ್ದಾರೆ.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಗುರುವಾರ ಆಯೋಜಿಸಿದ್ದ ದೌರ್ಜನ್ಯ ತಡೆ ಕುರಿತ ಜಿಲ್ಲಾ ಮಟ್ಟದ ಜಾಗೃತಿ ಹಾಗೂ ಉಸ್ತುವಾರಿ ಸಮಿತಿ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲೆಯ ವಿವಿಧ ತಾಲೂಕುಗಳಲ್ಲಿ ಜಾತಿ ನಿಂದನೆ, ಹಲ್ಲೆ, ಲೈಂಗಿಕ ಕಿರುಕುಳ ಹಾಗೂ ಜಮೀನು ವಿವಾದಗಳಿಗೆ ಸಂಬಂಧಿಸಿದ ಪ್ರಕರಣಗಳು ಹೆಚ್ಚಾಗಿ ದಾಖಲಾಗುತ್ತಿವೆ. ಕಳೆದ ಮೂರು ತಿಂಗಳಲ್ಲಿ ಹೊಸಪೇಟೆ ತಾಲೂಕಿನಲ್ಲಿ 5, ಹರಪನಹಳ್ಳಿ ಮತ್ತು ಕೂಡ್ಲಿಗಿ ತಲಾ 1, ಹಡಗಲಿ 2 ಹಾಗೂ ಡಿ.ಸಿ.ಆರ್.ಇ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ 4 ಪ್ರಕರಣಗಳು ಸೇರಿ ಒಟ್ಟು



13 ಪ್ರಕರಣಗಳು ದಾಖಲಾಗಿವೆ. ಇದರಲ್ಲಿ 7 ಪ್ರಕರಣಗಳಿಗೆ ಅಂತಿಮ ವರದಿ ಸಲ್ಲಿಸಲಾಗಿದ್ದು, ಉಳಿದವು ತನಿಖಾ ಹಂತದಲ್ಲಿವೆ.

ಇನ್ನೂ ಇದೇ ಅವಧಿಯಲ್ಲಿ 5 ಪ್ರಕರಣಗಳಿಗೆ ದೋಷಾರೋಪ ಪಟ್ಟಿ ಸಲ್ಲಿಸಲಾಗಿದೆ. 2025 ಡಿಸೆಂಬರ್‌ನಿಂದ ಮಾರ್ಚ್ 18ರವರೆಗೆ ಬಳ್ಳಾರಿ ಮತ್ತು ವಿಜಯನಗರ ಜಿಲ್ಲೆಗಳಲ್ಲಿ ದಾಖಲಾದ 97 ಪ್ರಕರಣಗಳು ನ್ಯಾಯಾಲಯದಲ್ಲಿ ಬಾಕಿ ಇರುವುದಾಗಿ ಅಧಿಕಾರಿಗಳು ಸಭೆಗೆ ಮಾಹಿತಿ ನೀಡಿದರು.


ಈ ಕುರಿತು ಪ್ರತಿಕ್ರಿಯಿಸಿದ ಜಿಲ್ಲಾಧಿಕಾರಿ, ದೌರ್ಜನ್ಯ ತಡೆ ಕಾಯ್ದೆ ಬಗ್ಗೆ ಜಾಗೃತಿ ಕಾರ್ಯಕ್ರಮಗಳನ್ನು ನಿರಂತರವಾಗಿ ಹಮ್ಮಿಕೊಂಡರೂ ಪ್ರಕರಣಗಳು ಕಡಿಮೆಯಾಗದಿರುವುದಕ್ಕೆ ಬೇಸರ ವ್ಯಕ್ತಪಡಿಸಿದರು. ಗ್ರಾಮೀಣ ಭಾಗಗಳಲ್ಲಿ ಬೀದಿ ನಾಟಕಗಳು, ಜಾಗೃತಿ ಶಿಬಿರಗಳ ಮೂಲಕ ಅರಿವು ಮೂಡಿಸಲು ಅಧಿಕಾರಿಗಳಿಗೆ ಸೂಚಿಸಿದರು.

ಕಾಯ್ದೆಯನ್ನು ದುರುಪಯೋಗಪಡಿಸಿಕೊಳ್ಳುವವರ ವಿರುದ್ಧ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಎಚ್ಚರಿಸಿದ ಅವರು, ಪ್ರಕರಣಗಳ ತನಿಖೆಯನ್ನು ವಿಳಂಬವಿಲ್ಲದೆ ಪೂರ್ಣಗೊಳಿಸಿ, ನಿಗದಿತ ಅವಧಿಯಲ್ಲಿ ದೋಷಾರೋಪ ಪಟ್ಟಿ ಸಲ್ಲಿಸಬೇಕು ಹಾಗೂ ಸಂತ್ರಸ್ತರಿಗೆ ಪರಿಹಾರ ಧನವನ್ನು ತಕ್ಷಣ ತಲುಪಿಸಬೇಕು ಎಂದು ಸೂಚಿಸಿದರು.

ಅಸ್ಪೃಶ್ಯತೆ ಮತ್ತು ಸಾಮಾಜಿಕ ಬಹಿಷ್ಕಾರ ನಿರ್ಮೂಲನೆಗೆ ಕ್ರಮ ಕೈಗೊಳ್ಳಬೇಕು. ಎಸ್‌ಸಿ/ಎಸ್‌ಟಿ ಕಾಲೋನಿಗಳಲ್ಲಿ ಕುಡಿಯುವ ನೀರು, ರಸ್ತೆ ಮತ್ತು ಸ್ಮಶಾನ ಭೂಮಿ ಸೇರಿದಂತೆ ಮೂಲಭೂತ ಸೌಲಭ್ಯಗಳನ್ನು ಆದ್ಯತೆಯ ಮೇರೆಗೆ ಒದಗಿಸಲು ಅಧಿಕಾರಿಗಳಿಗೆ ನಿರ್ದೇಶಿಸಿದರು.

ಸಭೆಯಲ್ಲಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಜಾಹ್ನವಿ, ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರು ವೈ.ಎ. ಕಾಳೆ ಸೇರಿದಂತೆ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

ಎ.5 ರಂದು ಡಾ.ಬಾಬು ಜಗಜೀವನರಾಂ ಜಯಂತಿ ಅರ್ಥಪೂರ್ಣವಾಗಿ ಆಚರಿಸೋಣ : ಎಡಿಸಿ ಶಿವಾನಂದ್ ಕರಾಳೆ



ಬೀದರ್ ,ಮಾ.27-

ಎ.5ರಂದು ಹಸಿರು ಕ್ರಾಂತಿಯ ಹರಿಕಾರ ಡಾ. ಬಾಬು ಜಗಜೀವನರಾಂ ಅವರ 119ನೇ ಜಯಂತಿಯನ್ನು ಅರ್ಥಪೂರ್ಣವಾಗಿ ಆಚರಿಸೋಣ ಎಂದು ಅಪರ ಜಿಲ್ಲಾಧಿಕಾರಿ ಶಿವಾನಂದ್ ಕರಾಳೆ ತಿಳಿಸಿದ್ದಾರೆ.

ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಗುರುವಾರ ಜಯಂತಿ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಅಂದು ಬೆಳಿಗ್ಗೆ 9:30ಕ್ಕೆ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಡಾ. ಜಗಜೀವನರಾಂ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಲಾಗುವುದು. ನಂತರ 10 ಗಂಟೆಗೆ ಭಾವಚಿತ್ರದ ಮೆರವಣಿಗೆ ನಡೆಯಲಿದೆ ಎಂದರು.

ಮೆರವಣಿಗೆ ಬಸವೇಶ್ವರ್ ವೃತ್ತ, ಭಗತ್ ಸಿಂಗ್ ವೃತ್ತ, ಅಂಬೇಡ್ಕರ್ ವೃತ್ತ, ಕರಿಯಪ್ಪ ವೃತ್ತ ಮಾರ್ಗವಾಗಿ ಸಾಗಿದ್ದು, ಚನ್ನಬಸವ ಪಟ್ಟದೇವರು ರಂಗಮಂದಿರದಲ್ಲಿ ಬೆಳಿಗ್ಗೆ 11ಕ್ಕೆ ವೇದಿಕೆ ಕಾರ್ಯಕ್ರಮ ನಡೆಯಲಿದೆ ಎಂದು ತಿಳಿಸಿದರು.

ಅಂದು ನಗರದ ಎಲ್ಲಾ ಮಹನೀಯರ ವೃತ್ತಗಳಿಗೆ ದೀಪಾಲಂಕಾರ ಮಾಡುವುದು, ಗ್ರಾಮ ಪಂಚಾಯತ್‌ಗಳಲ್ಲಿ ಭಾವಚಿತ್ರ ಪೂಜೆ ನಡೆಸುವುದು, ಮೆರವಣಿಗೆ ಮಾರ್ಗದಲ್ಲಿ ಸ್ವಚ್ಛತೆ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ನಗರಸಭೆಯಿಂದ ಒದಗಿಸುವುದು, ಪೊಲೀಸ್ ಬಂದೋಬಸ್ತ್ ಕಲ್ಪಿಸುವುದು ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯಿಂದ ಕಲಾ ತಂಡಗಳ ವ್ಯವಸ್ಥೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಿದರು.

ಈ ಸಭೆಯಲ್ಲಿ ಮಹಾನಗರ ಪಾಲಿಕೆ ಆಯುಕ್ತ ಮುಕುಲ್ ಜೈನ್, ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶರಣಪ್ಪಾ ಕೋಟಪ್ಪಗೋಳ್, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕ ಯೋಗೇಶ್, ಜಿಲ್ಲಾ ಮಟ್ಟದ ಅಧಿಕಾರಿಗಳು ಸೇರಿದಂತೆ ಸಮಾಜದ ಮುಖಂಡರಾದ ಚಂದ್ರಕಾಂತ್ ಹಿಪ್ಪಳಗಾಂವ್, ರಾಜು ಕಡ್ಯಾಳ್, ಫರ್ನಾಂಡಿಸ್ ಹಿಪ್ಪಳಗಾಂವ್, ಜಾಪಟ್ ಕಡ್ಯಾಳ್, ಜಯಶೀಲ್ ಮಿರಾಗಂಜ್, ಮಾರುತಿ ಶಾಖಾ ಹಾಗೂ ರೋಹಿದಾಸ್ ಗೋಡೆ ಸೇರಿದಂತೆ ಇತರರು ಉಪಸ್ಥಿತರಿದ್ದರು.

ಮೀಸಲಾತಿ ಕುರಿತ ಸುಪ್ರೀಂ ಕೋರ್ಟ್ ಆದೇಶ ಒಪ್ಪಲಾಗದು : ವಿಚಾರಣೆ ಸಂವಿಧಾನ ಪೀಠಕ್ಕೆ ಒಪ್ಪಿಸುವಂತೆ ಸಿಪಿಎಂ ಆಗ್ರಹ



ಕಲಬುರಗಿ,ಮಾ.27-

ಮೀಸಲಾತಿ ಕುರಿತಂತೆ ಸುಪ್ರೀಂ ಕೋರ್ಟ್ ನೀಡಿರುವ ಇತ್ತೀಚಿನ ಆದೇಶವನ್ನು ಯಾವುದೇ ಕಾರಣಕ್ಕೂ ಒಪ್ಪಲಾಗದು ಎಂದು ಭಾರತ ಕಮ್ಯುನಿಸ್ಟ್ ಪಕ್ಷ (ಮಾರ್ಕ್ಸ್‌ವಾದಿ) ಪೊಲಿಟ್ ಬ್ಯೂರೋ ತೀವ್ರ ಆಕ್ಷೇಪ ವ್ಯಕ್ತಪಡಿಸಿದೆ.

ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಪಕ್ಷದ ಜಿಲ್ಲಾ ಕಾರ್ಯದರ್ಶಿ ಕೆ.ನೀಲಾ, ಆಂಧ್ರಪ್ರದೇಶ ಹೈಕೋರ್ಟ್ ನೀಡಿದ ತೀರ್ಪಿನ ಅನ್ವಯ, ಒಬ್ಬ ವ್ಯಕ್ತಿ ಕ್ರಿಶ್ಚಿಯನ್ ಧರ್ಮಕ್ಕೆ ಮತಾಂತರಗೊಂಡು ಅದನ್ನು ಸಂಪೂರ್ಣವಾಗಿ ಅನುಸರಿಸಿದರೆ, ಅವರನ್ನು ಪರಿಶಿಷ್ಟ ಜಾತಿಗೆ ಸೇರಿದ್ದವರಾಗಿ ಪರಿಗಣಿಸಲಾಗುವುದಿಲ್ಲ ಎಂಬ ನಿರ್ಧಾರವನ್ನು ಸುಪ್ರೀಂ ಕೋರ್ಟ್ ಅನುಮೋದಿಸಿರುವುದನ್ನು ಸಿಪಿಐ(ಎಂ) ವಿರೋಧಿಸುತ್ತದೆ ಎಂದಿದ್ದಾರೆ.

ಪರಿಶಿಷ್ಟ ಜಾತಿ ಸಮುದಾಯಗಳಿಗೆ ನೀಡಲಾಗುವ ಮೀಸಲಾತಿ ಮತ್ತು ಇತರ ರಕ್ಷಣಾತ್ಮಕ ಕ್ರಮಗಳು ಅವರ ಸಾಮಾಜಿಕ ಹಾಗೂ ಆರ್ಥಿಕ ಹಿನ್ನಲೆಯಲ್ಲಿ ಆಧಾರಿತವಾಗಿರಬೇಕು. ಆದರೆ ಪ್ರಸ್ತುತ ತೀರ್ಪು ಈ ಮೂಲ ತತ್ವಗಳನ್ನು ಕಡೆಗಣಿಸಿ ಧಾರ್ಮಿಕ ಗುರುತಿಗೆ ಹೆಚ್ಚು ಪ್ರಾಮುಖ್ಯತೆ ನೀಡುತ್ತಿದೆ ಎಂದು ಅವರು ಆರೋಪಿಸಿದ್ದಾರೆ.

ಈ ತೀರ್ಪು ಸಂವಿಧಾನದಲ್ಲಿ ನಿರ್ದಿಷ್ಟಪಡಿಸಿರುವ ಮೀಸಲಾತಿಯ ಉದ್ದೇಶವನ್ನೇ ದುರ್ಬಲಗೊಳಿಸುವ ಸಾಧ್ಯತೆ ಇದೆ ಎಚ್ಚರಿಸಿದ್ದಾರೆ. ಆದ್ದರಿಂದ, ಈ ಆದೇಶವನ್ನು ಪುನರ್ ಪರಿಶೀಲಿಸಿ, ಅಗತ್ಯವಿದ್ದಲ್ಲಿ ಪರಿಷ್ಕರಿಸಲು ಸಂವಿಧಾನ ಪೀಠಕ್ಕೆ ಒಪ್ಪಿಸಬೇಕು ಎಂದು ಅವರು ಆಗ್ರಹಿಸಿದ್ದಾರೆ.


ದೊಡ್ಡ ಲಿಖಿತ ಸಂವಿಧಾನವಿದ್ದರೂ ಮಾನವ ಹಕ್ಕುಗಳ ಉಲ್ಲಂಘನೆ : ಪ್ರೊ.ಎಚ್.ಟಿ. ಪೋತೆ ಕಳವಳ

ಕಲಬುರಗಿ,ಮಾ.27-

ಭಾರತ ದೇಶವು ವಿಶ್ವದ ಅತಿ ದೊಡ್ಡ ಲಿಖಿತ ಸಂವಿಧಾನ ಹೊಂದಿದ್ದರೂ ಸಹ ಇಂದಿಗೂ ಮಾನವ ಹಕ್ಕುಗಳ ಉಲ್ಲಂಘನೆ ನಿತ್ಯ ನಡೆಯುತ್ತಿರುವುದು ದುರಾದೃಷ್ಟಕರ ಸಂಗತಿಯಾಗಿದೆ ಎಂದು ಗುಲ್ಬರ್ಗಾ ವಿಶ್ವವಿದ್ಯಾಲಯದ ಕನ್ನಡ ವಿಭಾಗದ ಮುಖ್ಯಸ್ಥರು ಹಾಗೂ ಪ್ರಸಾರಾಂಗದ ನಿರ್ದೇಶಕರಾದ ಪ್ರೊ. ಹೆಚ್.ಟಿ. ಪೋತೆ ಅವರು ಕಳವಳ ವ್ಯಕ್ತಪಡಿಸಿದರು.

ನಗರದ ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಶ್ರೀಮತಿ ವೀರಮ್ಮ ಗಂಗಸಿರಿ ಮಹಿಳಾ ಮಹಾವಿದ್ಯಾಲಯ ಹಾಗೂ ಸರಕಾರಿ ಕಾಲೇಜುಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾದ ''ಭಾರತೀಯ ಸಾಹಿತ್ಯದಲ್ಲಿ ಮಾನವ ಹಕ್ಕುಗಳು'' ಕುರಿತ ಒಂದು ದಿನದ ಅಂತರಾಷ್ಟ್ರೀಯ ಸಮ್ಮೇಳನವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಜಗತ್ತಿನಲ್ಲಿ ಬಸವಾದಿ ಶರಣರ ಚಿಂತನೆಗಳ ಅವಶ್ಯಕತೆ ಅತ್ಯಂತ ಮಹತ್ವದ್ದಾಗಿದೆ ಎಂದು ಅವರು ಅಭಿಪ್ರಾಯಪಟ್ಟರು.



ಸಮಾಜದಲ್ಲಿ ಸಫಾಯಿ ಕರ್ಮಚಾರಿಗಳಲ್ಲಿ ತಾಯಿತನದ ಗುಣ ಕಾಣಿಸಿಕೊಳ್ಳುತ್ತದೆ. ಆದರೆ, ಉನ್ನತ ಸ್ಥಾನಮಾನದಲ್ಲಿರುವವರಲ್ಲಿ ಅಂಥ ಗುಣ ಕಾಣಿಸಿಕೊಳ್ಳದಿರುವುದು ವಿಷಾದನೀಯ ಸಂಗತಿ ಎಂದರು.

ಸ್ವಾತಂತ್ರ್ಯ, ಸಮಾನತೆ ಮತ್ತು ಭ್ರಾತೃತ್ವದ ಮೌಲ್ಯಗಳನ್ನು ಪ್ರತಿಯೊಬ್ಬರೂ ಪಾಲಿಸಿಕೊಂಡು ಬಂದಾಗ ಮಾತ್ರ ಸಮಾಜದ ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ದೊರೆಯುತ್ತದೆ. ಈ ನಿಟ್ಟಿನಲ್ಲಿ ಲೇಖಕರು, ವಿದ್ವಾಂಸರು ಮತ್ತು ಚಿಂತಕರು ಹೆಚ್ಚಿನ ಹೊಣೆಗಾರಿಕೆಯನ್ನು ಹೊತ್ತುಕೊಳ್ಳಬೇಕಾಗಿದೆ ಎಂದು ಅವರು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಹೈದರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಆಡಳಿತ ಮಂಡಳಿ ಸದಸ್ಯರು ಹಾಗೂ ಪದವಿ ಮತ್ತು ಪದವಿ ಪೂರ್ವ ಕಾಲೇಜುಗಳ ಸಂಚಾಲಕರಾದ ನಾಗಣ್ಣ ಘಂಟಿ ವಹಿಸಿದ್ದರು. ವೇದಿಕೆಯ ಮೇಲೆ ಆಡಳಿತ ಮಂಡಳಿ ಸದಸ್ಯರಾದ ಅನಿಲ್ ಕುಮಾರ್ ಮರಗೋಳ ಉಪಸ್ಥಿತರಿದ್ದರು.

ಮಹಾವಿದ್ಯಾಲಯಗಳ ಪ್ರಾಚಾರ್ಯರಾದ ಡಾ.ಆರ್.ಬಿ.ಕೊಂಡ, ಡಾ.ಸವಿತಾ ತಿವಾರಿ, ಸರಕಾರಿ ಕಾಲೇಜಿನ ಕನ್ನಡ ವಿಭಾಗದ ಮುಖ್ಯಸ್ಥರಾದ ಡಾ.ಶಾರದಾ ಜಾಧವ್, ವಿ.ಜಿ. ಕಾಲೇಜಿನ ಹಿಂದಿ ವಿಭಾಗದ ಮುಖ್ಯಸ್ಥರಾದ ಡಾ.ಪ್ರೇಮಚಂದ್ ಚವ್ಹಾಣ, ಡಾ.ಶಂಕರ ಕವಿತಾ ಉಪಸ್ಥಿತರಿದ್ದರು.

ಕಾರ್ಯಕ್ರಮದಲ್ಲಿ ಕೇಂದ್ರೀಯ ವಿಶ್ವವಿದ್ಯಾಲಯದ ಪ್ರೊ.ವಿಕ್ರಮ ವಿಸಾಜಿ, ಹಿಂದಿ ವಿಭಾಗದ ಮುಖ್ಯಸ್ಥರಾದ ಪ್ರೊ.ಸಂದೀಪ್ ರಣಬೀಕರ ನಿವೃತ್ತ ಪ್ರಾಧ್ಯಾಪಕರಾದ ಡಾ.ವಿಜಯಕುಮಾರ್ ಪರುತೆ, ಪ್ರೊ.ಧನ್ಯಕುಮಾರ ಬಿರಾಜದಾರ, ಡಾ.ಮಹೇಶ್ ಗಂವ್ಹಾರ ಸೇರಿದಂತೆ ದೇಶದ ವಿವಿಧ ಭಾಗಗಳಿಂದ ಆಗಮಿಸಿದ ಅಧ್ಯಾಪಕರು ಹಾಗೂ ಪ್ರತಿನಿಧಿಗಳು ಭಾಗವಹಿಸಿದ್ದರು.

ಡಾ.ರಾಜೇಂದ್ರ ಕೊಂಡ ಅವರು ಅತಿಥಿಗಳನ್ನು ಸ್ವಾಗತಿಸಿದರು. ಅಂತರರಾಷ್ಟ್ರೀಯ ಸಮ್ಮೇಳನದ ಕುರಿತು ಡಾ.ಪ್ರೇಮಚಂದ್ ಚವ್ಹಾಣ ಮತ್ತು ಡಾ.ಶಾರದಾ ಜಾಧವ್ ಪ್ರಾಸ್ತಾವಿಕವಾಗಿ ಮಾತನಾಡಿದರು.


ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಸಂಡೂರು ಸಂಪೂರ್ಣ ಬಂದ್

ಸಂಡೂರು (ಬಳ್ಳಾರಿ) ,ಮಾ.27-

ಪರಿಶಿಷ್ಟ ಜಾತಿಗಳ ಒಳ ಮೀಸಲಾತಿ ಜಾರಿಗೆ ಆಗ್ರಹಿಸಿ ಇಂದು ಸಂಡೂರಿನಲ್ಲಿ ಸಂಪೂರ್ಣ ಬಂದ್ ನಡೆಸಲಾಗಿದ್ದು, ಸಾರ್ವಜನಿಕ ಜೀವನ ಬಹುತೇಕ ಸ್ಥಗಿತಗೊಂಡಿತ್ತು.

ಆಸ್ಪತ್ರೆಗಳು ಮತ್ತು ಮೆಡಿಕಲ್ ಅಂಗಡಿಗಳನ್ನು ಹೊರತುಪಡಿಸಿ ಉಳಿದ ಎಲ್ಲಾ ವಾಣಿಜ್ಯ ಹಾಗೂ ಆಡಳಿತಾತ್ಮಕ ಚಟುವಟಿಕೆಗಳು ಸಂಪೂರ್ಣ ಬಂದ್ ಆಗಿದ್ದವು. ಬ್ಯಾಂಕುಗಳು, ಸಾರಿಗೆ ವ್ಯವಸ್ಥೆ, ತಾಲೂಕು ಪಂಚಾಯಿತಿ ಕಚೇರಿ, ವಿವಿಧ ಸರ್ಕಾರಿ ಕಚೇರಿಗಳು, ಮೈನಿಂಗ್ ಚಟುವಟಿಕೆಗಳು ಹಾಗೂ ಅಂಗಡಿಗಳು ಬಂದ್‌ಗೆ ಬೆಂಬಲ ಸೂಚಿಸಿದವು.

ಮಾದಿಗ ಸಮುದಾಯದ ವಿವಿಧ ಸಂಘಟನೆಗಳ ನೇತೃತ್ವದಲ್ಲಿ



ನಡೆದ ಈ ಹೋರಾಟದಲ್ಲಿ ಒಳ ಮೀಸಲಾತಿ ಜಾರಿಗಾಗಿ ಸರ್ಕಾರದ ವಿರುದ್ಧ ತೀವ್ರ ಆಕ್ರೋಶ ವ್ಯಕ್ತವಾಯಿತು. ಫೆ.27ರ, 2026ರಂದು ಹೊರಡಿಸಿರುವ ಒಳ ಮೀಸಲಾತಿಯಿಲ್ಲದ ನೇಮಕಾತಿ ಆದೇಶವನ್ನು ಕೂಡಲೇ ಹಿಂಪಡೆಯಬೇಕು ಎಂದು ಪ್ರತಿಭಟನಾಕಾರರು ಆಗ್ರಹಿಸಿದರು.

ಹೋರಾಟದ ಮುಖಂಡರು ಮಾತನಾಡಿ, ಪರಿಶಿಷ್ಟ ಜಾತಿಗಳ ಒಳ ಮೀಸಲಾತಿಗೆ ಸಂಬಂಧಿಸಿದಂತೆ ಹಲವು ದಶಕಗಳ ಹೋರಾಟದ ನಂತರ ಕಾನೂನು ಮಾನ್ಯತೆ ದೊರೆತಿದ್ದರೂ,

ಅದನ್ನು ಜಾರಿಗೆ ತರದೆ ಸಾವಿರಾರು ಉದ್ಯೋಗಾವಕಾಶಗಳನ್ನು ಕಳೆದುಕೊಳ್ಳುವ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆರೋಪಿಸಿದರು. ಸುಮಾರು 3,387ಕ್ಕೂ ಹೆಚ್ಚು ಹುದ್ದೆಗಳು ಹಾಗೂ ಮಾದಿಗ ಸಮುದಾಯಕ್ಕೆ ಸೇರಬೇಕಾದ ಸಾವಿರಾರು ಉದ್ಯೋಗಗಳು ಅನ್ಯಾಯವಾಗಿ ಕಳೆದು ಹೋಗುವ ಸಾಧ್ಯತೆ ಇದೆ ಎಂದು ತಿಳಿಸಿದರು.

ಇದಲ್ಲದೆ, ಪರಿಶಿಷ್ಟ ಜಾತಿಗಳ ಮೀಸಲಾತಿಯೊಳಗೆ ನ್ಯಾಯ ಸಮ್ಮತ ಒಳ ಮೀಸಲಾತಿ ಕಲ್ಪಿಸುವುದು, ಒಟ್ಟು 56% ಮೀಸಲಾತಿಯನ್ನು ಸಂವಿಧಾನದ 9ನೇ ಅನುಸೂಚಿಗೆ ಸೇರಿಸುವುದು ಹಾಗೂ ಶಿಕ್ಷಣದಿಂದ ಉದ್ಯೋಗದವರೆಗೆ ಎಲ್ಲಾ ಕ್ಷೇತ್ರಗಳಲ್ಲಿ ಒಳ ಮೀಸಲಾತಿ ಜಾರಿಗೊಳಿಸುವಂತೆ ಒತ್ತಾಯಿಸಿದರು.

ನಾಳೆ ನಡೆಯಲಿರುವ ವಿಶೇಷ ಸಚಿವ ಸಂಪುಟ ಸಭೆಯಲ್ಲಿ ಈಗಾಗಲೇ ನಡೆದ ಸಮೀಕ್ಷೆಯ ಆಧಾರದ ಮೇಲೆ ವರ್ಗೀಕರಣದ ಒಳ ಮೀಸಲಾತಿಯನ್ನು ಜಾರಿಗೊಳಿಸಬೇಕು. ಇಲ್ಲವಾದಲ್ಲಿ ಮುಂದಿನ ದಿನಗಳಲ್ಲಿ ಉಗ್ರ ಹೋರಾಟ ಕೈಗೊಳ್ಳಲಾಗುವುದು ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಶಿವಲಿಂಗಪ್ಪ, ರಾಮಕೃಷ್ಣ ಹೆಗಡೆ, ದೇವದಾಸ್, ರಾಜೇಶ್ ಹೆಗಡೆ, ಸತೀಶ್ ಹೆಗಡೆ, ಮಲಿಯಪ್ಪ, ತಾಯಪ್ಪ ಸೇರಿದಂತೆ ವಿವಿಧ ಸಂಘಟನೆಗಳ ಮುಖಂಡರು ಹಾಗೂ ಯುವಕರು ಭಾಗವಹಿಸಿದ್ದರು.

ಸರ್ಕಾರ ತಕ್ಷಣ ಸ್ಪಂದಿಸದಿದ್ದಲ್ಲಿ ರಾಜ್ಯಾದ್ಯಂತ ಹೋರಾಟವನ್ನು ಮತ್ತಷ್ಟು ತೀವ್ರಗೊಳಿಸಲಾಗುವುದು ಎಂದು ಸಂಘಟನೆಗಳು ಎಚ್ಚರಿಕೆ ನೀಡಿವೆ.

ನಿಮ್ಮೂರು ಸುದ್ದಿ

ಸಂಪಾದಕೀಯ

ಕಾಂಗ್ರೆಸ್‌ನ ಢೋಂಗಿತನ; ಮುಸಲ್ಮಾನರಿಗೆ ನಿರಂತರ ದ್ರೋಹ



72 ವರ್ಷ ವಯಸ್ಸಿನ ಕಟ್ಟಾ ಕಾಂಗ್ರೆಸಿಗ ಸಾದಿಕ್ ಪೈಲ್ವಾನ್ ಅವರು ತಮ್ಮ ರಾಜಕೀಯ ಗುರು ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ 27ವರ್ಷದ ಸಮರ್ಥ್ ವಿರುದ್ಧ ತೊಡೆ ತಟ್ಟಿ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದರು. ನಾಮಪತ್ರ ವಾಪಸ್ ಪಡೆಯದೇ ಕಾಂಗ್ರೆಸ್‌ಗೆ ಸೆಡ್ಡು ಹೊಡೆದಿದ್ದರು. ಆದರೆ ಇಂದು ಸಿಎಂ ಸಿದ್ದರಾಮಯ್ಯ ಅವರ ಮನೆಯಲ್ಲಿ ನಡೆದ ಸಂಧಾನಕ್ಕೆ ಪೈಲ್ವಾನ್ ಮಣಿದಿದ್ದಾರೆ.

ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಶಾಸಕ ಶಾಮನೂರು ಶಿವಶಂಕರಪ್ಪ ಅವರ ನಿಧನದಿಂದ ತೆರವಾಗಿರುವ ಸ್ಥಾನಕ್ಕೆ ಏಪ್ರಿಲ್ 9ರಂದು ಚುನಾವಣೆ ನಡೆಯಲಿದೆ. ಮುಸ್ಲಿಮರೇ ಬಹುಸಂಖ್ಯಾತರಾಗಿರುವ ಈ ಕ್ಷೇತ್ರದಲ್ಲಿ ಕಳೆದ ವಿಧಾನಸಭಾ ಚುನಾವಣೆಯ ವೇಳೆ ಮುಸ್ಲಿಮರು ತಮ್ಮ ಹಕ್ಕಿನ ಟಿಕೆಟ್‌ಗಾಗಿ ಧ್ವನಿ ಎತ್ತಿದ್ದರು. ಅದರಲ್ಲೂ ಶಾಮನೂರು ಅವರ ಬಲಗೈ ಬಂಟ ಎನಿಸಿಕೊಂಡಿದ್ದ ಸಾದಿಕ್ ಪೈಲ್ವಾನ್ ಪ್ರಮುಖ ಆಕಾಂಕ್ಷಿಯಾಗಿದ್ದರು. ಕಳೆದ ಚುನಾವಣೆಯಲ್ಲಿ ಅವರು ಟಿಕೆಟ್‌ಗಾಗಿ ಹರ ಸಾಹಸಪಟ್ಟಿದ್ದರು. ಕಡೆಗೂ 93 ವರ್ಷದ ಶಾಮನೂರು ಶಿವಶಂಕರಪ್ಪ ಅವರಿಗೇ ಕಾಂಗ್ರೆಸ್ ಟಿಕೆಟ್ ಕೊಟ್ಟಿತ್ತು. ಮಗ ಮಲ್ಲಿಕಾರ್ಜುನ ಅವರಿಗೂ ಟಿಕೆಟ್ ನೀಡಲಾಗಿತ್ತು. ಅಪ್ಪ ಮಗ ಇಬ್ಬರೂ ಗೆದ್ದು ಬಂದಿದ್ದರು. ಒಂದೇ ವರ್ಷದಲ್ಲಿ ನಡೆದ ಲೋಕಸಭಾ ಚುನಾವಣೆಯಲ್ಲಿ ಮತ್ತೆ ಶಾಮನೂರು ಸೊಸೆ ಡಾ ಪ್ರಭಾ ಮಲ್ಲಿಕಾರ್ಜುನ ಅವರಿಗೆ ಟಿಕೆಟ್ ಕೊಟ್ಟು ಮುಸ್ಲಿಮರಿಗೆ ಕಾಂಗ್ರೆಸ್ ಮತ್ತೆ ಅನ್ಯಾಯ ಎಸಗಿತ್ತು.

ಅನಿವಾರ್ಯವಾಗಿ ಬಂದೊದಗಿದ ಉಪ ಚುನಾವಣೆಯಲ್ಲಾದರೂ ಪ್ರಬಲ ಕಾಂಗ್ರೆಸ್ ಆಕಾಂಕ್ಷಿ ಸಾದಿಕ್ ಅವರಿಗೆ ಟಿಕೆಟ್ ಸಿಗಬಹುದು ಎಂಬ ನಿರೀಕ್ಷೆ ಇತ್ತು. ಅದೂ ಹುಸಿಯಾಗಿದೆ. ದಾವಣಗೆರೆ ದಕ್ಷಿಣ ಕ್ಷೇತ್ರದಲ್ಲಿ ಸುಮಾರು 80ರಿಂದ 85 ಸಾವಿರ ಮುಸ್ಲಿಂ ಮತದಾರರಿದ್ದಾರೆ ಎಂದು ಅಂದಾಜಿಸಲಾಗಿದೆ. ಆದರೂ, ಆ ಸಮುದಾಯಕ್ಕೆ ರಾಜಕೀಯ ಪ್ರಾತಿನಿಧ್ಯ ಸಿಗದಿರುವುದು ಕಾಂಗ್ರೆಸ್‌ಗೆ ಮುಸ್ಲಿಮರು ವೋಟ್ ಬ್ಯಾಂಕ್ ಅಷ್ಟೇ ಎಂಬ ಆರೋಪಕ್ಕೆ ಪುಷ್ಟಿ ನೀಡುವಂತಿದೆ. ಒಂದು ಕಡೆ ಕುಟುಂಬ ರಾಜಕಾರಣವನ್ನು ಮುಂದುವರಿಸುತ್ತಿರುವುದು, ಮತ್ತೊಂದು ಕಡೆ ಮುಸಲ್ಮಾನರನ್ನು ವೋಟ್ ಬ್ಯಾಂಕ್ ಆಗಿ ಮಾತ್ರ ಬಳಕೆ ಮಾಡಿಕೊಳ್ಳುವುದು ಕಾಂಗ್ರೆಸ್‌ನ ಎಡಬಿಡಂಗಿತನದ ಮುಖವಾಡವನ್ನು ಬಯಲು ಮಾಡಿದೆ.

72 ವರ್ಷ ವಯಸ್ಸಿನ ಕಟ್ಟಾ ಕಾಂಗ್ರೆಸಿಗ ಸಾದಿಕ್ ಪೈಲ್ವಾನ್ ಅವರು ತಮ್ಮದ್ದೇ ರಾಜಕೀಯ ಗುರು ಶಾಮನೂರು ಶಿವಶಂಕರಪ್ಪ ಅವರ ಮೊಮ್ಮಗ 27ವರ್ಷದ ಸಮರ್ಥ್ ವಿರುದ್ಧ ತೊಡೆ ತಟ್ಟಿ ಪಕ್ಷೇತರ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದರು. ನಿನ್ನೆ ನಾಮಪತ್ರ ವಾಪಸ್ ಪಡೆಯಲು ಕಡೆಯ ದಿನವಾಗಿತ್ತು. ವಾಪಸ್ ಪಡೆಯದೇ ಕಾಂಗ್ರೆಸ್‌ಗೆ ಸೆಡ್ಡು ಹೊಡೆದಿದ್ದರು. ಆದರೆ ಇಂದು ಸಿಎಂ ಸಿದ್ದರಾಮಯ್ಯ ಅವರ ಮನೆಯಲ್ಲಿ ನಡೆದ ಸಂಧಾನಕ್ಕೆ ಪೈಲ್ವಾನ್ ಮಣಿದಿದ್ದಾರೆ. ಕಾಂಗ್ರೆಸ್ ಅಭ್ಯರ್ಥಿಗೆ ಬೆಂಬಲಿಸುವ ತೀರ್ಮಾನ ಮಾಡಿದ್ದಾರೆ. ಅತ್ತ ಎಸ್‌ಡಿಪಿಐ ಕೂಡ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ.

ಈ ಉಪ ಚುನಾವಣೆಯಲ್ಲಿ ಶಾಮನೂರು ಕುಟುಂಬಕ್ಕೆ ಟಿಕೆಟ್ ನೀಡಿರುವುದನ್ನು ಸಮರ್ಥಿಸಲು ಅನುಕಂಪದ ಕಾರ್ಡ್ ಪ್ಲೇ ಮಾಡುತ್ತಿರುವ ಕಾಂಗ್ರೆಸ್ 2023ರಲ್ಲಿ ಮುಸ್ಲೀಮರಿಗೆ ಯಾಕೆ ಟಿಕೆಟ್ ನಿರಾಕರಿಸಿತು ಎಂಬುದಕ್ಕೆ ಉತ್ತರಿಸಬೇಕಿದೆ. ಬದುಕಿನ ಸಂಧ್ಯಾಕಾಲದಲ್ಲಿದ್ದ 93 ವರ್ಷದ ಶಾಮನೂರು ಅವರಿಗೆ ಟಿಕೆಟ್ ನೀಡುವ ಬದಲು ಪೈಲ್ವಾನ್ ಅವರಿಗೆ ಟಿಕೆಟ್ ನೀಡಬೇಕಿತ್ತು. ತಮ್ಮ ನಿಷ್ಠಾವಂತ ಬೆಂಬಲಿಗನಿಗೆ ಟಿಕೆಟ್ ನೀಡುವಂತೆ ಶಾಮನೂರು ಕುಟುಂಬವೇ ಉದಾರತೆ ತೋರಬೇಕಿತ್ತು. ಒಂದೇ ಮನೆಯಲ್ಲಿ ಇಬ್ಬರು ಶಾಸಕರು, ಒಬ್ಬರು ಸಂಸದೆ ಇದ್ದಾಗಲೂ ಮುಸ್ಲಿಂ ಸಮುದಾಯ ಸುಮ್ಮನಿತ್ತು. ಈಗ ಶಾಮನೂರು ನಿಧನರಾದ ಮೇಲೂ ಆ ಕ್ಷೇತ್ರದಲ್ಲಿ ಒಬ್ಬ ಮುಸ್ಲಿಂ ವ್ಯಕ್ತಿಗೆ ಟಿಕೆಟ್ ಕೊಡಲು ಆ ಕುಟುಂಬ ಬಿಡುತ್ತಿಲ್ಲ ಎಂಬುದು ನಿಜಕ್ಕೂ ವಿಶ್ವಾಸದ್ರೋಹದ ಕೆಲಸ. ಈ ಬಾರಿ ಸಮರ್ಥ್‌ಗೆ ಅನುಕಂಪದ ಟಿಕೆಟ್ ಕೊಟ್ಟಿರುವ ಕಾಂಗ್ರೆಸ್ 2028ರಲ್ಲಿ ಮುಸ್ಲಿಂ ಅಭ್ಯರ್ಥಿಗೆ ಟಿಕೆಟ್ ನೀಡಲಿದೆಯೇ? ಅಂತಹ ಮಾತುಗಳು ಕಾಂಗ್ರೆಸ್‌ನಿಂದ ಬಂದಿಲ್ಲ. ಬಿ ಫಾರಂ ಕೊಟ್ಟ ಮರುದಿನವೇ ಸಿಎಂ, ಡಿಸಿಎಂ ಕ್ಷೇತ್ರದಲ್ಲಿ ಬೃಹತ್ ರ್‍ಯಾಲಿ ಮಾಡಿ ಮತ ಯಾಚಿಸಿದ್ದಾರೆ. ಕೆಲವು ಅತೃಪ್ತ ಮುಸಲ್ಮಾನರು ಕಾಂಗ್ರೆಸ್ ಬಿಟ್ಟು ಬಿಜೆಪಿ ಸೇರಿದ್ದಾರೆ. ಇವೆಲ್ಲ ಕ್ಷಣಿಕ ಆವೇಶದ ನಡೆ ಇರಬಹುದು; ಆದರೆ ಪಕ್ಕಾ ಕಾಂಗ್ರೆಸ್ ಕ್ಷೇತ್ರ ಬಿಜೆಪಿ ಕೈವಶವಾಗಲು ಇದು ಕಾರಣವಾದರೆ ಅಚ್ಚರಿಯಿಲ್ಲ.

ಕರ್ನಾಟಕದ 2023ರ ವಿಧಾನಸಭಾ ಚುನಾವಣೆ ಗಮನಿಸಿದರೆ ಇಡೀ ರಾಜ್ಯದಲ್ಲಿ ಮುಸ್ಲಿಂ ಸಮುದಾಯ ಒಂದಾಗಿ ಕಾಂಗ್ರೆಸ್ ಬೆಂಬಲಿಸಿದೆ. ಪರಂಪರಾಗತವಾಗಿ ಜೆಡಿಎಸ್‌ಗೆ ಹೋಗುತ್ತಿದ್ದ ಮತಗಳೂ ಕಾಂಗ್ರೆಸ್ ಬುಟ್ಟಿಗೆ ಬಿದ್ದಿವೆ. ಕಾಂಗ್ರೆಸ್ ಕೂಡ 130 ಸೀಟುಗಳ ಗಡಿ ದಾಟುವ ವಿಶ್ವಾಸ ಹೊಂದಿರಲಿಲ್ಲ. ಈ ದಿನ.ಕಾಮ್ ಸರ್ವೆ ಮಾತ್ರ ಕಾಂಗ್ರೆಸ್ 134ರ ಗಡಿ ದಾಟುವ ಸೂಚನೆ ನೀಡಿತ್ತು. ಈ ದೊಡ್ಡ ಗೆಲುವಿನ ಪಾಲು ಮುಸ್ಲಿಂ ಮತದಾರರಿಗೂ ಸೇರಬೇಕು. ಆದರೆ, ಅಧಿಕಾರ -ಅವಕಾಶ ನೀಡುವ ಸಮಯದಲ್ಲಿ ಮುಸ್ಲಿಂ ಸಮುದಾಯದವರು ಅತ್ತೂ ಕರೆದು ಅವಕಾಶ ಪಡೆದುಕೊಳ್ಳುವ ಸ್ಥಿತಿ ನಿರ್ಮಾಣ ಮಾಡಿರುವ ಕಾಂಗ್ರೆಸ್ ಮುಂದಿನ ದಿನಗಳಲ್ಲಿ ಪಾಠ ಕಲಿಯಲೇಬೇಕು. ಇಷ್ಟೊಂದು ಬಹುಮತದ ಸರ್ಕಾರ ಇರುವಾಗ ದಾವಣಗೆರೆ ದಕ್ಷಿಣದ ಟಿಕೆಟ್ ನೀಡುವಾಗ ಅನುಕಂಪವೆಂಬ ಹಳಸಲು ನಿಯಮ ಮೀರಿ ಹೆಚ್ಚು ಮತದಾರರಿದ್ದು ಸಲೀಸಾಗಿ ಗೆಲ್ಲಬಹುದಾದ ಮುಸ್ಲಿಂ ವ್ಯಕ್ತಿಗೆ ಟಿಕೆಟ್ ನೀಡಿ ತನ್ನ ಬದ್ಧತೆ ತೋರಬೇಕಿತ್ತು. ಆದರೆ, ಕಾಂಗ್ರೆಸ್ ಹೈಕಮಾಂಡ್ ಕೂಡ ಶಾಮನೂರು ಕುಟುಂಬದ ಒತ್ತಡಕ್ಕೆ ಮಣಿದು ಮುಸಲ್ಮಾನರ ಸಿಟ್ಟಿಗೆ ಗುರಿಯಾಗಿದೆ. ರಾಹುಲ್ ಗಾಂಧಿಯವರ ಚಿಂತನೆ, ಅವರ ಬದ್ಧತೆ, ಆಲೋಚನೆಯೇ ಬೇರೆ. ತಳಮಟ್ಟದಲ್ಲಿ ಕಾಂಗ್ರೆಸ್ ಧೋರಣೆಯೇ ಬೇರೆ ಎಂಬುದು ಈ ಉಪಚುನಾವಣೆಯಲ್ಲಿ ಸ್ಪಷ್ಟವಾಗಿ ಕಣ್ಣಿಗೆ ರಾಚುತ್ತಿದೆ.

ಉಪಚುನಾವಣೆಯ ಕುಸ್ತಿ ಕಣದಿಂದ ಸಾದಿಕ್ ಹಿಂದೆ ಸರಿದಿರಬಹುದು, ಅದಕ್ಕಾಗಿ ಸಿಎಂ ನಡೆಸಿದ ಸಂಧಾನ ಯಶಸ್ವಿಯಾಗಿರಬಹುದು. ಆದರೆ, ಮುಸ್ಲಿಮರ ಮನಸ್ಸಿನಲ್ಲಿ ಕಾಂಗ್ರೆಸ್ ವಿರುದ್ಧ ಅಸಹನೆ ಹೊಗೆಯಾಡದಿರದು. ಮುಂದಿನ ಚುನಾವಣೆಯ ವೇಳೆಗೆ ಅದೇನಾದರೂ ದಟ್ಟವಾದರೆ ಫಲಿತಾಂಶ ಏನು ಬೇಕಾದರೂ ಆಗಬಹುದು ಎಂಬ ಎಚ್ಚರ ಕಾಂಗ್ರೆಸ್ ಹೈಕಮಾಂಡ್‌ಗೆ ಇದ್ದರೆ ಒಳಿತು. ಅದಕ್ಕಿಂತಲೂ ಮುಖ್ಯವಾಗಿ ಕಾಂಗ್ರೆಸ್ ಪಕ್ಷವನ್ನು ಬೆಂಬಲಿಸುತ್ತ ಬಂದ ಅಲ್ಪಸಂಖ್ಯಾತರಿಗೆ ಅವರ ಹಕ್ಕಿನ ಅವಕಾಶ ನೀಡುವ ಉದಾರತೆ ಕಾಂಗ್ರೆಸ್ ತೋರಬೇಕಿದೆ.

ರಾಯಚೂರು ಸುಸಜ್ಜಿತ ನೀರಿನ ಟ್ಯಾಂಕ್‌ಗಳು ನೋಟಕಷ್ಟೇ, ಬಳಕೆಗಿಲ್ಲ

ದೇವದುರ್ಗ ತಾಲೂಕಿನ ಮುಷ್ಟೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ಜನರಿಗೆ ಶುದ್ಧ ನೀರು ಒದಗಿಸಲು ನಿರ್ಮಿಸಲಾದ ಹೈಟೆಕ್ ಟ್ಯಾಂಕ್‌ಗಳು ಇಂದು ಕೇವಲ ಪ್ರದರ್ಶನ ವಸ್ತುಗಳಾಗಿವೆ. ಒಂಬತ್ತು ಗ್ರಾಮಗಳ ಪೈಕಿ 8 ಕಡೆ ಸುಸಜ್ಜಿತ ಟ್ಯಾಂಕ್‌ಗಳಿದ್ದರೂ, ನಿರ್ವಹಣೆಯಿಲ್ಲದೆ ಅವುಗಳ ಕಂಬಿಗಳು ತುಕ್ಕು ಹಿಡಿಯುತ್ತಿವೆ. ಪರಿಣಾಮವಾಗಿ, ಸುಡುವ ಬೇಸಿಗೆಯಲ್ಲಿ ಹನಿ ನೀರಿಗಾಗಿ ಗ್ರಾಮಸ್ಥರು ಮೈಲುಗಟ್ಟಲೆ ಅಲೆಯುವಂತಾಗಿದ್ದು, ಸ್ಥಳೀಯ ಆಡಳಿತದ ವಿರುದ್ಧ ಜನಾಕ್ರೋಶ ವ್ಯಕ್ತವಾಗಿದೆ.

ಇದೇ ಸಮಸ್ಯೆಯ ಕುರಿತು ಕಳೆದ ವರ್ಷವೂ ಮೇಲಿಂದ ಮೇಲೆ ವರದಿಗಳು, ಮನವಿಗಳು ಹೋದರೂ ಯಾವ ಅಧಿಕಾರಿಯೂ ಕ್ಯಾರೆ ಅಂದಿಲ್ಲ. ಲಕ್ಷಾಂತರ ಅನುದಾನ ತಂದು ಸುರಿದರೂ ಹನಿ ನೀರಿಗೂ ಪರದಾಡಬೇಕಾದ ಸಂದರ್ಭ ಸೃಷ್ಟಿಸಿರುವುದು ಯಾರು? ಹಾಗಾದರೆ ಅಭಿವೃದ್ಧಿಯ ಅನುದಾನ ಎಲ್ಲಿಗೆ ಸೇರಿತು? ಸಾಮಾನ್ಯ ಜನರ ಕುರಿತು ಕಿಂಚಿತ್ತೂ ಕಾಳಜಿಯಿಲ್ಲದ ಜನಪ್ರತಿನಿಧಿಗಳು, ಅವರು ಹೇಳಿದಂತೆ ಕೇಳಿಕೊಂಡಿರುವ ಅಧಿಕಾರಿಗಳಿಂದ ಯಾವ ಅಭಿವೃದ್ಧಿಯನ್ನು ತಾನೆ ನಿರೀಕ್ಷಿಸಲು ಸಾಧ್ಯ? ಎನ್ನುತ್ತಿದ್ದಾರೆ ಗ್ರಾಮಸ್ಥರು.

ಜಲ ನಿರ್ಮಾಣ ಯೋಜನೆಯಲ್ಲಿ ಮತ್ತು ಗ್ರಾಮೀಣ ಕುಡಿಯುವ ನೀರು ಹಾಗೂ ನೈರ್ಮಲ್ಯ ಇಲಾಖೆ ಯೋಜನೆಯಡಿಯಲ್ಲಿ ಮೂಷ್ಟೂರು ಗ್ರಾಪಂ ವ್ಯಾಪ್ತಿಯ ಪಿಲಿಗುಂಡ ಗ್ರಾಮ 2, ಶಿವಂಗಿ 2, ಮಯಷ್ಟೂರು 1, ಚಿಂತಲಕುಂಟಿ 1, ಗೆಜ್ಜೀಬಾವಿ 1 ಹಾಗೂ ಆಲದತ್ತಿ 1 ಸೇರಿ ಒಟ್ಟು 8 ಹೈಟೆಕ್ ಟ್ಯಾಂಕ್‌ಗಳು ಬಳಕೆಯಿಲ್ಲದೆ ಪಾಳು ಬಿದ್ದಿವೆ ಎನ್ನುತ್ತಾರೆ ಗ್ರಾಮಸ್ಥರು.

ದಿನದಿಂದ ದಿನಕ್ಕೆ ಬಿಸಿಲಿನ ತಾಪಮಾನ ಏರುತ್ತಿದೆ. ಶುದ್ಧ ಜೀವ ಜಲಕ್ಕೆ ಪರಿತಪಿಸುವಂತಾಗಿದೆ. ಅಧಿಕಾರಿಗಳು ನೀರಿನ ಸಮಸ್ಯೆಗೆ ಸ್ಪಂದಿಸುತ್ತಿಲ್ಲ. ಶುದ್ಧ ಕುಡಿಯುವ ನೀರು ಪೂರೈಸುವಂತೆ ಜನಪ್ರತಿನಿಧಿಗಳ ಬಳಿ ಅಂಗಲಾಚುವುದು ಸಾಮಾನ್ಯವಾಗಿದೆ.

ಈ ಬಗ್ಗೆ ಸ್ಥಳೀಯ ನಿವಾಸಿ, ಹಿರಿಯ ಹೋರಾಟಗಾರ ಹಾಗೂ ಆಮ್ ಆದ್ಮಿ ಪಕ್ಷದ ಜಿಲ್ಲಾ ಮುಖಂಡ ಭೀಮರಾಯ ನಾಯ್ಕ ಈ ದಿನ ಡಾಟ್ ಕಾಮ್‌ನೊಂದಿಗೆ ಮಾತನಾಡಿ, ''2014, 15 ಹಾಗೂ 16ನೇ ವರ್ಷಗಳಲ್ಲಿ ನೀರಿನ ಸಮಸ್ಯೆಯನ್ನು ಬಗೆಹರಿಸಲು ಹೈಟೆಕ್ ಕುಡಿಯುವ ನೀರಿನ ಟ್ಯಾಂಕ್ ಗಳು ಉದ್ಘಾಟನೆಯಾದವು. ಕೇವಲ ಮೂರುನಾಲ್ಕು ತಿಂಗಳು ನೀರು ಹರಿಸಿದ್ದು ನಂತರ ಬಳಕೆಯಿಲ್ಲದೆ ಹೆಸರಿಗಷ್ಟೆ ಟ್ಯಾಂಕ್ ಗಳಾಗಿವೆ. ಅಲ್ಲಿಂದ ಇಲ್ಲಿಯವರೆಗೂ ಕೂಡ ಯಾರೂ ನಿರ್ವಹಣೆ ಹೊಣೆ ಹೊತ್ತಿಲ್ಲ. ಹೀಗೆ ತುಕ್ಕು ಹಿಡಿದು ಪಾಳು ಬಿದ್ದಿವೆ'' ಎಂದರು.



''ಸರ್ಕಾರ ಸಾವಿರಾರು ಕೋಟಿ ಹಣ ಖರ್ಚು ಮಾಡಿ ಘಟಕಗಳ ಸ್ಥಾಪನೆಗೆ ಮುಂದಾಗಿದೆ. ಆದರೆ ಸರಿಯಾಗಿ ನಿರ್ವಹಣೆ ಇಲ್ಲದೆ ಘಟಕಗಳು ಸ್ಥಗಿತಗೊಂಡು ಗ್ರಾಮಸ್ಥರಿಗೆ ನೀರಿಲ್ಲದೆ ಬೋರ್ ವೆಲ್‌ಗಳ ಮೊರೆ ಹೋಗಬೇಕಾಗಿದೆ. ಮಳೆ ಕೊರತೆಯಿಂದ ಕೊಳವೆಬಾವಿಗಳಲ್ಲಿ ಅಂತರ್ಜಲ ಕುಸಿತ ಮತ್ತು ನಿರ್ವಹಣೆ ಸಮಸ್ಯೆಯಿಂದ ಬೇಸಿಗೆ ಆರಂಭದಲ್ಲಿಯೇ ಪಟ್ಟಣ ಸೇರಿದಂತೆ ವಿವಿಧೆಡೆ ಹನಿ ನೀರಿಗಾಗಿ ಪರದಾಡುವ ಪರಿಸ್ಥಿತಿ ನಿರ್ಮಾಣವಾಗಿದೆ'' ಎಂದು ಅಧಿಕಾರಿಗಳ ವಿರುದ್ಧ ಆಕ್ರೋಶ ಹೊರಹಾಕಿದರು.

ನೀರಿನ ಚಿಂತೆ ಹಾಗೂ ಬಿಸಿಲಿನ ತಾಪ ಗ್ರಾಮೀಣ ಪ್ರದೇಶದಲ್ಲಿ ಮಹಿಳೆಯರ ನಿದ್ದೆಗೆಡಿಸಿದೆ. ಈ ಭಾಗದ ಜನರ ಸಮಸ್ಯೆ ಬಗ್ಗೆ ಹಲವು ಬಾರಿ ಅಧಿಕಾರಿಗಳ ಗಮನಕ್ಕೆ ತಂದರೂ ತಮಗೆ ಸಂಬಂಧವಿಲ್ಲದಂತೆ ಕಾಲ ಕಳೆಯುತ್ತಿದ್ದಾರೆ. ಅಧಿಕಾರಿಗಳಿಗೆ ಸಾರ್ವಜನಿಕರು ಕೇಳಿದರೆ ಉಡಾಫೆ ಉತ್ತರ ನೀಡುವುದು.. ಇಲ್ಲದಿದ್ದರೆ ನಮ್ಮ ಇಂಚಾರ್ಜ್ ಇಲ್ಲ, ಅದು ಟೆಂಡರ್ ಅವರೇ ಎಲ್ಲಾ ನಿರ್ವಹಿಸಬೇಕು ಎನ್ನುತ್ತಾರೆ. ಇಂತ ಅಧಿಕಾರಿಗಳು ಅಭಿವೃದ್ಧಿ ಮಾಡಲು ಹೇಗೆ ಸಾಧ್ಯ? ಇಂತಹವರನ್ನು ನೋಡಿಕೊಂಡು ಸುಮ್ಮನೇ ಕೂತಿರುವ ಜನಪ್ರತಿನಿಧಿಗಳೂ ಇವರಂತೆಯೇ ಅಲ್ಲವೇ?.

ಹಲವೆಡೆ ಗ್ರಾಮದ ಕುಂದು ಕೊರತೆಗಳ ಸಭೆ ನಡೆಸಿ, ಸಣ್ಣ ಪುಟ್ಟ ಹಳ್ಳಿಗಳಲ್ಲಿ ಟ್ಯಾಂಕರ್ ಮೂಲಕ ಕುಡಿಯುವ ನೀರು ಸರಬರಾಜು ಮಾಡಲಾಗುತ್ತಿದೆ. ಇದಕ್ಕೆ ಸಾವಿರಾರು ಹಣ ಖರ್ಚು ಮಾಡುವುದಕ್ಕಿಂತ ಇದ್ದಿದ್ದನ್ನು ಸರಿಯಾಗಿ ನಿರ್ವಹಣೆ ಮಾಡಿದರೆ ಉಪಯುಕ್ತವಾಗುತ್ತದೆ ಎಂದು ಅಭಿಪ್ರಾಯಪಟ್ಟರು.

ಮುಷ್ಟೂರು ಗ್ರಾಮದ ನಿವಾಸಿಯೊಬ್ಬರು ಮಾತನಾಡಿ, ''ಹೈಟೆಕ್ ನೀರಿನ ಟ್ಯಾಂಕ್ ಕಟ್ಟಿ ಮನೆ ಮನೆಗೆ ನೀರು ಹರಿಸಲಾಗುವುದು ಎಂದು ಅಧಿಕಾರಿಗಳು ಹೇಳಿ ಹೋದವರು ಮತ್ತೆ ಅದನ್ನು ನೋಡೋಕೂ ಬಂದಿಲ್ಲ. ಮನೆಯಲ್ಲಿ ನೀರು ತರಲು ಹೋದರೆ ಬೇರೆ ಕೆಲಸ ಮಾಡಲು ಆಗುವುದಿಲ್ಲ. ಬೇರೆ ಕೆಲಸಕ್ಕೆ ಹೋದರೆ ನೀರು ಸಿಗುವುದಿಲ್ಲ. ಬೋರ್ ವೆಲ್ ಇದ್ದವರ ಮನೆಗೆ ಹೋಗಿ ನೀರು ತರುವ ಪರಿಸ್ಥಿತಿಯಿದೆ'' ಎಂದರು.

ಸರ್ಕಾರಗಳೇನೋ ಕೋಟ್ಯಂತರ ಅನುದಾನ ನೀಡಿ ಗ್ರಾಮೀಣ ಪ್ರದೇಶಗಳ ಅಭಿವೃದ್ಧಿಗೆ ಯೋಜನೆಗಳನ್ನು ರೂಪಿಸುತ್ತಾರೆ. ಅವುಗಳನ್ನು ಕಾರ್ಯರೂಪಕ್ಕೆ ತಂದರೂ ಸಂಬಂಧಪಟ್ಟ ಅಧಿಕಾರಿಗಳು ಪ್ರಾಮಾಣಿಕವಾಗಿ ಕೆಲಸ ಮಾಡದಿದ್ದರೆ ಹೀಗೇ ಆಗುತ್ತದೆ. ಅಭಿವೃದ್ಧಿಯಾಗಲೀ, ಆಗದೇ ಇರಲಿ.. ಅಭಿವೃದ್ಧಿ ಹೆಸರಲ್ಲಿ ಪೋಲಾಗುವುದು ಜನರ ದುಡ್ಡು. ಇನ್ನು ಮುಂದೆಯಾದರೂ ಮುಷ್ಟೂರು ಗ್ರಾಪಂ ವ್ಯಾಪ್ತಿಯ ಅಧಿಕಾರಿಗಳು ಎಚ್ಚೆತ್ತು ಟ್ಯಾಂಕ್‌ಗಳ ಸದ್ಬಳಕೆಗೆ ಹಾಗೂ ಜನರಿಗೆ ಕುಡಿಯುವ ನೀರಿನ ಸಮರ್ಪಕ ಪೂರೈಕೆಗೆ ಕ್ರಮ ಕೈಗೊಳ್ಳುವರೇ ನೋಡಬೇಕಿದೆ.

ಕೇರಳ ಚುನಾವಣೆ ಪ್ರಗತಿಪರ ರಾಜ್ಯದಲ್ಲಿ ಮಹಿಳೆಯರಿಗಿಲ್ಲ ಟಿಕೆಟ್: ಪರಂಪರಾಗತ ಅನ್ಯಾಯ ಮುಂದುವರಿಕೆ

ಕೇರಳದಲ್ಲಿ ಉನ್ನತ ಮಟ್ಟದ ಮಹಿಳಾ ನಾಯಕಿಯರು ಇದ್ದರೂ ಅವರು ಬರೀ ಪ್ರಾಸಂಗಿಕ ನಾಯಕರು. ಅವರ ನಾಯಕತ್ವಕ್ಕೆ ಬೆಲೆಯೂ ಇಲ್ಲ. ಪ್ರಸ್ತುತ ವಿಧಾನಸಭೆ ಚುನಾವಣೆಯ ಟಿಕೆಟ್ ಹಂಚಿಕೆ ಕೇರಳದಲ್ಲಿ ಮಹಿಳೆಯರಿಗೆ ಸ್ಥಾನ ಯಾಕಿಲ್ಲ? ಇಷ್ಟು ಪ್ರಗತಿ ಹೊಂದಿರುವ ರಾಜ್ಯವೂ ಪರಂಪರಾಗತ ಅನ್ಯಾಯ ಮುಂದುವರಿಸುವುದು ಯಾಕೆ ಎಂಬ ಪ್ರಶ್ನೆಯನ್ನು ಹುಟ್ಟಿಸಿದೆ.

ದೇಶದ ಅತ್ಯಂತ ಪ್ರಗತಿಪರ ರಾಜ್ಯಗಳಲ್ಲಿ ಕೇರಳವೂ ಒಂದು. ಶಿಕ್ಷಣ, ಆರೋಗ್ಯ, ಲಿಂಗ ಸಮಾನತೆ ಮತ್ತು ಮಾನವ ಅಭಿವೃದ್ಧಿ ಸೂಚ್ಯಂಕಗಳಲ್ಲಿ () ಕೇರಳ ಉನ್ನತ ಸ್ಥಾನದಲ್ಲಿದೆ. ಅಧಿಕ ಸಾಕ್ಷರತೆ ಇರುವ ರಾಜ್ಯ, ಕಡಿಮೆ ಶಿಶು ಮರಣ ದರ, ದೇಶದ ಮೊದಲ ಕಡು ಬಡತನ ಮುಕ್ತ ರಾಜ್ಯ ಹೀಗೆ ಹಲವು ಸಾಧನೆಗಳು ಕೇರಳದ್ದು. ಎಷ್ಟೇ ಆದರೂ ರಾಜಕೀಯದಲ್ಲಿ ಮಹಿಳೆಯರ ಪ್ರಾತಿನಿಧ್ಯದ ವಿಚಾರಕ್ಕೆ ಬಂದಾಗ ಕೇರಳ ಹಿಂದುಳಿಯುತ್ತದೆ. ಈ ವಿಧಾನಸಭೆ ಚುನಾವಣೆಗೂ ಮುನ್ನ ಟಿಕೆಟ್ ಹಂಚಿಕೆಯು ಕೇರಳದಲ್ಲಿ ಎಡ ಪಕ್ಷಗಳು ಸೇರಿದಂತೆ ಎಲ್ಲ ಪಕ್ಷಗಳು ಮಹಿಳೆಯರನ್ನು ಹೊರಗಿಡುತ್ತಿದೆ ಎಂಬುದನ್ನು ಖಚಿತಪಡಿಸುತ್ತದೆ.

ಹಾಗೆಂದ ಮಾತ್ರಕ್ಕೆ ಕೇರಳದ ರಾಜಕೀಯ ಇತಿಹಾಸದಲ್ಲಿ ಎಂದಿಗೂ ಬಲಿಷ್ಠ ನಾಯಕಿಯರಿಗೆ ಕೊರತೆ ಇರಲಿಲ್ಲ. 1957ರಲ್ಲಿ ಕೇರಳದಲ್ಲಿ ಮೊದಲ ಕಮ್ಯುನಿಸ್ಟ್ ಆಡಳಿತದಲ್ಲಿ ಸಚಿವಾಲಯದ ಭಾಗವಾಗಿದ್ದ ಕೆ ಆರ್ ಗೌರಿ, 1967ರಲ್ಲಿ ಮತ್ತೆ ಸಂಪುಟ ದರ್ಜೆಯ ಹುದ್ದೆಗಳನ್ನು ಅಲಂಕರಿಸಿದರು. 1987ರ ಹೊತ್ತಿಗೆ ಗೌರಿ ಅಮ್ಮ ಮುಖ್ಯಮಂತ್ರಿ ಆಗಬಹುದು ಎಂಬ ಅಭಿಪ್ರಾಯಗಳೂ ಇದ್ದವು. ಆ ಸ್ಥಾನಕ್ಕೆ ಅರ್ಹರಾಗಿದ್ದವರು ಗೌರಿ ಅಮ್ಮ. ಆದರೆ ಸಿಎಂ ಸ್ಥಾನ ಮಾತ್ರ ಅವರಿಗೆ ದಕ್ಕಲಿಲ್ಲ. ಅಂದು ಎಡ ಪಕ್ಷದಲ್ಲಿದ್ದ ಪಿತೃಪ್ರಭುತ್ವವು ಗೌರಿ ಅಮ್ಮನಿಗೆ ಸಿಎಂ ಹುದ್ದೆ ಸಿಗದಂತೆ ಕಾವಲು ಕೂತಿತ್ತು.

ಅದಾದ ಬಳಿಕ ದಶಕಗಳ ನಂತರ ಕೇರಳ ರಾಜಕೀಯದಲ್ಲಿ ಕಾಣಿಸಿಕೊಂಡ ಪ್ರಬಲ ಮಹಿಳಾ ರಾಜಕಾರಣಿ ಕೆ ಕೆ ಶೈಲಜಾ. ರಾಜಕೀಯಕ್ಕೆ ಬರುವ ಮುನ್ನ ಶಿಕ್ಷಕರಾಗಿದ್ದ ಕಾರಣ ಟೀಚರಮ್ಮ ಎಂದೇ ಪ್ರಸಿದ್ಧರಾದವರು ಶೈಲಜಾ. 2016ರಲ್ಲಿ ಪಿಣರಾಯಿ ವಿಜಯನ್ ಸರ್ಕಾರದಲ್ಲಿ ಆರೋಗ್ಯ ಸಚಿವರಾಗಿ ಹಲವು ಬಿಕ್ಕಟ್ಟುಗಳನ್ನು ಅಚ್ಚುಕಟ್ಟಾಗಿ ನಿರ್ವಹಿಸಿದವರು ಟೀಚರಮ್ಮ. ಈ ವಿಚಾರದಲ್ಲಿ ರಾಷ್ಟ್ರಮಟ್ಟದಲ್ಲಿ ಹೆಸರುವಾಸಿಯಾದರು. ಆದರೆ 2021ರ ವೇಳೆಗೆ ಸಿಪಿಐಎಂನ ವಯಸ್ಸಿನ ಮಿತಿ ನಿಯಮದಿಂದಾಗಿ ಸಚಿವ ಸಂಪುಟದಿಂದ ಶೈಲಜಾ ಅವರನ್ನು ಸಚಿವ ಸಂಪುಟದಿಂದ ಹೊರಗಿಡಲಾಯಿತು. ಆದರೆ ಸಿಎಂ ಪಿಣರಾಯಿಗೆ ಮಾತ್ರ ಈ ನಿಯಮದಿಂದ ವಿನಾಯಿತಿ ನೀಡಲಾಯಿತು. ಇದೀಗ ರಾಜಕೀಯ ಬಿಕ್ಕಟ್ಟು ಉಂಟಾಗುವುದನ್ನು ತಡೆಯಲು ಟೀಚರಮ್ಮಗೆ ಟಿಕೆಟ್ ನೀಡಲಾಗಿದೆ. ಪೆರಾವೂರಿನಲ್ಲಿ ಕಾಂಗ್ರೆಸ್ ರಾಜ್ಯ ಮುಖ್ಯಸ್ಥ ಸನ್ನಿ ಜೋಸೆಫ್ ವಿರುದ್ಧ ಕಠಿಣ ಚುನಾವಣೆಯನ್ನು ಎದುರಿಸುವ ಜವಾಬ್ದಾರಿಯನ್ನು ಅವರಿಗೆ ವಹಿಸಲಾಗಿದೆ.

ರಾಜಕೀಯದಲ್ಲಿದೆಯೇ ಲಿಂಗ ಸಮಾನತೆ?

ಲಿಂಗ ಸಮಾನತೆ ಎಂಬುದು ಮಹಿಳೆಯರು ಸದ್ಯ ನಮ್ಮ ಹಕ್ಕು ಎಂದು ಕೇಳಿ ಪಡೆಯಬೇಕಾಗಿದೆ. ಇದು ವೈಯಕ್ತಿಕ ಜೀವನದಲ್ಲಿ ಮಾತ್ರವಲ್ಲ ಸಾಮಾಜಿಕ ಸ್ತರದಲ್ಲಿಯೂ ಮಹಿಳೆಯರಿಗಿರುವ ಸವಾಲು. ಕೇರಳದಲ್ಲಿ ಉನ್ನತ ಮಟ್ಟದ ಮಹಿಳಾ ನಾಯಕಿಯರು ಇದ್ದರೂ ಅವರು ಬರೀ ಪ್ರಾಸಂಗಿಕ ನಾಯಕರು. ಅವರ ನಾಯಕತ್ವಕ್ಕೆ ಬೆಲೆಯೂ ಇಲ್ಲ. ಪ್ರಸ್ತುತ ವಿಧಾನಸಭೆ ಚುನಾವಣೆಯ ಟಿಕೆಟ್ ಹಂಚಿಕೆ ಕೇರಳದಲ್ಲಿ ಮಹಿಳೆಯರಿಗೆ ಸ್ಥಾನ ಯಾಕಿಲ್ಲ? ಇಷ್ಟು ಪ್ರಗತಿ ಹೊಂದಿರುವ ರಾಜ್ಯವೂ ಪರಂಪರಾಗತ ಅನ್ಯಾಯ ಮುಂದುವರಿಸುವುದು ಯಾಕೆ ಎಂಬ ಪ್ರಶ್ನೆಯನ್ನು ಹುಟ್ಟಿಸಿದೆ.

ಎಡ ಪ್ರಜಾಸತ್ತಾತ್ಮಕ ರಂಗ (ಎಲ್‌ಡಿಎಫ್) 140 ಸ್ಥಾನಗಳಲ್ಲಿ ಬರೀ 15 ಮಹಿಳಾ ಅಭ್ಯರ್ಥಿಗಳನ್ನು ಕಣಕ್ಕಿಳಿಸಿದೆ. ಸಿಪಿಐಎಂ 12, ಸಿಪಿಐ 5, ಕೆಸಿಎಂ 1 ಟಿಕೆಟ್ ಅನ್ನು ಮಹಿಳೆಯರಿಗೆ ನೀಡಿದೆ. ಈ ಹಿಂದಿಗಿಂತ ಕೊಂಚ ಸುಧಾರಣೆಯಾಗಿದ್ದರೂ ಸಮಾನತೆಯಿಂದ ಇನ್ನೂ ದೂರವಿದೆ. ಯುಡಿಎಫ್ ಇಲ್ಲಿಯವರೆಗೆ 12 ಮಹಿಳೆಯರಿಗೆ ಮಾತ್ರ ಟಿಕೆಟ್ ನೀಡಿದೆ. ಕಾಂಗ್ರೆಸ್ 9, ಐಯುಎಂಎಲ್ 2, ಆರ್‌ಎಂಪಿಐ ಒಬ್ಬರು ಮಹಿಳೆಯರನ್ನು ಕಣಕ್ಕಿಳಿಸಿದೆ. ಇದನ್ನು ಬಿಟ್ಟರೆ ಎನ್‌ಡಿಎ 18 ಮಹಿಳೆಯರಿಗೆ ಟಿಕೆಟ್ ನೀಡಿದೆ. ಆದರೆ ಈ ಮಹಿಳೆಯರು ಶಾಸಕಿಗಳಾಗುವುದು ಕೊಂಚ ದೂರದ ಮಾತು. ಹೆಚ್ಚಾಗಿ ಯಾವ ಕ್ಷೇತ್ರದಲ್ಲಿ ಯುಡಿಎಫ್, ಎಲ್‌ಡಿಎಫ್ ಅಭ್ಯರ್ಥಿಗಳನ್ನು ಮಣಿಸಲು ಕಷ್ಟವಿದೆಯೋ ಅದೇ ಕ್ಷೇತ್ರದಲ್ಲಿ ಮಹಿಳೆಯರಿಗೆ ಬಿಜೆಪಿ ಟಿಕೆಟ್ ನೀಡಿದೆ.

ಕೇರಳದ ರಾಜಕೀಯ ಪರಂಪರೆಯನ್ನು ನಾವು ನೋಡಿದಾಗಲೂ ಮಹಿಳೆಯರ ಪ್ರಾತಿನಿಧ್ಯದ ಕೊರತೆ ಎದ್ದು ಕಾಣುತ್ತದೆ. 1957ರಿಂದ, ಕೇರಳ ವಿಧಾನಸಭೆಯಲ್ಲಿ ಮಹಿಳೆಯರ ಉಪಸ್ಥಿತಿ ಶೇಕಡ 10 ದಾಟಿರುವುದು ಅತಿ ವಿರಳ. ಪ್ರಸ್ತುತ ವಿಧಾನಸಭೆಯಲ್ಲಿರುವುವ ಮಹಿಳಾ ಪ್ರಾತಿನಿಧ್ಯ ಶೇಕಡ 8. ಇದು ಕೇರಳದ ಸಾಮಾಜಿಕ ಸೂಚಕಗಳಿಗೆ ವ್ಯತಿರಿಕ್ತವಾದುದ್ದು. ಕೇರಳದಲ್ಲಿ ಸಾಕ್ಷರತೆ, ಆರೋಗ್ಯ ಮತ್ತು ಜೀವಿತಾವಧಿಯಲ್ಲಿ ಮಹಿಳೆಯರು ಉತ್ತಮ ಸ್ಥಾನದಲ್ಲಿದ್ದಾರೆ. ಸಾಮಾಜಿಕ ಪ್ರಗತಿ ಇದ್ದರೂ ರಾಜಕೀಯ ಪ್ರಾತಿನಿಧ್ಯ ಮಾತ್ರ ಇಲ್ಲದಾಗಿದೆ.

ಸಾಮಾನ್ಯವಾಗಿಯೇ ಯಾರು ಗೆಲ್ಲಲೂ ಸಾಧ್ಯ ಇದೆಯೋ ಅವರಿಗೆ ಮಣೆ ಹಾಕುವ ತಂತ್ರವನ್ನು ಕೇರಳದಲ್ಲಿ ಎಲ್‌ಡಿಎಫ್, ಯುಡಿಎಫ್ ಮಾಡುತ್ತಾ ಬಂದಿದೆ ಎಂಬ ವಾದವೂ ಇದೆ. ಆದರೆ ಮಹಿಳಾ ಸಂಘಟನೆಗಳು ಮತ್ತು ಇತರೆ ಗುಂಪುಗಳು ಈ ನಿಲುವನ್ನು ಪ್ರಶ್ನಿಸಿದೆ. ರಾಜಕೀಯ ಅನುಕೂಲದ ಹೆಸರಿನಲ್ಲಿ ಮಹಿಳೆಯರಿಗೆ ಪ್ರಾತಿನಿಧ್ಯ ನೀಡದಿರುವುದನ್ನು ಸಹಿಸಲಾಗದು ಎಂದು ಹೇಳಿದೆ. ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ನೀಡದ ಯುಡಿಎಫ್, ಎಲ್‌ಡಿಎಫ್‌ನಲ್ಲಿ ಯಾವ ಸಮಾನತೆ ಇದೆ? ನಾವು ನೋಟಾಗೆ ಮತ ಹಾಕುವುದೇ ಒಳಿತಲ್ಲವೇ ಎಂಬ ಪ್ರಶ್ನೆಗಳನ್ನು ಸಾಮಾಜಿಕ ಜಾಲತಾಣಗಳಲ್ಲಿ ಎತ್ತಲಾಗಿದೆ. ಇದೇ ಸಂದರ್ಭದಲ್ಲಿ ಏನೇ ಆದರೂ ಎನ್‌ಡಿಎಗೆ ಬೆಂಬಲ ನೀಡುವುದಿಲ್ಲ ಎಂಬ ಸ್ಪಷ್ಟ ನಿಲುವು ಎದ್ದು ಕಾಣುತ್ತಿದೆ.

ಈ ಬಗ್ಗೆ ಮಾಧ್ಯಮಗಳಿಗೆ ಪ್ರತಿಕ್ರಿಯಿಸಿರುವ ತ್ರಿಶೂರ್ ಮೂಲದ ವಕೀಲೆ ಮತ್ತು ಸಮಾನ ಪ್ರಾತಿನಿಧ್ಯ ಚಳವಳಿಯ ಪ್ರಮುಖ ಧ್ವನಿಯಾಗಿರುವ ರೇಮಾ ಕೆ, ''ಸಂಸತ್ತಿನಲ್ಲಿ ಮಹಿಳೆಯರಿಗೆ ಶೇ.33ರಷ್ಟು ಮೀಸಲಾತಿ ಅಂಗೀಕರಿಸಿ ಇನ್ನೂ ಜಾರಿಗೆ ತರದ ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ವ್ಯಕ್ತಪಡಿಸಲು ಎಲ್‌ಡಿಎಫ್, ಯುಡಿಎಫ್ ಎರಡೂ ರಂಗಗಳು ಶೇಕಡ 33ರಷ್ಟು ಸ್ಥಾನಗಳಲ್ಲಿ ಮಹಿಳೆಯರನ್ನು ಕಣಕ್ಕಿಳಿಸಬಹುದಿತ್ತು. ಎಲ್‌ಡಿಎಫ್ ಷರತ್ತುಗಳಿಲ್ಲದೆ ಕಾನೂನು ಜಾರಿಗೆ ಒತ್ತಾಯಿಸಿತ್ತು. ಆ ಬೇಡಿಕೆ ಪ್ರಾಮಾಣಿಕವಾಗಿದ್ದರೆ, ಮಹಿಳಾ ಅಭ್ಯರ್ಥಿಗಳನ್ನು ಕಣಕ್ಕಿಳಿಸುವ ಮೂಲಕ ಶೇ.33ರಷ್ಟು ಪ್ರಾತಿನಿಧ್ಯವನ್ನು ಖಚಿತಪಡಿಸಿಕೊಳ್ಳಬಹುದಿತ್ತು. ಪಿತೃಪ್ರಭುತ್ವವನ್ನು ವಿರೋಧಿಸಲು ನಾವು ಧ್ವನಿ ಎತ್ತಬೇಕು'' ಎಂದು ಕರೆ ನೀಡಿದ್ದಾರೆ.

ಹಲವು ರಾಜಕೀಯ ಪಕ್ಷಗಳು ಗೆಲುವಿನ ಇಂಗಿತಕ್ಕೆ ಜೋತು ಬಿದ್ದು ಪುರುಷ ನಾಯಕರುಗಳಿಗೆ ಬೆಂಬಲ ನೀಡುತ್ತಲೇ ಬಂದಿದೆ. ಈ ಮೂಲಕ ಮಹಿಳೆಯರಿಗೆ ತಮ್ಮ ಸ್ಥಾನ ಸ್ಥಾಪಿಸಲು ಅವಕಾಶವನ್ನೂ ನೀಡಲಾಗುತ್ತಿಲ್ಲ. ಗೆಲುವಿನ ಅಸ್ತ್ರವನ್ನು ಮಹಿಳೆಯರಿಗೆ ಸ್ಥಾನ ನಿರಾಕರಣೆಯನ್ನು ಸಮರ್ಥಿಸಲು ಬಳಸಲಾಗುತ್ತಿದೆ ಎಂದು ಸ್ಪಷ್ಟ. ಇನ್ನೊಂದೆಡೆ ಸಾಂಸ್ಕೃತಿಕ ಮತ್ತು ಸಾಂಸ್ಥಿಕ ಅಡೆತಡೆಗಳೂ ಇವೆ. ಇದನ್ನು ದಶಕಗಳ ಹಿಂದೆಯೇ ಗೌರಿ ಅಮ್ಮ ಹೇಳಿದ್ದಾರೆ. ಅವರು ಹೇಳುವಂತೆ, ''ಸೈದ್ಧಾಂತಿಕ ಬದ್ಧತೆಗಳು ಯಾವುದೇ ಸ್ಥಾಪಿತ ಶ್ರೇಣಿಗಳನ್ನು ಕೆಡವಲು ಸಹಾಯ ಮಾಡುವುದಿಲ್ಲ'' ಮಹಿಳೆಯರಲ್ಲಿ ಎಷ್ಟೇ ಸೈದ್ಧಾಂತಿಕ ಬದ್ಧತೆ ಇದ್ದರೂ ಅವರಿಗೆ ಸ್ಥಾನವಿಲ್ಲ.

ಮಹಿಳಾ ನಾಯಕಿಯರಿಗೆ ಅಧಿಕಾರ ಸೀಮಿತ

ಗಂಡು, ಹೆಣ್ಣು ಎಂಬ ಲಿಂಗದ ವಿಚಾರದಲ್ಲಿ ಐತಿಹಾಸಿಕವಾಗಿ ಪ್ರಗತಿಪರ ನಿಲುವನ್ನು ಪ್ರತಿಪಾದಿಸುತ್ತಾ ಬಂದಿರುವ ಎಡಪಂಥೀಯರಲ್ಲಿ, ಚುನಾವಣೆ ವಿಚಾರಕ್ಕೆ ಬಂದಾಗ ವಿರೋಧಾಭಾಸವು ಸ್ಪಷ್ಟವಾಗಿ ಗೋಚರಿಸುತ್ತದೆ. ಎಡರಂಗವು ಹಲವು ನಾಯಕಿಯರನ್ನು ಸೃಷ್ಟಿಸಿದೆ. ಸಾಮೂಹಿಕ ಸಂಘಟನೆಗಳ ಮೂಲಕ ಮಹಿಳಾ ಕಾರ್ಯಕರ್ತರ ಬಲವಾದ ನೆಲೆಯನ್ನು ಹೊಂದಿದೆ. ಆದರೆ ಶಾಸಕಾಂಗ ಪ್ರಾತಿನಿಧ್ಯ, ಅಧಿಕಾರದ ವಿಚಾರಕ್ಕೆ ಬಂದಾಗ ಕೊಂಚ ಹಿಂದುಳಿದಿದೆ. ಇದಕ್ಕೆ ಕೆ ಕೆ ಶೈಲಜಾ ಅವರ ವಿಚಾರ ಸ್ಪಷ್ಟ ಉದಾಹರಣೆ.

ಟೀಚರಮ್ಮ ಜನಪ್ರಿಯತೆ, ಆಡಳಿತಾತ್ಮಕ ಸಾಧನೆಯನ್ನು ವಿಪಕ್ಷಗಳೂ ಹಾಡಿ ಹೊಗಳಿದೆ. ಹಾಗಿದ್ದರೂ ಸಾಂಸ್ಥಿಕ ನಿಯಮಗಳು ಮತ್ತು ಆಂತರಿಕ ವಿಚಾರದಲ್ಲಿ ಶೈಲಜಾ ಇನ್ನಷ್ಟು ಉನ್ನತ ಸ್ಥಾನಕ್ಕೆ ಹೋಗುವುದನ್ನು ತಡೆಯಲಾಗಿದೆ. ಈ ಬಾರಿ ಸಾಂಪ್ರಾದಾಯಿಕವಾಗಿ ಯುಡಿಎಫ್ ಭದ್ರಕೋಟೆಯಾಗಿರುವ ಕಣ್ಣೂರು ಜಿಲ್ಲೆಯ ಪೇರಾವೂರ್ ವಿಧಾನಸಭೆ ಕ್ಷೇತ್ರದಲ್ಲಿ ಶೈಲಜಾ ಅವರನ್ನು ಕಣಕ್ಕಿಳಿಸಲಾಗಿದೆ. ಇದು ಟೀಚರಮ್ಮನ ರಾಜಕೀಯ ಜೀವನದ ಪರೀಕ್ಷೆಯೂ ಹೌದು. ಇದು ಶೈಲಜಾ ಅವರನ್ನು ರಾಜಕೀಯವಾಗಿ ಬದಿಗಿಡುವ ಉದ್ದೇಶಪೂರ್ವಕ ಪ್ರಯತ್ನ ಇದು ಎಂಬುದು ಕೆಲವರ ಆರೋಪ.

ಕಾಂಗ್ರೆಸ್‌ನಲ್ಲಿ ಕೊಂಚ ವಿಭಿನ್ನ. ಆದರೆ ಇದೇ ರೀತಿಯ ಚಿತ್ರಣವಿದೆ. ಕೈ ಪಕ್ಷದಲ್ಲಿ ಮಹಿಳಾ ನಾಯಕಿಯರ ಗುಂಪೇನೋ ಇದೆ. ಆದರೆ ಅವರಲ್ಲಿ ಹಲವರು ಸ್ಥಳೀಯ ಮಟ್ಟದಲ್ಲಿ ಮಾತ್ರ ಸಕ್ರಿಯರು. ರಾಜ್ಯಮಟ್ಟದಲ್ಲಿ ಪ್ರಬಲ ಸ್ಥಾನದಲ್ಲಿ ಮಹಿಳೆಯರನ್ನು ಬಿಂಬಿಸಲು ಇಂದಿಗೂ ಕಾಂಗ್ರೆಸ್ ಹೆಣಗಾಡುತ್ತಿದೆ. ಅಭ್ಯರ್ಥಿ ಆಯ್ಕೆಯು ಸಾಮಾನ್ಯವಾಗಿಯೇ ಆಂತರಿಕ ಬಣ ತಿಕ್ಕಾಟವನ್ನು ಸರಿದೂಗಿಸುವಷ್ಟರಲ್ಲಿಯೇ ಮುಗಿದುಹೋಗುತ್ತದೆ. ಹಾಗಿರುವಾಗ ಮಹಿಳೆಯರಿಗೆ ಅವಕಾಶ ಸಿಗುವುದು ಅತಿ ವಿರಳ.

ಯುಡಿಎಫ್‌ನ ಮತ್ತೊಂದು ಪ್ರಮುಖ ಮಿತ್ರ ಪಕ್ಷ ಇಂಡಿಯನ್ ಯೂನಿಯನ್ ಮುಸ್ಲಿಂ ಲೀಗ್ () ಕಥೆ ಇನ್ನೊಂದು ರೀತಿಯದ್ದು. ಐತಿಹಾಸಿಕವಾಗಿಯೇ ಐಯುಎಂಎಲ್ ಕಠಿಣ ಸಂಪ್ರದಾಯವಾದವನ್ನು ಹೊಂದಿರುವಂತದ್ದು. ಮಹಿಳಾ ಅಭ್ಯರ್ಥಿಗಳನ್ನು ಕಣಕ್ಕಿಳಿಸಿರುವುದು ಬಿಡಿ ವಿಪಕ್ಷಗಳ ಮಹಿಳಾ ಅಭ್ಯರ್ಥಿಗಳ ಬಗ್ಗೆಯೂ ಕೆಟ್ಟದಾಗಿ ಮಾತನಾಡುವ ನಾಯಕರು ಐಯುಎಂಎಲ್‌ನಲ್ಲಿದ್ದಾರೆ. ಇತ್ತೀಚೆಗೆ ಸಿಪಿಐ(ಎಂ) ಶಾಸಕಿ ಯು. ಪ್ರತಿಭಾ ಬಗ್ಗೆ ಸ್ತ್ರೀದ್ವೇಷದ ಹೇಳಿಕೆಯನ್ನು ಎ ಇರ್ಷಾದ್ ನೀಡಿದ್ದು, ಸಾಮಾಜಿಕವಾಗಿ ವಿರೋಧ ವ್ಯಕ್ತವಾಗುತ್ತಿದ್ದಂತೆ ಪಕ್ಷದಿಂದ ತೆಗೆದು ಹಾಕಲಾಗಿದೆ. 2021ರಲ್ಲಿ ಮೊದಲ ಬಾರಿಗೆ ಮಹಿಳಾ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ, ಆದರೆ ಅಭ್ಯರ್ಥಿ ಸೋತಿದ್ದಾರೆ. ಈ ಬಾರಿ ಕೊಂಚ ಮುಂದುವರೆದು ಇಬ್ಬರು ಮಹಿಳೆಯರನ್ನು ಕಣಕ್ಕಿಳಿಸಿದೆ. ಕೊಂಚ ಬದಲಾವಣೆ ಕಂಡರೂ ಈ ಸಂಖ್ಯೆ ಅತಿ ಚಿಕ್ಕದ್ದು.

ಕಾಂಗ್ರೆಸ್ ವಕ್ತಾರೆ ಶಮಾ ಮೊಹಮ್ಮದ್ ಇವೆಲ್ಲವುದರ ಬಗ್ಗೆ ಬಹಿರಂಗವಾಗಿ ಸಾಮಾಜಿಕ ಜಾಲತಾಣದಲ್ಲಿಯೇ ತಮ್ಮ ಅಸಮಾಧಾನವನ್ನು ವ್ಯಕ್ತಪಡಿಸಿದ್ದಾರೆ. ''ನಮ್ಮನ್ನು ತಿರಸ್ಕರಿಸಲಾಗಿದೆ, ಆದರೆ ನಾವು ಸೋತಿಲ್ಲ. ಕೇರಳದಲ್ಲಿ ಕಾಂಗ್ರೆಸ್ ಮಹಿಳೆಯರನ್ನು ಬೆಂಬಲಿಸಬೇಕು ಎಂದು ನಾನು ನನ್ನ ನಾಯಕ ರಾಹುಲ್ ಗಾಂಧಿಯನ್ನು ಗೌರವದಿಂದ ಒತ್ತಾಯಿಸುತ್ತೇನೆ. 92 ಟಿಕೆಟ್‌ಗಳಲ್ಲಿ, ಕೇವಲ 9 ಟಿಕೆಟ್‌ಗಳನ್ನು ಮಹಿಳೆಯರಿಗೆ ನೀಡಲಾಗಿದೆ. ಲೋಕಸಭಾ ಚುನಾವಣೆಯಲ್ಲಿ, 16 ಟಿಕೆಟ್‌ಗಳಲ್ಲಿ ಕೇವಲ 1 ಟಿಕೆಟ್ ಮಹಿಳೆಯರಿಗೆ ನೀಡಲಾಗಿದೆ. ಮಹಿಳೆಯರು ಸಮರ್ಥರಾಗಿದ್ದರೂ ಟಿಕೆಟ್ ನೀಡದಿರುವುದು ತೀವ್ರ ನಿರಾಶಾದಾಯಕ'' ಎಂದು ಬರೆದುಕೊಂಡಿದ್ದಾರೆ.

10 ಕೋಟಿ ಎತ್ತಿಟ್ಟಿದ್ದ ಆರ್‌ಆರ್ 157 ಕಿ.ಮೀ ವೇಗದ ಪರೀಕ್ಷೆ ಗೆದ್ದಿದ್ದ 15ರ ಪೋರ ವೈಭವ್!

12ನೇ ವಯಸ್ಸಿಗೆ ಬಿಹಾರ ಪರ ಮೊದಲ ದರ್ಜೆ ಕ್ರಿಕೆಟ್, 13ನೇ ವಯಸ್ಸಿಗೆ ₹1.1 ಕೋಟಿಗೆ ಐಪಿಎಲ್‌ಗೆ ಎಂಟ್ರಿ, 14ನೇ ವಯಸ್ಸಿಗೆ ಚೊಚ್ಚಲ ಐಪಿಎಲ್‌ನಲ್ಲೇ ಕೇವಲ 35 ಎಸೆತಗಳಲ್ಲಿ ಭರ್ಜರಿ ಶತಕ! ಇಂದು ತಮ್ಮ 15ನೇ ಹುಟ್ಟುಹಬ್ಬ ಆಚರಿಸಿಕೊಳ್ಳುತ್ತಿರುವ ವೈಭವ್ ಸೂರ್ಯವಂಶಿ, ಆಗಲೇ ಕ್ರಿಕೆಟ್ ಲೋಕದ ದಿಗ್ಗಜನಂತೆ ಬೆಳೆದು ನಿಂತಿದ್ದಾರೆ.

ಇತ್ತೀಚೆಗಷ್ಟೇ ಅಂಡರ್ 19 ವಿಶ್ವಕಪ್ ಫೈನಲ್‌ನಲ್ಲಿ 80 ಎಸೆತಗಳಿಗೆ 175 ರನ್ ಚಚ್ಚಿ ಸರಣಿ ಶ್ರೇಷ್ಠ ಪ್ರಶಸ್ತಿ ಗೆದ್ದಿರುವ ಈ ಯುವಕ, ಇದೀಗ ಭಾರೀ ನಿರೀಕ್ಷೆಗಳೊಂದಿಗೆ ತಮ್ಮ ಎರಡನೇ ಐಪಿಎಲ್ ಆಡಲು ಸಜ್ಜಾಗಿದ್ದಾರೆ. ಚಿಕ್ಕ ವಯಸ್ಸಿನಲ್ಲೇ ಅವರ ಮೇಲಿರುವ ನಿರೀಕ್ಷೆಯ ಭಾರ ಅಷ್ಟಿಷ್ಟಲ್ಲ.

ಕೆಲವೊಮ್ಮೆ ನಿರೀಕ್ಷೆಗೂ ಮೀರಿದ ಪ್ರತಿಭೆ ಅರಳಿ ನಿಲ್ಲುತ್ತದೆ. ವೈಭವ್ ಬಳಿ ಅಂಥದ್ದೇ ಅಸಾಧಾರಣ ಪ್ರತಿಭೆಯಿದೆ. 2024ರ ಅಕ್ಟೋಬರ್‌ನಲ್ಲಿ ನಡೆದ ಆಯ್ಕೆ ಪ್ರಕ್ರಿಯೆ (ಟ್ರಯಲ್ಸ್) ನೋಡಿದ್ದೇ ತಡ, ರಾಜಸ್ಥಾನ್ ರಾಯಲ್ಸ್ ತಂಡದ ಕ್ರಿಕೆಟ್ ನಿರ್ದೇಶಕ ಜುಬಿನ್ ಭರೂಚಾ ದಂಗಾಗಿದ್ದರು. ಇತ್ತೀಚಿನ ವರ್ಷಗಳಲ್ಲಿ ಭಾರತ ಕಂಡ ಅತ್ಯಂತ ಶ್ರೇಷ್ಠ ಬ್ಯಾಟಿಂಗ್ ಪ್ರತಿಭೆ ಇವನೇ ಎಂದು ತೀರ್ಮಾನಿಸಿದ ಅವರು, ಹರಾಜಿನಲ್ಲಿ ವೈಭವ್‌ಗಾಗಿ ಬರೋಬ್ಬರಿ ₹10 ಕೋಟಿ ಮೀಸಲಿಡುವಂತೆ ತಂಡಕ್ಕೆ ಸೂಚಿಸಿದ್ದರು. ಈ ಅಚ್ಚರಿಯ ವಿಷಯವನ್ನು ಇಎಸ್‌ಪಿಎನ್ ಕ್ರಿಕ್‌ಇನ್ಫೋ ಜೊತೆ ಭರೂಚಾ ಹಂಚಿಕೊಂಡಿದ್ದಾರೆ. ಕೇವಲ ₹30 ಲಕ್ಷ ಮೂಲಬೆಲೆಯೊಂದಿಗೆ ಹರಾಜಿಗೆ ಬಂದಿದ್ದ ವೈಭವ್‌ಗಾಗಿ ಡೆಲ್ಲಿ ಕ್ಯಾಪಿಟಲ್ಸ್ ತೀವ್ರ ಪೈಪೋಟಿ ನಡೆಸಿತ್ತು. ಆದರೆ ಅಂತಿಮವಾಗಿ ರಾಜಸ್ಥಾನ್ ರಾಯಲ್ಸ್ ಕೇವಲ ₹1.1 ಕೋಟಿಗೆ ಈ ಭರವಸೆಯ ಯುವಕನನ್ನು ತನ್ನ ಬುಟ್ಟಿಗೆ ಹಾಕಿಕೊಂಡಿತು.

ಭರೂಚಾ ಅವರ ಈ ನಿರ್ಧಾರ ಈಗ ಅತ್ಯಂತ ಜಾಣ್ಮೆಯ ಹೂಡಿಕೆ ಎನಿಸುತ್ತಿದೆ. ವಿಶ್ವದ ದಿಗ್ಗಜ ಬ್ಯಾಟರ್‌ಗಳಿಗೆ ಸರಿಸಾಟಿಯಾದ ಬಲ ಹಾಗೂ ಚೆಂಡನ್ನು ಬಡಿದಟ್ಟುವ ತಾಕತ್ತು ವೈಭವ್‌ಗಿದೆ. ವಯಸ್ಸು ಮತ್ತು ಅನುಭವ ಹೆಚ್ಚಾದಂತೆ ಅವರ ಆಟ ಮತ್ತಷ್ಟು ಅದ್ಭುತವಾಗುವುದರಲ್ಲಿ ಅನುಮಾನವಿಲ್ಲ. ನಾಗ್ಪುರ ಬಳಿಯ ತಾಲೇಗಾಂವ್ ಅಕಾಡೆಮಿಯಲ್ಲಿ ನಡೆದ ಟ್ರಯಲ್ಸ್‌ನಲ್ಲಿ, ವೈಭವ್ ಮೊದಲ ಎಸೆತ ಎದುರಿಸಿದಾಗಲೇ ಭರೂಚಾ ಅವರಿಗೆ ಯಶಸ್ವಿ ಜೈಸ್ವಾಲ್ ಮತ್ತು ಸಂಜು ಸ್ಯಾಮ್ಸನ್ ನೆನಪಾಗಿದ್ದರಂತೆ.

Printed and Published by: SUNDAR and Owned by: SUNDAR Printed at: SHILPA PUBLICATIONS AND PRINTING PRESS, No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Published at: No. 5-122/2,Ward No.20, Vidya Nagara Colony, Sirwar-584129, Raichur Dist, Karnataka. Editor: SUNDAR